ಸಂಪುಟ : 10 ಸಂಚಿಕೆ: 155 ಪುಟ : 4+2 ಬೆಲೆ: 3.00 ಗುರುವಾರ ಜುಲೈ 24 2025 Mob : 9448326533- 9019256545 ಗದಗ

ಸಂಪಾದಕರು : ಎಚ್.ಎಮ್. ಶರೀಫನವರ್

# ವಿಜಯ ಸಾಕ್ಷಿ

ವಾಸ್ತವ, ವಸ್ತುನಿಷ್ಠ, ವಿಭಿನ್ನ... VIJAYA SAKSHI KANNADA DAILY ಕನ್ನಡ ದಿನಪತ್ರಿಕೆ




Volume : 10 Issue : 155 Pages : 4+2 Price : 3.00 Thursday July 24 2025 Gadag RNINo:KARKAN/2015/63412 E-mail: vijayasakshidaily@gmail.com Post Regn.No:GDG/72/2023-25

## ವಸ್ತು ಪ್ರದರ್ಶನವನ್ನು ವಿಸ್ತರಿಸಲು ಮನವಿ

■ ವಿಜಯಸಾಕ್ಷಿ ಸುದ್ದಿ, ಗದಗ

ಗದಗ ವೈದ್ಯಕೀಯ ವಿಜ್ಞಾನ ಸಂಸ್ಥೆಯ ದಶಮಾನೋತ್ಸವ ಸಂಭ್ರಮಾಚರಣೆ ನಿಮಿತ್ತ ಹಮ್ಮಿಕೊಂಡಿರುವ ವೈದ್ಯಕೀಯ ವಿಜ್ಞಾನ ವಸ್ತು ಪ್ರದರ್ಶನವನ್ನು ಶನಿವಾರದವರೆಗೂ ವಿಸ್ತರಣೆ ಮಾಡಬೇಕೆಂದು ಉಸ್ತುವಾರಿ ಸಚಿವ ಹೆಚ್.ಕೆ. ಪಾಟೀಲ ಜಿಮ್ಸ್ ನಿರ್ದೇಶಕ ಡಾ. ಬಸವರಾಜ ಬೊಮ್ಮನಹಳ್ಳಿ ಇವರಿಗೆ ಗದಗ ಜಿಲ್ಲಾ ವಿಕಾಸ ವೇದಿಕೆ ಅಧ್ಯಕ್ಷ ವಿಶ್ವನಾಥ ಖಾನಾಪೂರ ವಿನಂತಿಸಿದ್ದಾರೆ.

ಈ ವೈದ್ಯಕೀಯ ವಿಜ್ಞಾನ ಸಂಸ್ಥೆ ಆಯೋಜಿಸಿರುವ ವಸ್ತು ಪ್ರದರ್ಶನ ಅತ್ಯುತ್ತಮವಾಗಿದ್ದು, ಜಿಲ್ಲೆಯ ಜನರಿಗೆ ಬಹಳ ಉಪಯುಕ್ತವಾಗಿದೆ. ಸಾರ್ವಜನಿಕರು, ಶಾಲಾ ವಿದ್ಯಾರ್ಥಿಗಳು ಆರೋಗ್ಯದ ಬಗ್ಗೆ ಅರಿವು ಹೊಂದಲು, ದುಶ್ಚಟಗಳಿಂದ ದೂರವಿರುವಂತೆ ಪ್ರೇರೇಪಿಸಲು, ಮಾನವನ ಶರೀರ ವಿಸ್ಮಯವನ್ನು ಅರಿಯಲು ಸದರಿ ಪ್ರದರ್ಶನ ಮಾರ್ಗದರ್ಶಿಯಾಗಿದೆ ಎಂದು ಅವರು ತಿಳಿಸಿದ್ದಾರೆ.

## ನೂತನ ಕಾರ್ಯಾಲಯದ ಉದ್ಘಾಟನೆ ಜು.27ಕ್ಕೆ

■ ವಿಜಯಸಾಕ್ಷಿ ಸುದ್ದಿ, ಗದಗ

ಗದಗ ಜಿಲ್ಲಾ ಸಜ್ಜನ ಗಾಣಿಗ ಸಮಾಜ ಸುಧಾರಣಾ ಸಂಘದ ವತಿಯಿಂದ ಜು. 27ರಂದು ಬೆಳಿಗ್ಗೆ 11 ಗಂಟೆಗೆ ಮುಳಗುಂದ ರಸ್ತೆಯಲ್ಲಿರುವ ಗದಗ ಜಿಲ್ಲಾ ಸಜ್ಜನ ಗಾಣಿಗ ಸಮಾಜದ ಕಾರ್ಯಾಲಯದಲ್ಲಿ ದಿ. ಶ್ರೀ ಚನ್ನಬಸಪ್ಪ ಗುರಪ್ಪ ಕೊರವನವರ (ಬಡ್ನಿ) ಸಾ. ಹೊಂಬಳ ಇವರ ಸ್ಮರಣಾರ್ಥ ನಿರ್ಮಿಸಿದ ಸಂಘದ ಕಾರ್ಯಾಲಯ ಉದ್ಘಾಟನಾ ಸಮಾರಂಭ, 20ನೇ ವರ್ಷದ ವಾರ್ಷಿಕ ಸರ್ವಸಾಧಾರಣ ▸▸ 3ನೇ ಪುಟಕ್ಕೆ

## ವಚನ ಶ್ರಾವಣ ಪ್ರಾರಂಭೋತ್ಸವ ಇಂದು

■ ವಿಜಯಸಾಕ್ಷಿ ಸುದ್ದಿ, ಗದಗ

ಬಸವದಳ, ಬಸವಕೇಂದ್ರ, ಲಿಂಗಾಯತ ಪ್ರಗತಿಶೀಲ ಸಂಘ ಗದಗ-ಬೆಟಗೇರಿ ಇವುಗಳ ಸಂಯುಕ್ತಾಶ್ರಯದಲ್ಲಿ 'ವಚನ ಶ್ರಾವಣ'ವನ್ನು ಗದಗ-ಬೆಟಗೇರಿ ನಗರದ ಹಲವಾರು ಬಡಾವಣೆಗಳಲ್ಲಿ ಮತ್ತು ಗ್ರಾಮಗಳ ಮನೆ ಮನೆಗಳಲ್ಲಿ ಪ್ರಾರಂಭಿಸಲಾಗುತ್ತಿದ್ದು, ವಿಶ್ವೇಶ್ವರ ಬಡಾವಣೆಯ ಶರಣ ಆಂಜನೇಯ ಬಂಗಾರಪ್ಪ ಕಟಗಿ ಅವರ ನಿವಾಸದಲ್ಲಿ ಜುಲೈ 24ರ ಸಂಜೆ 5.30ಕ್ಕೆ ಉದ್ಘಾಟನೆಗೊಳ್ಳಲಿದೆ.

ಕಾರ್ಯಕ್ರಮದ ಸಾನ್ನಿಧ್ಯವನ್ನು ಪೂಜ್ಯಶ್ರೀ ಮ.ನಿ.ಪ್ರ. ಡಾ. ಮಹಾಂತಬಸವಲಿಂಗ ಸ್ವಾಮಿಗಳು, ಶ್ರೀಗುರು ಬಸವೇಶ್ವರ ಮಠ, ಬೇಲೂರು ಇವರು ವಹಿಸುವರು. ಅಧ್ಯಕ್ಷತೆಯನ್ನು ಬಸವದಳದ ಶರಣ ವಿ.ಕೆ. ಕರೇಗೌಡ್ರ ವಹಿಸುವರು. ಉದ್ಘಾಟಕರಾಗಿ ಜಾಗತಿಕ ಲಿಂಗಾಯತ ಮಹಾಸಭಾದ ಗದಗ ಜಿಲ್ಲಾಧ್ಯಕ್ಷ ಶರಣ ಕೆ.ಎಸ್. ಚೆಟ್ಟಿ ಆಗಮಿಸುವರು. ಅತಿಥಿಗಳಾಗಿ ಲಿಂಗಾಯತ ಪ್ರಗತಿಶೀಲ ಸಂಘದ ಅಧ್ಯಕ್ಷ ಶರಣ ಬಾಲಚಂದ್ರ ಭರಮಗೌಡ್ರ ಆಗಮಿಸುವರು. ಇದೇ ಸಂದರ್ಭದಲ್ಲಿ 'ವಚನ ಶ್ರಾವಣ-2025' ಕಿರು ಹೊತ್ತಿಗೆಯನ್ನು ಬಿಡುಗಡೆಗೊಳಿಸಲಾಗುವುದು.

ವಚನ ಚಿಂತನೆಯನ್ನು ಶರಣ ಅಶೋಕ ಬಿ.ಬರಗುಂಡಿಮಾಡುವರು. ಕಾರಣ ಬಸವದಳ, ಬಸವಕೇಂದ್ರ ಹಾಗೂ ಲಿಂಗಾಯತ ಪ್ರಗತಿಶೀಲ ಸಂಘಗಳ ಸದಸ್ಯರು, ಶರಣ ಸಾಹಿತ್ಯಾಭಿಮಾನಿಗಳು ಹಾಗೂ ಆಸಕ್ತರು ಭಾಗವಹಿಸಬೇಕೆಂದು ಸಂಘಟಕರ ಪರವಾಗಿ ಪ್ರಕಾಶ ಅಸುಂಡಿಯವರು ವಿನಂತಿಸಿದ್ದಾರೆ.

### ಜನನ-ಮರಣ ನೋಂದಣಿ ಪದ್ಧತಿ ಕುರಿತು ಜಿಲ್ಲಾ ಮಟ್ಟದ ಸಮನ್ವಯ ಸಮಿತಿ ಸಭೆಯಲ್ಲಿ ಡಿಸಿ ಸಿ.ಎನ್. ಶ್ರೀಧರ್

# ನೋಂದಣಿ ಪ್ರಕ್ರಿಯೆ ತ್ವರಿತಗತಿಯಲ್ಲಿ ಸಾಗಲಿ

■ ವಿಜಯಸಾಕ್ಷಿ ಸುದ್ದಿ, ಗದಗ

ಜಿಲ್ಲೆಯಲ್ಲಿ ಜನನ ಮತ್ತು ಮರಣ ನೋಂದಣಿ ಪ್ರಕ್ರಿಯೆಗಳಲ್ಲಿ ವಿಳಂಬ ಮಾಡದೇ ತ್ವರಿತಗತಿಯಲ್ಲಿ ಸಾಗಲಿ ಎಂದು ಜಿಲ್ಲಾಧಿಕಾರಿ ಸಿ.ಎನ್. ಶ್ರೀಧರ್ ತಿಳಿಸಿದರು.

ನಗರದ ಜಿಲ್ಲಾಧಿಕಾರಿಗಳ ಕಚೇರಿ ಸಭಾಭವನದಲ್ಲಿ ಬುಧವಾರ ಜರುಗಿದ ಜನನ ಮತ್ತು ಮರಣ ನೋಂದಣಿ ಪದ್ಧತಿ ಕುರಿತು ಜರುಗಿದ ಜಿಲ್ಲಾ ಮಟ್ಟದ ಸಮನ್ವಯ ಸಮಿತಿ ಸಭೆಯ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿದರು.

ಜಿಲ್ಲಾ ಸಂಖ್ಯಾ ಸಂಗ್ರಹಣಾಧಿಕಾರಿ ಎ.ಎ. ಕಂಬಾಳಿಮಠ ಮಾತನಾಡಿ, ಜಿಲ್ಲೆಯಲ್ಲಿ ಏಪ್ರಿಲ್ 2025ರಿಂದ ಜೂನ್ 2025ರವರೆಗೆ 2505 ಜನನಗಳು ನಿಗದಿತ ಸಮಯದಲ್ಲಿ ನೋಂದಣಿಯಾಗಿದ್ದು, ಶೇ 55.38ರಷ್ಟು ಹಾಗೂ 1925 ಮರಣಗಳು ನಿಗದಿತ ಸಮಯದಲ್ಲಿಯೇ ನೋಂದಣಿಯಾಗಿ ಶೇ.78ರಷ್ಟು ಪ್ರಗತಿ ಸಾಧಿಸಲಾಗಿದೆ. ಪ್ರಾಧಿಕಾರದ ಅನುಮತಿಯಿಲ್ಲದೆ ನೋಂದಣಿ ಪ್ರಕ್ರಿಯೆಲ್ಲಿ ವಿಳಂಬವಾಗಬಾರದು. ಸರ್ಕಾರಕ್ಕೆ ಹಣ ಜಮೆ ಮಾಡಿದ ಚಲನ್ ಪ್ರತಿಗಳನ್ನು ಇ-ಜನ್ಮ ತಂತ್ರಾಂಶದಲ್ಲಿ ಅಪ್ಲೋಡ್ ಮಾಡಬೇಕು ಎಂದ ಅವರು, 2025ರಲ್ಲಿ ತಾಲೂಕು



ಮಟ್ಟದ ಸಮನ್ವಯ ಸಮಿತಿ ಸಭೆ ಜರುಗಿಸಿದ ವಿವರ ಹಾಗೂ ಜನನ ಮತ್ತು ಮರಣ ನೋಂದಣಿ ಪ್ರಕ್ರಿಯೆ ವಿಭಾಗದ ಮಾಹಿತಿಯನ್ನು ಸಭೆಗೆ ನೀಡಿದರು.

ಈ ಸಂದರ್ಭದಲ್ಲಿ ಅಪರ ಜಿಲ್ಲಾಧಿಕಾರಿ ಅನ್ನಪೂರ್ಣ ಎಂ, ಜಿ.ಪಂ ಉಪ ಕಾರ್ಯದರ್ಶಿ ಸಿ.ಆರ್. ಮುಂಡರಗಿ, ನಗರಾಭಿವೃದ್ಧಿ ಕೋಶದ ಯೋಜನಾ ನಿರ್ದೇಶಕ ಬಸನಗೌಡ ಕೊಟ್ಟೂರು, ಜಂಟಿ ಕೃಷಿ ನಿರ್ದೇಶಕಿ ತಾರಾಮಣಿ ಜಿ.ಎಚ್, ಕೆ.ಎಚ್. ಪಾಟೀಲ ವೈದ್ಯಕೀಯ ವಿಜ್ಞಾನಗಳ ಸಂಸ್ಥೆಯ ಡಾ.ರೇಖಾ ಸೋನಾವಣೆ, ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಅಧಿಕಾರಿ ಡಾ. ಎಸ್.ಎಸ್. ನೀಲಗುಂದ, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ ಉಪನಿರ್ದೇಶಕಿ ಪದ್ಮಾವತಿ ಜಿ, ಡಿಡಿಎಲ್‌ಆರ್ ರುದ್ರಣ್ಣಗೌಡ ಜಿ.ಜೆ. ವಾರ್ತಾಧಿಕಾರಿ ವಸಂತ ಮಡ್ಲೂರ, ಎಲ್ಲಾ ತಾಲೂಕಿನ ತಹಸೀಲ್ದಾರರು, ಸ್ಥಳೀಯ ಸಂಸ್ಥೆಗಳ ಮುಖ್ಯಾಧಿಕಾರಿಗಳು, ವಿವಿಧ ಅಧಿಕಾರಿಗಳು ಹಾಜರಿದ್ದರು.

> ಜಿಲ್ಲೆಯಲ್ಲಿ ಜನನ ಮತ್ತು ಮರಣ ನೋಂದಣಿ ಪ್ರಕ್ರಿಯೆಯಲ್ಲಿ ಸರಿಯಾಗಿ ಮಾಹಿತಿದಾರರ ಹೆಸರು ಮತ್ತು ಸಹಿಯನ್ನು ಸಂಗ್ರಹಿಸಬೇಕು ಮತ್ತು ಅರ್ಜಿದಾರರ ಶುಲ್ಕವನ್ನು ನಿಯಮಿತವಾಗಿ ಸರಕಾರಕ್ಕೆ ಜಮೆ ಮಾಡಬೇಕು. ನೋಂದಣಿ ಪ್ರಮಾಣ ಪತ್ರದಲ್ಲಿ ನೋಂದಣಾಧಿಕಾರಿಗಳ ರುಜು ಕಡ್ಡಾಯವಾಗಿರಬೇಕು ಹಾಗೂ ತಾಲೂಕ ಮಟ್ಟದ ಜನನ ಮತ್ತು ಮರಣ ಸಮನ್ವಯ ಸಮಿತಿ ಸಭೆಗಳು ಕಡ್ಡಾಯವಾಗಿ ಜರುಗಿಬೇಕು ಎಂದು ಡಿಸಿ ಸೂಚಿಸಿದರು.

### ಸಚಿವ ಎಚ್.ಕೆ. ಪಾಟೀಲ ಅಧ್ಯಕ್ಷತೆಯಲ್ಲಿ ಜಿಲ್ಲೆಯ ಸಮಗ್ರ ಪ್ರವಾಸೋದ್ಯಮ ಅಭಿವೃದ್ಧಿ ಕುರಿತು ಸುದೀರ್ಘ ಚರ್ಚೆ

# ಜಿಲ್ಲಾ ಪ್ರವಾಸೋದ್ಯಮಕ್ಕೆ ಅಗತ್ಯಾನುಸಾರ ಅನುದಾನ

■ ವಿಜಯಸಾಕ್ಷಿ ಸುದ್ದಿ, ಗದಗ

ಲಕ್ಕುಂಡಿ ಪ್ರವಾಸೋದ್ಯಮ ಉತ್ತೇಜಿಸುವ ದೃಷ್ಟಿಯಿಂದ ಪ್ರವಾಸಿಗರು ಸಂಚರಿಸುವ ಮಾರ್ಗದ ನೀಲನಕ್ಷೆ ತಯಾರಿಸುವುದು ಸೂಕ್ತ. ಮೂಲಭೂತ ಸೌಕರ್ಯ ಅಭಿವೃದ್ಧಿಗೆ ಒತ್ತು ನೀಡಬೇಕು. ಬಜೆಟ್‌ನಲ್ಲಿ ಘೋಷಣೆಯಂತೆ ರಾಜ್ಯದಲ್ಲಿ 10 ಪ್ರವಾಸೋದ್ಯಮ ಕ್ಷೇತ್ರ ಅಭಿವೃದ್ಧಿಗೆ 50 ಕೋಟಿ ರೂ ಅನುದಾನ ಮೀಸಲಿದೆ. ಬಜೆಟ್‌ನ 5 ಕೋಟಿಯಲ್ಲಿ ಲಕ್ಕುಂಡಿಯಲ್ಲಿ ಮೂಲಭೂತ ಸೌಕರ್ಯ ಮತ್ತು ಇತರೆ ಕ್ಷೇತ್ರಗಳ ಅಭಿವೃದ್ಧಿ ನೀಲನಕ್ಷೆ ತಯಾರಿಸಬಹುದು. ಪ್ರವಾಸೋದ್ಯಮ ಅಭಿವೃದ್ಧಿಪಡಿಸಲು ಆದ್ಯತಾ ಪಟ್ಟಿ ಸಲ್ಲಿಸಬೇಕೆಂದು ಪ್ರವಾಸೋದ್ಯಮ ಸಚಿವ ಎಚ್.ಕೆ. ಪಾಟೀಲ ಅಧಿಕಾರಿಗಳಿಗೆ ಸೂಚಿಸಿದರು.

ಜಿಲ್ಲೆಯ ಪ್ರವಾಸೋದ್ಯಮ ಅಭಿವೃದ್ಧಿಗೆ 804 ಕೋಟಿ ರೂ. ವೆಚ್ಚದಲ್ಲಿ ತಯಾರಿಸಿದ ನೀಲನಕ್ಷೆ ಅನುಸಾರ ಮಂಗಳವಾರ ಜಿಲ್ಲಾಡಳಿತ ಭವನದಲ್ಲಿ ನಡೆದ ಸಭೆಯಲ್ಲಿ ಸಚಿವರು ಮಾತನಾಡುತ್ತಿದ್ದರು.

ಲಕ್ಕುಂಡಿಯ ಕಾಶಿ ವಿಶ್ವನಾಥ ದೇವಾಲಯ ಹತ್ತಿರದಲ್ಲಿ ಪ್ರವಾಸಿಗರ ಮೂಲಭೂತ ಸೌಕರ್ಯಕ್ಕಾಗಿ ಭೂಮಿ ಲಭ್ಯತೆ ಮತ್ತು ಅನುದಾನ ಇದೆ. ಜತೆಗೆ ಗದಗ ಕೊಪ್ಪಳ ಹೆದ್ದಾರಿಯಲ್ಲೂ ಮೂಲಭೂತ ಸೌಕರ್ಯ (ಶೌಚಾಲಯ) ನಿರ್ಮಾಣ ಮಾಡಬಹುದು ಎಂದು ಅಧಿಕಾರಿಗಳು ಸಭೆಗೆ ತಿಳಿಸಿದರು. ಲಕ್ಕುಂಡಿಯಲ್ಲಿ ಮಾಹಿತಿ ಫಲಕಗಳು ಮತ್ತು ಇತಿಹಾಸ ಕ್ಷೇತ್ರಗಳ ಮೇಲೆ ಬೆಳಕು ಚೆಲ್ಲಲು 5 ಪುಸ್ತಕ ಪ್ರಕಟನೆ, ಪುನರ್ ಮುದ್ರಣ, ಲಕ್ಕುಂಡಿ ಮಾಹಿತಿ ಕೈಪಿಡಿ ಮುದ್ರಣ ಮತ್ತು ಲಕ್ಕುಂಡಿಗೆ



ಸಂಬಂಧಿಸಿದಂತೆ 10 ವಿಡಿಯೋಗಳ ನಿರ್ಮಾಣಕ್ಕೆ 89 ಲಕ್ಷ ರೂ. ಪ್ರಸ್ತಾವನೆ ಸಲ್ಲಿಸಲಾಗಿತ್ತು. ಅದರಲ್ಲಿ 50 ಲಕ್ಷ ರೂ.ಗಳಿಗೆ ಆಡಳಿತಾತ್ಮಕ ಅನುಮೋದನೆ ದೊ-ರೆತಿದೆ ಎಂದು ಅಧಿಕಾರಿಗಳು ಮಾಹಿತಿ ನೀಡಿದಾಗ, ಶೀಘ್ರವೇ ಈ ಕಾರ್ಯವವನ್ನು ಆರಂಭಿಸಲು ಸಚಿವರು ಸೂಚಿಸಿದರು.

ಗೋವಾದಿಂದ ಗದಗ-ಕೊಪ್ಪಳ ಮಾರ್ಗವಾಗಿ ಹಂಪಿಗೆ ತೆರಳುವ ಪ್ರವಾಸಿಗರ ಸಂಖ್ಯೆ ಅಧಿಕವಿದೆ. ಹಾಗಾಗಿ ಲಕ್ಕುಂಡಿ ಸಮೀಪದ ಹೆದ್ದಾರಿ ಮಾರ್ಗದಲ್ಲಿ ನಾಮಫಲಕ ಅಳವಡಿಸಲು ಸೂಚಿಸಲಾಯಿತು. ಲಕ್ಕುಂಡಿ ಒಳ ಬರುವ ಮತ್ತು ಹೊರ ಹೋಗುವ ಹೆದ್ದಾರಿಯಲ್ಲಿ ಎರಡು ಪ್ರವೇಶ ದ್ವಾರಗಳ ನಿರ್ಮಾಣದ ವಿಷಯವೂ ಚರ್ಚೆಯಾಯಿತು. ಸಭೆಯಲ್ಲಿ ಗದಗ-ಬೆಟಗೇರಿ ನಗರಾಭಿವೃದ್ಧಿ ಪ್ರಾಧಿಕಾರದ ಅಧ್ಯಕ್ಷ ಅಕ್ಬರ್‌ಸಾಬ್ ಬಬರ್ಚಿ, ಜಿಲ್ಲಾ ಗ್ಯಾರಂಟಿ ಯೋಜನೆಗಳ ಅನುಷ್ಠಾನ ಪ್ರಾಧಿಕಾರದ ಅಧ್ಯಕ್ಷ ಬಿ.ಬಿ. ಅಸೂಟಿ, ಪ್ರವಾಸೋದ್ಯಮ ಅಭಿವೃದ್ಧಿ ಸಮಿತಿ ಸದಸ್ಯರುಗಳಾದ ಜೆ.ಕೆ. ಜಮಾದಾರ, ಆರ್. ಆರ್. ಓದುಗೌಡರ, ವಿವೇಕಾನಂದ ಗೌಡ ಪಾಟೀಲ, ಗೀತಾಂಜಲಿ ರಾವ್, ಅ.ದ. ಕಟ್ಟಿಮನಿ, ಕಿಶೋರ್ ಬಾಬು ನಾಗರಕಟ್ಟಿ ಅವರು ಸಮಗ್ರವಾಗಿ ಚರ್ಚಿಸಿದರು.

> ಲಕ್ಕುಂಡಿಯಲ್ಲಿ ಐತಿಹಾಸಿಕ ದೇವಸ್ಥಾನಗಳ ರಕ್ಷಣೆ ಮತ್ತು ಪುನರುಜ್ಜೀವನ ಕುರಿತು 7ರಿಂದ 8 ಮನೆಗಳ ಮೌಲ್ಯವನ್ನು ಗುರುತಿಸಿ, ಪರಿಹಾರ ನೀಡಿ ಸ್ಥಳಾಂತರಿಸಬೇಕಿದೆ. ಈ ಬಗ್ಗೆ ಸರ್ಕಾರಕ್ಕೆ ಪ್ರಸ್ತಾವನೆ ಸಲ್ಲಿಸಲಾಗಿದೆ ಎಂದು ಅಧಿಕಾರಿಗಳು ಮಾಹಿತಿ ನೀಡಿದರು. ಲಕ್ಕುಂಡಿಯೊಂದಿಗೆ ಕಪ್ಪತಗುಡ್ಡದಲ್ಲಿ ಫುಡ್ ಕಾರ್ನರ್, ಸಫಾರಿ ಆರಂಭಿಸುವ ಮತ್ತು ಬಿಂಕದಕಟ್ಟಿ ಝೂನಲ್ಲಿ ನೈಟ್ ಸಫಾರಿ ಜೀಪ್ ಆರಂಭಿಸುವುದಕ್ಕೆ ಸಚಿವರು ಸೂಚಿಸಿದರು.

ಸಭೆಯಲ್ಲಿ ಜಿಲ್ಲಾಧಿಕಾರಿ ಸಿ.ಎನ್. ಶ್ರೀಧರ, ಪ್ರವಾಸೋದ್ಯಮ ಇಲಾಖೆ ಆಯುಕ್ತ ಕೆ.ವಿ. ರಾಜೇಂದ್ರಕುಮಾರ, ಜಿ.ಪಂ ಸಿಇಓ ಭರತ್ ಎಸ್, ಎಸ್‌ಪಿ ರೋಹನ್ ಜಗದೀಶ, ಡಿಸಿಎಫ್ ಸಂತೋಷ ಕುಮಾರ, ಪ್ರವಾಸೋದ್ಯಮ ಇಲಾಖೆ ಜಂಟಿ ಆಯುಕ್ತ ಶ್ರೀನಿವಾಸ್, ಜಂಟಿ ನಿರ್ದೇಶಕ ಜನಾರ್ಧನ, ಅರಣ್ಯ ವಸತಿ, ವಿಹಾರ ಧಾಮಗಳ ಸಂಸ್ಥೆಯ ವ್ಯವಸ್ಥಾಪಕ ನಿರ್ದೇಶಕ ಪ್ರಶಾಂತ್ ಸಂಖಿಮಠ, ಪುರಾತತ್ವ ಇಲಾಖೆ ಆಯುಕ್ತ ಎ. ದೇವರಾಜ್, ಮಂಜುನಾಥ್ ಚೌಹಾಣ್, ನಾಗರಾಜ್ ಹಂಪಿ, ಲಕ್ಕುಂಡಿ ಪ್ರಾಧಿಕಾರದ ಆಯುಕ್ತ ಶರಣು ಗೋಗೇರಿ, ಸದಸ್ಯ ಸಿದ್ದು ಪಾಟೀಲ, ಅಶೋಕ ಮಂದಾಲಿ, ಪ್ರವಾಸೋದ್ಯಮ ಇಲಾಖೆ ಅಧಿಕಾರಿ ಕೊಟ್ರೇಶ್ವರ ವಿಭೂತಿ, ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಅಧಿಕಾರಿ ವೀರಯ್ಯಸ್ವಾಮಿ, ವಾರ್ತಾಧಿಕಾರಿ ವಸಂತ ಮಡ್ಲೂರ ಮುಂತಾದವರಿದ್ದರು.

## ಶರಣ ಚರಿತಾಮೃತ ನಾಳೆಯಿಂದ

■ ವಿಜಯಸಾಕ್ಷಿ ಸುದ್ದಿ, ಗದಗ

ನಗರದ ಒಕ್ಕಲಗೇರಿ ಓಣಿ ಶ್ರೀ ರಾಯಚೋಟಿ ವೀರಭದ್ರೇಶ್ವರ ದೇವಸ್ಥಾನದ ಆವರಣದಲ್ಲಿ ಶ್ರಾವಣ ಮಾಸದ ನಿಮಿತ್ತ ಜುಲೈ 25ರಿಂದ ಆಗಸ್ಟ್ 28ರವರೆಗೆ ಶರಣ ಚರಿತಾಮೃತ ಪ್ರವಚನವನ್ನು ಏರ್ಪಡಿಸಲಾಗಿದೆ.

ಗದುಗಿನ ಆಧ್ಯಾತ್ಮ ವಿದ್ಯಾಶ್ರಮದ ಪೂಜ್ಯ ಶ್ರೀ ಶಿವಶರಣೆ ಡಾ.



ನೀಲಮ್ಮತಾಯಿಯವರು ಪ್ರತಿದಿನ ಸಾಯಂಕಾಲ 7 ಗಂಟೆಯಿಂದ 8.30ರವರೆಗೆ ಪ್ರವಚನ ನೀಡಲಿದ್ದು, ಕಾರ್ಯಕ್ರಮಕ್ಕೆ ಸರ್ವರೂ ಆಗಮಿಸಬೇಕೆಂದು ಟ್ರಸ್ಟ್ ಕಮಿಟಿಯ ಚೇರಮನ್ ಎಸ್.ಎ. ಮೊರಬದ ವಕೀಲರು, ಪುರಾಣ ಸಮಿತಿಯ ಅಧ್ಯಕ್ಷ ಶೇಖಪ್ಪ ಹೊಂಬಳ, ಸತ್ಸಂಗದ ಪ್ರಮುಖರಾದ ಸುನಂದಾ ಜೋಬಾಳೆ ವಿನಂತಿಸಿದ್ದಾರೆ.

## ಮುಳಗುಂದ: ಸಾರ್ವಜನಿಕರ ಗಮನಕ್ಕೆ

■ ವಿಜಯಸಾಕ್ಷಿ ಸುದ್ದಿ, ಗದಗ

ಮುಳಗುಂದ ಪಟ್ಟಣ ಪಂಚಾಯತ್ ವ್ಯಾಪ್ತಿಯಲ್ಲಿ ಬರುವ ಕೇಂದ್ರ ವಸತಿ ಮತ್ತು ನಗರ ವ್ಯವಹಾರಗಳ ಮಂತ್ರಾಲಯ ಭಾರತ ಸರ್ಕಾರ ನವದೆಹಲಿ ಅವರು ನ್ಯೂ ಅರ್ಬನ್ ಪೂವರ್ಟಿ ಅಲಿವೇಷನ್ ಮಿಷನ್ ಅಭಿಯಾನವನ್ನು ಅನುಷ್ಠಾನಗೊಳಿಸಲು ಯೋಜನೆ ರೂಪಿಸುತ್ತಿದೆ. 2025-26ನೇ ಸಾಲಿನ ರಾಷ್ಟ್ರೀಯ ಜೀವನೋಪಾಯ ಅಭಿಯಾನ ನಿರ್ದೇಶಕರ ಪತ್ರದ ಅನ್ವಯ ಕಟ್ಟಡ ಮತ್ತು ಇತರೆ ನಿರ್ಮಾಣ ಕಾರ್ಮಿಕರು, ಮಿಷೋ, ಅಮೆಜಾನ್, ಫ್ಲಿಪ್ ಕಾರ್ಟ್, ಡುಂಜೋ ಮತ್ತು ಆರೈಕೆ ಕೆಲಸಗಾರರು, ತ್ಯಾಜ್ಯ ಕೆಲಸಗಾರರು, ಮನೆ ಕೆಲಸಗಾರರು, ಸಾರಿಗೆ ಕಾರ್ಮಿಕರು, ಸರಕು ಸಾಗಾಣಿಕೆ ವಾಹನ ಚಾಲಕರ ಸಂಘ ಇತ್ಯಾದಿ ಕಾರ್ಮಿಕರ ದತ್ತಾಂಶ ಸಂಗ್ರಹಣೆ ಮಾಡಲು ಅಭಿಯಾನ ನಿರ್ದೇಶಕರ ನಿರ್ದೇಶನದನ್ವಯ 2025ರ ಜುಲೈ-30ರಂದು ಕಚೇರಿ ವೇಳೆಯಲ್ಲಿ ದಾಖಲೆಗಳನ್ನು ಸಲ್ಲಿಸಲು ಕೊನೆಯ ದಿನವಾಗಿರುತ್ತದೆ.

ಹೆಚ್ಚಿನ ಮಾಹಿತಿಗಾಗಿ ಮುಳಗುಂದ ಪಟ್ಟಣ ಪಂಚಾಯತಿಯ ಡೇ-ನಲ್ಮ್ ವಿಭಾಗದಲ್ಲಿ ಕೇಳಿ ಪಡೆಯಬಹುದಾಗಿದೆ ಎಂದು ಮುಳಗುಂದ ಪಟ್ಟಣ ಪಂಚಾಯತಿ ಕಾರ್ಯಾಲಯದ ಪ್ರಕಟಣೆ ತಿಳಿಸಿದೆ.

## ಅರ್ಜಿ ಆಹ್ವಾನ

■ ವಿಜಯಸಾಕ್ಷಿ ಸುದ್ದಿ, ಗದಗ

ಡಿ.ದೇವರಾಜ ಅರಸು ಹಿಂದುಳಿದ ವರ್ಗಗಳ ಅಭಿವೃದ್ಧಿ ನಿಗಮದಿಂದ 2025-26ನೇ ಸಾಲಿನಲ್ಲಿ ವಿದೇಶಿ ವಿಶ್ವವಿದ್ಯಾಲಯಗಳಲ್ಲಿ ಉನ್ನತ ವ್ಯಾಸಂಗಕ್ಕೆ ಸಾಲ ಯೋಜನೆಗೆ ಆನ್ ಲೈನ್ ಮೂಲಕ ಅರ್ಜಿ ಆಹ್ವಾನಿಸಲಾಗಿದೆ.

ವಿದೇಶಿ ವಿಶ್ವ ವಿದ್ಯಾಲಯಗಳಲ್ಲಿ ಉನ್ನತ ವ್ಯಾಸಂಗ ಮಾಡಲು ವಿದೇಶಿ ವಿಶ್ವ ವಿದ್ಯಾಲಯಗಳಲ್ಲಿ ಪಿ.ಹೆಚ್.ಡಿ. ಪೋಸ್ಟ್ ಡಾಕ್ಟರ್ ಮತ್ತು ಮಾಸ್ಟರ್ ಡಿಗ್ರಿ (ಇಂಜಿನಿಯರಿಂಗ್ & ಟೆಕ್ನಾಲಜಿ, ಮ್ಯಾನೇಜ್ ಮೆಂಟ್ & ಕಾಮರ್ಸ್, ಸೈನ್ಸ್ & ಟೆಕ್ನಾಲಜಿ, ಅಗ್ರಿಕಲ್ಚರ್ & ಅಲೈಡ್ ಸೈನ್ಸ್/ಟೆಕ್ನಾಲಜಿ, ಮೆಡಿಸಿನ್, ಹ್ಯುಮ್ಯಾನಿಟೀಸ್ & ಸೋಸಿಯಲ್ ಸೈನ್ಸ್) ವ್ಯಾಸಂಗಕ್ಕೆ ಪ್ರವೇಶ ಪಡೆದ ಹಿಂದುಳಿದ ವರ್ಗಗಳ ಪ್ರವರ್ಗ-1, 2ಎ, 3ಎ ಮತ್ತು 3ಬಿಗೆ ಸೇರಿದವರಾಗಿರಬೇಕು. ಕುಟುಂಬದ ವಾರ್ಷಿಕ ಆದಾಯ ಗರಿಷ್ಠ 15.00ಲಕ್ಷ ರೂ.ಗಳ ಮಿತಿಯಲ್ಲಿರಬೇಕು. ವಿದ್ಯಾರ್ಥಿಗಳು ಅರ್ಹತಾ ಪರೀಕ್ಷೆಯಲ್ಲಿ ಶೇ.60ಕ್ಕಿಂತಲೂ ಹೆಚ್ಚಿನ ಅಂಕ ಪಡೆದಿರಬೇಕು.

ಸೇವಾ ಸಿಂಧು ತಂತ್ರಾಂಶದಲ್ಲಿ ಆನ್‌ಲೈನ್ ಮೂಲಕ ಅರ್ಜಿಗಳನ್ನು ಆಹ್ವಾನಿಸಲಾಗಿದ್ದು, ಅರ್ಜಿ ಸಲ್ಲಿಸುವಾಗ ಅರ್ಜಿದಾರರು ಆಧಾರ್ ಜೋಡಣೆಯಾದ ಚಾಲ್ತಿಯಲ್ಲಿರುವ ಬ್ಯಾಂಕ್ ಖಾತೆ ಹೊಂದಿರಬೇಕು. ಆಧಾರ್ ಕಾರ್ಡ್ ನಲ್ಲಿರುವಂತೆ ಅರ್ಜಿದಾರರ ಹೆಸರು, ಇತರೆ ದಾಖಲಾತಿಗಳಾದ ಜಾತಿ ಮತ್ತು ಆದಾಯ ಪ್ರಮಾಣ ಪತ್ರ, ಬ್ಯಾಂಕ್ ಪಾಸ್ ಪುಸ್ತಕದಲ್ಲಿಯೂ ಇದ್ದು ಹೊಂದಾಣಿಕೆಯಾಗಬೇಕು.

ಒಂದು ಬಾರಿ ನಿಗಮದ ಯಾವುದಾದರೂ ಯೋಜನೆಯಲ್ಲಿ ಪ್ರಯೋಜನ ಪಡೆದಿದ್ದಲ್ಲಿ ಅಂತಹವರು ಹಾಗೂ ಅವರ ಕುಟುಂಬದವರು ಮತ್ತೊಮ್ಮೆ ಸೌಲಭ್ಯ ಕೋರಿ ಅರ್ಜಿ ಸಲ್ಲಿಸಲು ಅರ್ಹರಿರುವುದಿಲ್ಲ.

ಮೇಲ್ಕಂಡ ಸೌಲಭ್ಯಗಳನ್ನು ಪಡೆಯಲು ಇಚ್ಛಿಸುವ ಹಿಂದುಳಿದ ವರ್ಗಗಳ ಅರ್ಜಿದಾರರು ಅರ್ಜಿಗಳನ್ನು ಸೇವಾಸಿಂಧು ಪೋರ್ಟ¯ï http://sevasindhu.karnataka.gov.in ಮುಖಾಂತರ ಗ್ರಾಮ ಒನ್, ▸▸ 3ನೇ ಪುಟಕ್ಕೆ

## ವಿದ್ಯಾರ್ಥಿ ಸಂಘದ ಪದಾಧಿಕಾರಿಗಳ ಆಯ್ಕೆ


■ ವಿಜಯಸಾಕ್ಷಿ ಸುದ್ದಿ, ಗದಗ

ಇಲ್ಲಿನ ವಿ.ಡಿ.ಎಸ್ ಬಾಲಕಿಯರ ಪದವಿಪೂರ್ವ ಕಾಲೇಜಿನ ವಿದ್ಯಾರ್ಥಿ ಸಂಘದ ವಿವಿಧ ವಿಭಾಗಗಳ ಕಾರ್ಯದರ್ಶಿಗಳ ಆಯ್ಕೆ ಚುನಾವಣೆ ನಡೆಯಿತು. ಕಾಲೇಜಿನ ಮತದಾರರ ಸಾಕ್ಷರತಾ ಕ್ಲಬ್ ಸಹಯೋಗದೊಂದಿಗೆ ಚುನಾವಣೆಯ ಪ್ರಕ್ರಿಯೆ ಕುರಿತು ಕ್ಲಬ್ ಕಾರ್ಯದರ್ಶಿ ಪ್ರೊ. ಬಿ.ಬಿ. ಮಿರ್ಜಿ ತಿಳಿಸಿಕೊಟ್ಟರು.

ಪ್ರಧಾನ ಕಾರ್ಯದರ್ಶಿಯಾಗಿ ಪವಿತ್ರಾ ಇಬ್ರಾಹಿಂಪುರ, ಕ್ರೀಡಾ ಕಾರ್ಯದರ್ಶಿಯಾಗಿ ಸಕ್ಕುಬಾಯಿ ಲಮಾಣಿ, ಸಾಂಸ್ಕೃತಿಕ ಕಾರ್ಯದರ್ಶಿಯಾಗಿ ಭೂಮಿಕಾ ಚವ್ಹಾಣ, ಪ್ರವಾಸ ಕಾ೦ು೯ದ೯ಶಿ೯ು೦ಾಗಿ ವರ್ಷಾ ಜಾಧವ, ಆರೋಗ್ಯ ಕಾ೦ು೯ದ೯ಶಿ೯ು೦ಾಗಿ ಶಾರದಾ ಲಮಾಣಿ, ಸ್ವಚ್ಛತಾ ಕಾ೦ು೯ದ೯ಶಿ೯ು೦ಾಗಿ ಐಶ್ವರ್ಯ ತಮ್ಮನಗೌಡರ, ಶಿಸ್ತು ಕಾರ್ಯದರ್ಶಿಯಾಗಿ ಜ್ಯೋತಿ ಗುದ್ನೆಪ್ಪನಮಠ ಆಯ್ಕೆಯಾದರು.

ಪ್ರಥಮ ಪಿ.ಯು.ಸಿ ವರ್ಗ ಪ್ರತಿನಿಧಿಯಾಗಿ ಐಶ್ವರ್ಯ





ತಮ್ಮನಗೌಡರ, ಪಿ.ಯು.ಸಿ ದ್ವಿತೀಯ ಎ ವರ್ಗದ ಪ್ರತಿನಿಧಿಯಾಗಿ ಕವಿತಾ ಲಮಾಣಿ, ದ್ವಿತೀಯ ಬಿ ವರ್ಗದ ಪ್ರತಿನಿಧಿಯಾಗಿ ಕರಿಯಮ್ಮ ಸುಂಕದ ಆಯ್ಕೆಯಾದರು.

ರಾಜ್ಯಶಾಸ್ತ್ರ ಉಪನ್ಯಾಸಕ ಬಿ.ಬಿ. ಮಿರ್ಜಿ ಸಭೆಯನ್ನುದ್ದೇಶಿಸಿ ಮಾತನಾಡಿ, ಭಾರತ ದೇಶವು ಪ್ರಜಾಪ್ರಭುತ್ವ ರಾಷ್ಟ್ರವಾಗಿದ್ದು, ಭಾವೀ ಪ್ರಜೆಗಳಾಗಿ ಮತ ಚಲಾಯಿಸುವ ವಿದ್ಯಾರ್ಥಿಗಳಿಗೆ ಈ ಚುನಾವಣಾ ಪ್ರಕ್ರಿಯೆ ಪ್ರಾಯೋಗಿಕ ಮಾದರಿ ತರಬೇತಿಯಾಗಿದೆ. ವಿದ್ಯಾರ್ಥಿನಿಯರು ಪ್ರಜಾಪ್ರಭುತ್ವ ವ್ಯವಸ್ಥೆಯಲ್ಲಿ ಮತದಾನದ ಮಹತ್ವವನ್ನು ಅರಿತುಕೊಳ್ಳಬೇಕೆಂದು ಹೇಳಿದರು.

ಚುನಾವಣಾ ಸಾಕ್ಷರತಾ ಕ್ಲಬ್‌ನ ಸಂಯೋಜನಾಧಿಕಾರಿ ಡಾ. ದತ್ತಪ್ರಸನ್ನ ಪಾಟೀಲ ಮಾತನಾಡಿ, ಆಯ್ಕೆಯಾದ ಕಾರ್ಯದರ್ಶಿಗಳು ವರ್ಷವಿಡೀ ನಿರ್ವಹಿಸಬೇಕಾದ ಕಾರ್ಯಗಳ ಕುರಿತು ವಿವರಿಸಿದರು. ಸಾಂಸ್ಕೃತಿಕ ವಿಭಾಗದ ಸಂಚಾಲಕರಾದ ಪ್ರಶಾಂತ ಪಾಟೀಲ, ದೈಹಿಕ ಶಿಕ್ಷಣ ಉಪನ್ಯಾಸಕಿ ಅಶ್ವಿನಿ ಜಾಡರ, ಸಭೆಯ ಅಧ್ಯಕ್ಷತೆ ವಹಿಸಿದ್ದ ಪ್ರಾ. ಡಾ. ಬಿ.ಎಸ್. ರಾಠೋಡ ಮಾತನಾಡಿದರು.

ಪ್ರೊ. ಬಿ.ಬಿ. ಮಿರ್ಜಿ ಕಾರ್ಯಕ್ರಮ ನಿರೂಪಿಸಿದರು. ಆಯ್ಕೆಯಾದ ವಿದ್ಯಾರ್ಥಿ ಸಂಘದ ಕಾರ್ಯದರ್ಶಿಗಳಿಗೆ ವಿದ್ಯಾದಾನ ಸಮಿತಿ ಅಧ್ಯಕ್ಷ ಡಿ.ಬಿ. ಹುಯಿಲಗೋಳ, ಕಾರ್ಯದರ್ಶಿ ಶ್ರೀನಿವಾಸ ಹುಯಿಲಗೋಳ ಹಾಗೂ ಸಿಬ್ಬಂದಿ ವರ್ಗದವರು ಅಭಿನಂದನೆ ಸಲ್ಲಿಸಿದರು.

## ಸಂಪಾದಕೀಯ

# ಎಸ್ಮಾ ಜಾರಿಯಿಂದ ಬಗ್ಗದ ಸಾರಿಗೆ ಸಂಸ್ಥೆ ನೌಕರರು

ಆಗಸ್ಟ್ 5 ರಂದು ರಾಜ್ಯಾದ್ಯಂತ ನಡೆಯಲಿರುವ ಸರ್ಕಾರಿ ಬಸ್ ಬಂದ್ ನಿರ್ಧಾರ, ಸಾರಿಗೆ ನೌಕರರ ಅಸಮಾಧಾನ ಮತ್ತು ಸರ್ಕಾರದ ನಡೆಗೆ ಕನ್ನಡಿ ಹಿಡಿದಿದಂತಾಗಿದೆ.

ವೇತನ ಪರಿಷ್ಕರಣೆ ವಿಚಾರದಲ್ಲಿ ಸಾರಿಗೆ ನೌಕರರ ಸಂಘವು ತನ್ನ ಆಗ್ರಹವನ್ನು ಸ್ಪಷ್ಟಪಡಿಸಿದ್ದು, ಹುಬ್ಬಳ್ಳಿಯಲ್ಲಿ ನಡೆದ ತುರ್ತು ಸಭೆಯಲ್ಲಿ ಆಗಸ್ಟ್ 5 ರಂದು ಬಂದ್ ನಡೆಸುವ ನಿರ್ಧಾರದಿಂದ ಹಿಂದೆ ಸರಿಯುವ ಪ್ರಶ್ನೆಯೇ ಇಲ್ಲ ಎಂದು ಘೋಷಿಸಿದೆ.

ಈ ನಡುವೆ, ರಾಜ್ಯ ಸರ್ಕಾರ ಎಸ್ಮಾ (ಅಗತ್ಯ ಸೇವೆಗಳ ನಿರ್ವಹಣಾ ಕಾಯಿದೆ) ಜಾರಿಗೊಳಿಸಿರುವುದು ತೀವ್ರ ವಿವಾದಕ್ಕೆ ಕಾರಣವಾಗಿದೆ. ಸಾರಿಗೆ ನೌಕರರು ಮುಷ್ಕರದಲ್ಲಿ ಭಾಗವಹಿಸುವುದನ್ನು ತಡೆಯುವ ಉದ್ದೇಶದಿಂದ ಈ ಕ್ರಮ ಕೈಗೊಳ್ಳಲಾಗಿದೆ ಎಂದು ಸಂಘವು ಆರೋಪಿಸಿದೆ.

ಎಸ್ಮಾ ಜಾರಿಯು ನೌಕರರ ಪ್ರತಿಭಟಿಸುವ ಹಕ್ಕನ್ನು ಹತ್ತಿಕ್ಕುವ ಪ್ರಯತ್ನ ಎಂದು ವ್ಯಾಪಕ ಟೀಕೆ ವ್ಯಕ್ತವಾಗಿದೆ. ಸಾರಿಗೆ ಜಂಟಿ ಸಮಿತಿಯು ಎಸ್ಮಾ ಹಿಂಪಡೆಯುವಂತೆ ಸರ್ಕಾರವನ್ನು ಒತ್ತಾಯಿಸಿದೆ.

ಸಾರಿಗೆ ನೌಕರರ ಬೇಡಿಕೆಗಳನ್ನು ಆಲಿಸಿ, ಸೂಕ್ತ ಪರಿಹಾರ ಕಂಡುಕೊಳ್ಳುವುದು ಸರ್ಕಾರದ ಜವಾಬ್ದಾರಿಯಾಗಿದೆ. ಕೇವಲ ಬಲವಂತದ ಕ್ರಮಗಳಿಂದ ಸಮಸ್ಯೆ ಬಗೆಹರಿಯುವುದಿಲ್ಲ. ಬದಲಿಗೆ, ಸಂವಾದದ ಮೂಲಕ ನೌಕರರ ನ್ಯಾಯಯುತ ಬೇಡಿಕೆಗಳನ್ನು ಈಡೇರಿಸುವ ನಿಟ್ಟಿನಲ್ಲಿ ಸರ್ಕಾರ ಮುಂದಾಗಬೇಕು.

ಸಾರ್ವಜನಿಕರಿಗೆ ತೊಂದರೆಯಾಗದಂತೆ ಮತ್ತು ನೌಕರರ ಹಕ್ಕುಗಳಿಗೆ ಧಕ್ಕೆ ಬಾರದಂತೆ ಸಮಸ್ಯೆ ಇತ್ಯರ್ಥಪಡಿಸುವುದು ಅತ್ಯಗತ್ಯ. ಈ ಬಂದ್ ರಾಜ್ಯದ ಆರ್ಥಿಕತೆ ಮತ್ತು ಸಾರ್ವಜನಿಕ ಜೀವನದ ಮೇಲೆ ಗಂಭೀರ ಪರಿಣಾಮ ಬೀರಲಿದೆ. ಹೀಗಾಗಿ, ಸರ್ಕಾರ ಮತ್ತು ಸಾರಿಗೆ ನೌಕರರ ಸಂಘದ ನಡುವೆ ಸೌಹಾರ್ದಯುತ ಒಪ್ಪಂದಕ್ಕೆ ಬರಲು ಇದು ನಿರ್ಣಾಯಕ ಸಮಯ.

### ಇಂದು, ಶ್ರೇಷ್ಠ ಶಿಕ್ಷಣ ತಜ್ಞ ಡಾ. ಎಚ್.ಎಫ್. ಕಟ್ಟಿಮನಿಯವರ ಜನ್ಮದಿನದ ನಿಮಿತ್ತ ಲೇಖನ

# ಶಿಕ್ಷಣ ಕ್ಷೇತ್ರದ ಅಮೂಲ್ಯ ರತ್ನ

ಶೈಕ್ಷಣಿಕ ಪ್ರಗತಿಯಿಂದ ಮಾತ್ರ ರಾಷ್ಟ್ರದ ಅಭಿವೃದ್ಧಿ ಸಾಧ್ಯ ಎಂಬುದನ್ನು ಅಕ್ಷರಶಃ ಕಾರ್ಯರೂಪಕ್ಕೆ ತರಲು ಪ್ರಯತ್ನಿಸಿದವರು ಡಾ. ಎಚ್.ಎಫ್. ಕಟ್ಟಿಮನಿಯವರು. ಇವರ ಪೂರ್ಣ ಹೆಸರು ಹುಚ್ಚಯ್ಯ ಫಕ್ಕೀರಯ್ಯ ಕಟ್ಟೀಮನಿ. ಇವರು 1887ರ ಜುಲೈ-24ರಂದು ಹಳೇ ಹುಬ್ಬಳ್ಳಿಯಲ್ಲಿ ಜನಿಸಿದರು. ಅವರು ತಮ್ಮ ಜನ್ಮ ದಿನದಂದು ವರ್ಷದುದ್ದಕ್ಕೂ ತಾವು ಮಾಡಿದ ಕೆಲಸಗಳ ಸಿಂಹಾವಲೋಕನ ಮಾಡಿಕೊಂಡು, ಮುಂದಿನ ವರ್ಷಗಳಲ್ಲಿ ಮಾಡಬೇಕಾದ ಜನಸೇವಾ ಕಾರ್ಯಗಳ ಬಗ್ಗೆ ಯೋಚಿಸಿ, ಯೋಜನೆ ಮಾಡಿಕೊಳ್ಳುತ್ತಿದ್ದರು.

ಕರ್ನಾಟಕ ಲಿಂಗಾಯತ ಎಜ್ಯುಕೇಷನ್ ಸೊಸಾಯಿಟಿ (ಕೆ.ಎಲ್.ಇ) ಸಂಸ್ಥಾಪಕ ಸಪ್ತಋಷಿಗಳಲ್ಲಿ ಇವರು ಒಬ್ಬರು. ಇವರ ಸತ್ಯ ಶುದ್ಧ ಕಾಯಕದ ಫಲವಾಗಿ ಇಂದು ಕೆ.ಎಲ್.ಇ ಸಂಸ್ಥೆ ಬೃಹದಾಕರವಾಗಿ ಬೆಳೆದಿದೆ. ಧಾರವಾಡದಲ್ಲಿ ಸೊಸಾಯಿಟಿಯ ಶಾಖೆಯಾಗಿ ಒಂದು ಶಿಕ್ಷಣ ಸಂಸ್ಥೆಯನ್ನು ತೆರೆಯುವುದಕ್ಕಾಗಿ ಪ್ರಯತ್ನಿಸಿದರು. ಇವರ ಪ್ರಯತ್ನದ ಫಲವಾಗಿಯೇ ಧಾರವಾಡದಲ್ಲಿ ಆರ್.ಎಲ್.ಎಸ್.ಪ್ರೌಢಶಾಲೆ (1922) ರೂಪುಗೊಂಡಿತು. ಮುಂದೆ 1938ರಲ್ಲಿ ಒಂದು ವರ್ಷ, 1940ರಲ್ಲಿ ಒಂದು ವರ್ಷ, ಒಟ್ಟು ಎರಡು ವರ್ಷಗಳ ಅವಧಿಯವರೆಗೆ ಅದರ ಮುಖ್ಯೋಪಾಧ್ಯಾಯರಾಗಿಯೂ ಕಟ್ಟಿಮನಿಯವರು ಸೇವೆ ಸಲ್ಲಿಸಿದರು.

ಸತ್ಯ, ಪ್ರಾಮಾಣಿಕತೆ, ನಿಸ್ವಾರ್ಥದಿಂದ ಕೆ.ಎಲ್.ಇ ಸಂಸ್ಥೆಯ ಸಂಸ್ಥಾಪಕರು ಹಾಗೂ ಸಪ್ತರ್ಷಿಗಳು ಕಾರ್ಯನಿರ್ವಹಿಸಿದರು.



ಸೊಸಾಯಿಟಿ ಪ್ರಾರಂಭಿಸಿದ ಒಂದು ತಿಂಗಳೊಳಗಾಗಿ ಬೆಳಗಾವಿಯಲ್ಲಿ ಗಿಲಗಂಚಿ ಅರಟಾಳ ಪ್ರೌಢಶಾಲೆಯನ್ನು ಪ್ರಾರಂಭಿಸಲಾಯಿತು. ಆ ಶಾಲೆಯಲ್ಲಿಯೂ ಕೂಡ ಪ್ರಾಧ್ಯಾಪಕರಾಗಿ ಎಚ್. ಎಫ್. ಕಟ್ಟಿಮನಿಯವರು ಸೇವೆ ಸಲ್ಲಿಸಿದರು. ಆರ್ಥಿಕ ತೊಂದರೆಯಲ್ಲಿದ್ದ ಬಾಗಲಕೋಟೆಯ ಬಸವೇಶ್ವರ ಪ್ರೌಢಶಾಲೆಯ ಮುಖ್ಯೋಪಾಧ್ಯಾಯರಾಗಿ ಶಾಲೆಗೆ ಜೀವ ಕಳೆಯನ್ನು ತುಂಬಿ ಪ್ರಗತಿಯತ್ತ ಕೊಂಡೊಯ್ದರು. ಮುಂದೆ ಬಸವೇಶ್ವರ ವಿದ್ಯಾವರ್ಧಕ ಸಂಘದವರಿಗೆ ಆ ಪ್ರೌಢಶಾಲೆಯನ್ನು ಒಪ್ಪಿಸಿದರು.

ನಂತರ ಬಾಗಲಕೋಟೆಯ ಶ್ರೀ ಬಸವೇಶ್ವರ ಅರ್ಬನ್ ಕೋ-ಆಪರೇಟಿವ್ ಬ್ಯಾಂಕ್ ಆರ್ಥಿಕ ನಷ್ಟದಿಂದ ಮುಚ್ಚಿಹೋಗುವ ಪರಿಸ್ಥಿತಿಗೆ ಬಂದಿತ್ತು. ಅದರ ಜವಾಬ್ದಾರಿ ಸ್ವೀಕರಿಸಿ ಅಭಿವೃದ್ಧಿಯತ್ತ ಕೊಂಡೊಯ್ದರು. ಹೀಗೆ ಬಸವೇಶ್ವರ ವಿದ್ಯಾವರ್ಧಕ ಸಂಘ ಹಾಗೂ ಶ್ರೀ ಬಸವೇಶ್ವರ ಅರ್ಬನ್ ಕೋ-ಆಪರೇಟಿವ್ ಬ್ಯಾಂಕ್‌ಗಳನ್ನು ಸಂಕಷ್ಟದ ದಿನಗಳಲ್ಲಿ ರಕ್ಷಿಸಿ, ಅಭಿವೃದ್ಧಿಯತ್ತ ತೆಗೆದುಕೊಂಡು ಹೋದ ಕೀರ್ತಿ ಎಚ್. ಎಫ್. ಕಟ್ಟಿಮನಿಯವರಿಗೆ ಸಲ್ಲುತ್ತದೆ.

ಬೆಳಗಾವಿ ಕೆ.ಎಲ್.ಇ ಸೊಸಾಯಿಟಿಯ ಪ್ರತಿನಿಧಿಯಾಗಿ ಸೊಲ್ಲಾಪೂರದಲ್ಲಿ ಮಾಧ್ಯಮಿಕ ಶಾಲೆಯನ್ನು ಪ್ರಾರಂಭಿಸಿದರು. ವಾಣಿಜ್ಯ ನಗರಿ ಎಂಬ ಖ್ಯಾತಿಯನ್ನು ಪಡೆದಿರುವ ಹುಬ್ಬಳ್ಳಿಯಲ್ಲಿ ವಾಣಿಜ್ಯ ವಿಷಯ ಅಧ್ಯಯನದ ಕಾಲೇಜೊಂದನ್ನು ತೆರೆಯಬೇಕೆಂಬ ಪ್ರಸ್ತಾಪ ಬಂದಿತು. ತಕ್ಷಣ ಕಾರ್ಯಪ್ರವೃತ್ತರಾದ ಎಚ್.ಎಫ್. ಕಟ್ಟಿಮನಿಯವರು ಮೂರುಸಾವಿರ ಮಠದ ಮಹಾಸ್ವಾಮಿಗಳ ಎದುರು ವಿಷಯವನ್ನು ಪ್ರಸ್ತಾಪಿಸಿದರು. ಅವರ ವಿಚಾರವನ್ನು ಶ್ಲಾಘಿಸಿದ ಮಹಾಸ್ವಾಮೀಜಿಯವರು ಕೆ.ಎಲ್.ಇ ಸೊಸಾಯಿಟಿಯು ವಾಣಿಜ್ಯ ಕಾಲೇಜೊಂದನ್ನು ಸ್ಥಾಪಿಸುವುದಾದರೆ ತಾವು ಒಂದು ಲಕ್ಷ ರೂಪಾಯಿಗಳ ಧನಸಹಾಯ ಮಾಡುವುದಾಗಿ ತಿಳಿಸಿದರು. ಎಚ್.ಎಫ್. ಕಟ್ಟಿಮನಿಯವರ ಪ್ರಯತ್ನದಿಂದ 'ಶ್ರೀ ಜಗದ್ಗುರು ಗಂಗಾಧರ ಕಾಮರ್ಸ್ ಕಾಲೇಜು' 1947ರ ಜೂನ್ ತಿಂಗಳಿನಲ್ಲಿ ಹುಬ್ಬಳ್ಳಿಯಲ್ಲಿ ಪ್ರಾರಂಭವಾಯಿತು.

ಒಮ್ಮೆ ಎಚ್.ಎಫ್. ಕಟ್ಟಿಮನಿಯವರು ಬಸಪ್ಪಣ್ಣ ಭೂಮರಡ್ಡಿಯವರೊಂದಿಗೆ ಸಂಭಾಷಣೆಯಲ್ಲಿ ತೊಡಗಿದ್ದಾಗ ಅವರು ಔದ್ಯೋಗಿಕ ಶಿಕ್ಷಣ ಸಂಸ್ಥೆಯನ್ನು ತೆರೆಯಬೇಕು, ಅದಕ್ಕೆ ಧನಸಹಾಯ ಮಾಡುವುದಾಗಿ ತಿಳಿಸಿದರು. ಇದರಿಂದ ಪ್ರೇರಿತರಾದ ಎಚ್.ಎಫ್. ಕಟ್ಟಿಮನಿಯವರು ಇಂಜಿನಿಯರಿಂಗ್ ಕಾಲೇಜು ಸ್ಥಾಪಿಸುವ ಉದ್ದೇಶದಿಂದ ಅಸ್ತಿತ್ವದಲ್ಲಿದ್ದ ಹಲವಾರು ಇಂಜಿನಿಯರಿಂಗ್ ಕಾಲೇಜುಗಳಿಗೆ ಭೇಟಿ ಕೊಟ್ಟು ಅಧ್ಯಯನ ಕೈಗೊಂಡು ಕಾಲೇಜು ಸ್ಥಾಪಿಸಲು ಕ್ರಿಯಾ ಯೋಜನೆಯೊಂದನ್ನು ರೂಪಿಸಿದರು.

ಶ್ರೀ ಭೂಮರಡ್ಡಿಯವರ ಮೂರು ಲಕ್ಷ ಧನಸಹಾಯದಿಂದ 'ಶ್ರೀ ಬಸಪ್ಪ ಭೂಮರಡ್ಡಿ ಪಾಲಿಟೆಕ್ನಿಕ್' ಎಂಬ ಹೆಸರಿನಲ್ಲಿ 20-07-1949ರಲ್ಲಿ ಗದಗಿನಲ್ಲಿ ಪ್ರಾರಂಭವಾಯಿತು. ಮುಂದೆ ಹುಬ್ಬಳ್ಳಿಗೆ ಸ್ಥಳಾಂತರ ಹೊಂದಿ ಅದು 'ಶ್ರೀ ಬಿ.ವಿ. ಭೂಮರಡ್ಡಿ ಕಾಲೇಜ್ ಆಫ್ ಇಂಜಿನಿಯರಿಂಗ್ ಆ್ಯಂಡ್ ಟೆಕ್ನಾಲಜಿ' ಎಂದು ಹೆಸರು ಪಡೆಯಿತು. ಹಲವಾರು ತಂತ್ರಜ್ಞರನ್ನು ರೂಪಿಸುವ ಮೂಲಕ ವಿಶ್ವ ಭೂಪಟದಲ್ಲಿ ಗುರುತಿಸಿಕೊಂಡ ಸಂಸ್ಥೆಯಾಗಿ ಬೆಳೆದಿರುವುದು ಹೆಮ್ಮೆಯ ವಿಷಯ.

ಕಟ್ಟಿಮನಿಯವರು ವಿಧಾನ ಪರಿಷತ್ ಡೆಪ್ಯೂಟಿ ಚೇರಮನ್‌ರಾಗಿ ಆಯ್ಕೆಯಾಗಿದ್ದ ಸಂದರ್ಭದಲ್ಲಿ ಎಸ್. ನಿಜಲಿಂಗಪ್ಪ ಕಾಲೇಜನ್ನು ಬೆಂಗಳೂರಿನಲ್ಲಿ ಸ್ಥಾಪಿಸಲು ಕ್ರಮವಹಿಸಿದರು. ಹುಬ್ಬಳ್ಳಿಯ ಹೆಸರಾಂತ 'ಶ್ರೀ ಕಾಡಸಿದ್ದೇಶ್ವರ ಆರ್ಟ್ಸ್ ಕಾಲೇಜು' ಸ್ಥಾಪನೆಗೆ ಕಾರಣೀಕರ್ತರಾದರು. ಅಂದಿನ ಮುಂಬಯಿ ರಾಜ್ಯದ ವಿಧಾನ ಪರಿಷತ್ತಿನ ಸದಸ್ಯರಾಗಿ ವಿಶಾಲ ಮೈಸೂರು ರಾಜ್ಯ ನಿರ್ಮಾಣವಾದ ಮೇಲೆ ಎರಡು ಸಲ ವಿಧಾನ ಪರಿಷತ್ತಿಗೆ ಆಯ್ಕೆಯಾಗಿದ್ದು ಅವರ ಜನಪ್ರಿಯತೆ ಎಷ್ಟಿತ್ತು ಎಂಬುದನ್ನು ತೋರಿಸುತ್ತದೆ.

ಶಿರಹಟ್ಟಿಯ ಜಗದ್ಗುರು ಫಕ್ಕೀರೇಶ್ವರ ವಿದ್ಯಾದಾನ ಸಮಿತಿ ಸ್ಥಾಪನೆಯಲ್ಲಿ, ಹುಬ್ಬಳ್ಳಿಯಲ್ಲಿ ಕರ್ನಾಟಕ ಲಲಿತಕಲಾ ಶಿಕ್ಷಣ ಸಂಸ್ಥೆಯನ್ನು 1961ರಲ್ಲಿ ಪ್ರಾರಂಭಿಸಿದರು. ಧಾರವಾಡದಲ್ಲಿ ಕನ್ನಡ ಸಂಶೋಧನಾ ಸಂಸ್ಥೆ, ಕರ್ನಾಟಕ ವಿಶ್ವವಿದ್ಯಾಲಯ ರೂಪುಗೊಳ್ಳುವಲ್ಲಿಯೂ ಎಚ್.ಎಫ್. ಕಟ್ಟಿಮನಿಯವರು ಶ್ರಮಿಸಿದ್ದಾರೆ.

ಕಟ್ಟಿಮನಿಯವರಿಗೆ ಕರ್ನಾಟಕ ಸರ್ಕಾರವು 1960ರಲ್ಲಿ ಸಾರ್ವಜನಿಕ ಸೇವಾ ಪ್ರಶಸ್ತಿ, 1966ರ ನವೆಂಬರ್ 1ರಂದು ರಾಜ್ಯೋತ್ಸವ ಪ್ರಶಸ್ತಿಯನ್ನು ನೀಡಿದೆ. ಕರ್ನಾಟಕ ವಿಶ್ವವಿದ್ಯಾಲಯವು ಶಿಕ್ಷಣ ಕ್ಷೇತ್ರದ ಅಮೂಲ್ಯ ಕೊಡುಗೆಗಾಗಿ 1975ರಲ್ಲಿ ಗೌರವ ಡಾಕ್ಟರೇಟ್ ಪದವಿ ನೀಡಿ ಗೌರವಿಸಿತು. ಶಿಕ್ಷಣ ಕ್ಷೇತ್ರದಲ್ಲಿ ಇಷ್ಟೊಂದು ಕೊಡುಗೆಗಳನ್ನು ನೀಡಿರುವ ಇವರ ಸ್ಮರಣೆಗಾಗಿ ಕೆ.ಎಲ್.ಇ. ಸಂಸ್ಥೆಯು ಹುಬ್ಬಳ್ಳಿಯಲ್ಲಿ ಪ್ರಾರಂಭಿಸಿದ ಕನ್ನಡ ಶಾಲೆಗೆ ಡಾ. ಎಚ್.ಎಫ್. ಕಟ್ಟಿಮನಿ ಹಿರಿಯ ಪ್ರಾಥಮಿಕ ಶಾಲೆ ಎಂದು ನಾಮಕರಣ ಮಾಡಲಾಗಿದೆ.

ಇಂತಹ ಮಹಾನ್ ಶಿಕ್ಷಣ ಪ್ರೇಮಿ 1976ರ ಅಕ್ಟೋಬರ್ 5ರಂದು ನಿಧನರಾದರು.



– ರಾಜು ಭೂಶೆಟ್ಟಿ.
ಹುಬ್ಬಳ್ಳಿ.

# ಧರ್ಮಸ್ಥಳ ಪ್ರಕರಣ: ಎಸ್‌ಐಟಿಗೆ 20 ಅಧಿಕಾರಿಗಳ ನಿಯೋಜನೆ

■ವಿಜಯಸಾಕ್ಷಿ ಸುದ್ದಿ, ಧರ್ಮಸ್ಥಳ

ಧರ್ಮಸ್ಥಳ ಗ್ರಾಮದಲ್ಲಿ ನಡೆದಿದೆ ಎನ್ನಲಾದ ಸರಣಿ ಹತ್ಯೆ ಆರೋಪ ಪ್ರಕರಣದ ತನಿಖೆಗೆ ರಾಜ್ಯ ಸರ್ಕಾರ ರಚಿಸಿರುವ ವಿಶೇಷ ತನಿಖಾ ತಂಡಕ್ಕೆ (ಎಸ್‌ಐಟಿ) ಹೆಚ್ಚುವರಿ ಅಧಿಕಾರಿಗಳನ್ನು ನಿಯೋಜನೆ ಮಾಡಿ ರಾಜ್ಯ ಪೊಲೀಸ್ ಮಹಾನಿರ್ದೇಶಕ ಡಾ.ಎಂ.ಎ ಸಲೀಂ ಆದೇಶ ಹೊರಡಿಸಿದ್ದಾರೆ.

# ತಮಿಳುನಾಡಿನ ಚರ್ಚ್‌ನಲ್ಲಿ ಜಾತಿ ತಾರತಮ್ಯ; ದಲಿತ ಕ್ರೈಸ್ತರಿಂದ ಉಪವಾಸ ಸತ್ಯಾಗ್ರಹ

■ವಿಜಯಸಾಕ್ಷಿ ಸುದ್ದಿ, ತಮಳುನಾಡು

ತಮಿಳುನಾಡಿನ ತಿರುಚಿಯ ತುರೈಯೂರ್ ಬಳಿಯ ಕೊಟ್ಟಪಾಳಯಂ ಗ್ರಾಮದ ದಲಿತ ಕ್ರೈಸ್ತರ ಗುಂಪೊಂದು ಜಿಲ್ಲಾಧಿಕಾರಿಗಳ ಕಛೇರಿ ಎದುರು ಸೋಮವಾರ ಉಪವಾಸ ಸತ್ಯಾಗ್ರಹ ನಡೆಸಿದರು. "ಚರ್ಚ್‌ನಲ್ಲಿ ತಾವು ತಾರತಮ್ಯವನ್ನು ಎದುರಿಸುತ್ತಿದ್ದೇವೆ, ಶತಮಾನಗಳಷ್ಟು ಹಳೆಯದಾದ ಸೇಂಟ್ ಮೇರಿ ಮ್ಯಾಗ್ಡಲೀನ್ ಚರ್ಚ್‌ನ ಉತ್ಸವ ಮತ್ತು ಇತರ ಚಟುವಟಿಕೆಗಳಲ್ಲಿ ಭಾಗವಹಿಸಲು ನಮಗೆ ಅವಕಾಶ ನೀಡುತ್ತಿಲ್ಲ" ಎಂದು ಆರೋಪಿಸಿದರು.

# ರಾಜ್ಯದಲ್ಲಿ ಸೆ.22ರಿಂದ ಬೃಹತ್ ಜಾತಿ ಸಮೀಕ್ಷೆ: ಸಿಎಂ ಸಿದ್ದರಾಮಯ್ಯ ಘೋಷಣೆ



■ವಿಜಯಸಾಕ್ಷಿ ಸುದ್ದಿ, ಬೆಂಗಳೂರು

ಜಾತಿ ತಾರತಮ್ಯದ ಬೇರುಗಳನ್ನು ಕಿತ್ತೆಸೆಯುವ ಮಹತ್ವಾಕಾಂಕ್ಷೆಯೊಂದಿಗೆ, ಕರ್ನಾಟಕ ಸರ್ಕಾರವು ರಾಜ್ಯದ ಎಲ್ಲಾ ಏಳು ಕೋಟಿ ನಾಗರಿಕರ ಸಮಗ್ರ ಸಾಮಾಜಿಕ ಮತ್ತು ಶೈಕ್ಷಣಿಕ ಸಮೀಕ್ಷೆಯನ್ನು ಸೆಪ್ಟೆಂಬರ್ 22 ರಿಂದ ಅಕ್ಟೋಬರ್ 7 ರವರೆಗೆ ನಡೆಸಲು ನಿರ್ಧರಿಸಿದೆ. ಈ ಕುರಿತು ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು ಬುಧವಾರ ಮಹತ್ವದ ಘೋಷಣೆ ಮಾಡಿದ್ದು, ಈ ಸಮೀಕ್ಷೆ ಕೇವಲ ಅಂಕಿ-ಅಂಶಗಳ ಸಂಗ್ರಹವಲ್ಲದೆ, ಭವಿಷ್ಯದ ನೀತಿ ನಿರೂಪಣೆಗೆ ಬಲವಾದ ಅಡಿಪಾಯ ಹಾಕಲಿದೆ ಎಂದು ಹೇಳಿದರು.

ಮುಖ್ಯಮಂತ್ರಿಗಳ ಅಧ್ಯಕ್ಷತೆಯಲ್ಲಿ ನಡೆದ ಪೂರ್ವಭಾವಿ ಸಭೆಯಲ್ಲಿ, ಹಿಂದುಳಿದ ವರ್ಗಗಳ ಆಯೋಗವು ಸಲ್ಲಿಸಿದ್ದ ಪ್ರಸ್ತಾವನೆಗೆ ಒಪ್ಪಿಗೆ ನೀಡಲಾಯಿತು. ಈ ಸಮೀಕ್ಷೆಯು ಪ್ರತಿ ಕುಟುಂಬದ ಆರ್ಥಿಕ ಸ್ಥಿತಿ, ಜಮೀನು ಒಡೆತನ ಸೇರಿದಂತೆ ಹಲವು ಆಯಾಮಗಳ ಮಾಹಿತಿಯನ್ನು ಸಂಗ್ರಹಿಸಲಿದೆ. ಸಂಗ್ರಹಿಸಿದ ದತ್ತಾಂಶವು ಮುಂದಿನ ಬಜೆಟ್ ರಚನೆಗೆ ನಿರ್ಣಾಯಕ ಮಾಹಿತಿಯನ್ನು ಒದಗಿಸಲಿದೆ ಎಂದು ಸಿಎಂ ಸ್ಪಷ್ಟಪಡಿಸಿದರು. ಈ ಬಾರಿಯ ಸಮೀಕ್ಷೆ ಇಡೀ ದೇಶಕ್ಕೆ ಮಾದರಿಯಾಗುವಂತೆ ನಡೆಸಬೇಕು ಎಂಬುದು ಸರ್ಕಾರದ ದೃಢ ಸಂಕಲ್ಪವಾಗಿದೆ.

ಸಮೀಕ್ಷೆಯನ್ನು ಕೇವಲ 15 ದಿನಗಳಲ್ಲಿ ಪೂರ್ಣಗೊಳಿಸಿ, ಅಕ್ಟೋಬರ್ ಅಂತ್ಯದೊಳಗೆ ವರದಿಯನ್ನು ಸಲ್ಲಿಸುವ ಗಡುವು ನಿಗದಿಪಡಿಸಲಾಗಿದೆ. ಸಮೀಕ್ಷೆಗೆ ಅಗತ್ಯವಾದ ತರಬೇತಿ ಹಾಗೂ ಇತರ ಪೂರ್ವ ಸಿದ್ಧತೆಗಳನ್ನು ತಕ್ಷಣವೇ ಆರಂಭಿಸಲು ಸಿಎಂ ಸೂಚಿಸಿದರು. ಸಮೀಕ್ಷೆಯು ಸಂಪೂರ್ಣವಾಗಿ ಸಮರ್ಪಕವಾಗಿ ನಡೆಯಬೇಕು ಮತ್ತು ಯಾವುದೇ ದೂರುಗಳಿಗೆ ಅವಕಾಶವಿಲ್ಲದಂತೆ ಎಚ್ಚರಿಕೆ ವಹಿಸಬೇಕು ಎಂದು ಅವರು ಅಧಿಕಾರಿಗಳಿಗೆ ನಿರ್ದೇಶನ ನೀಡಿದರು. ರಾಜ್ಯದ ಪ್ರತಿಯೊಬ್ಬ ಪ್ರಜೆಯೂ ಈ ಸಮೀಕ್ಷೆಯ ಭಾಗವಾಗುವುದನ್ನು ಖಚಿತಪಡಿಸಿಕೊಳ್ಳಬೇಕು ಎಂದು ಮುಖ್ಯಮಂತ್ರಿಗಳು ಒತ್ತಿ ಹೇಳಿದರು.

ಹಿಂದಿನ ಕಾಂತರಾಜು ಆಯೋಗದ ಸಮೀಕ್ಷೆಯಲ್ಲಿ 54 ಪ್ರಶ್ನೆಗಳನ್ನು ಬಳಸಲಾಗಿತ್ತು. ಆದರೆ, ಈ ಬಾರಿ ಮೊಬೈಲ್ ಆ್ಯಪ್ ಮೂಲಕ ಸಮೀಕ್ಷೆ ನಡೆಸಲು ನಿರ್ಧರಿಸಲಾಗಿದೆ. ಅಲ್ಲದೆ, ಸಮೀಕ್ಷೆಯಲ್ಲಿ ಸೇರಿಸಬೇಕಾದ ಹೊಸ ಅಂಶಗಳ ಕುರಿತು ಪರಿಶೀಲಿಸಲಾಗುವುದು. ತೆಲಂಗಾಣದಲ್ಲಿ ಇತ್ತೀಚೆಗೆ ನಡೆದ ಸಾಮಾಜಿಕ ಮತ್ತು ಶೈಕ್ಷಣಿಕ ಗಣತಿಯ ಕುರಿತು ಅಧ್ಯಯನ ನಡೆಸಲು ಮತ್ತು ಸಮೀಕ್ಷಾ ಕಾರ್ಯದ ಮೇಲ್ವಿಚಾರಣೆಗಾಗಿ ಉನ್ನತ ಮಟ್ಟದ ಸಮಿತಿಯನ್ನು ರಚಿಸಲು ನಿರ್ಧರಿಸಲಾಗಿದೆ.

### ವಚನ ಶ್ರಾವಣ-2025 ಪ್ರಾರಂಭೋತ್ಸವದ ನಿಮಿತ್ತ ಲೇಖನ

# ಅಂತರಂಗದಲ್ಲೇ ದೇವರನ್ನು ತೋರುವ ವಚನಗಳು

ಮಹಾಮಾನವತಾವಾದಿ, ಕರ್ನಾಟಕದ ಸಾಂಸ್ಕೃತಿಕ ನಾಯಕ, ವಿಶ್ವಗುರು ಬಸವಣ್ಣನವರು ಕ್ರಿ.ಶ. 1167ರಲ್ಲಿ ಕಪ್ಪಡಿಯ ಸಂಗಮನಾಥನ ಮಹಾಬಯಲಿನಲ್ಲಿ ಶ್ರಾವಣ ಶುದ್ಧ ಪಂಚಮಿಯಂದು ಬಯಲಾದರು. ಅವರ ಸ್ಮರಣೆಯ ಅಂಗವಾಗಿ 'ವಚನ ಶ್ರಾವಣ' ಒಂದು ತಿಂಗಳ ಪರ್ಯಂತರ ಕಾರ್ಯಕ್ರಮವನ್ನು ಗದಗ-ಬೆಟಗೇರಿ ನಗರದ ಹಲವಾರು ಬಡಾವಣೆಗಳಲ್ಲಿ ಮತ್ತು ಗ್ರಾಮಗಳ ಮನೆ ಮನೆಗಳಲ್ಲಿ ಬಸವಾದಿ ಶಿವಶರಣರ ವಚನಗಳನ್ನು ಚಿಂತನೆ ಮಾಡುವ ಮೂಲಕ ವಚನಶ್ರಾವಣವನ್ನು ಬಸವದಳ-ಬಸವಕೇಂದ್ರ-ಲಿಂಗಾಯತ ಪ್ರಗತಿಶೀಲ ಸಂಘ, ಗದಗ-ಬೆಟಗೇರಿ ಇವುಗಳ ಸಂಯುಕ್ತಾಶ್ರಯದಲ್ಲಿ ಪ್ರತಿವರ್ಷದ ನಡೆಸುತ್ತಾ ಬರಲಾಗಿದೆ. ಈ ವರ್ಷ ಶರಣ ಆಂಜನೇಯ ಬಂಗಾರಪ್ಪ ಕಟಗಿ, ವಿಶ್ವೇಶ್ವರ ಬಡಾವಣೆ, ಇಂಡಿಯನ್ ಬ್ಯಾಂಕ್ ಎದುರುಗಡೆ ಕಳಸಾಪೂರ ರಸ್ತೆ, ಗದಗದಲ್ಲಿ ಜುಲೈ 24ರ ಸಂಜೆ 5-30ಕ್ಕೆ ಪ್ರಾರಂಭವಾಗಲಿದೆ.

ವಚನ, ಧರ್ಮ, ದರ್ಶನ ಮತ್ತು ಸಾಹಿತ್ಯದ ಹಿನ್ನೆಲೆಯಲ್ಲಿ ಬಸವಾದಿ ಶಿವಶರಣರ ವಚನಗಳಿಗೆ ಮಹತ್ವದ ಸ್ಥಾನವಿದೆ. ಶಿವಶರಣರು ಕಂಡ ಆಧ್ಯಾತ್ಮದ ಆದರ್ಶಗಳು, ಅವರ ಜೀವನ ಆದರ್ಶ ಮತ್ತು ಅವರು ತೋರಿದ ದಾರಿ ವಚನಗಳಲ್ಲಿ ಮಡುಗಟ್ಟಿ ನಿಂತಿವೆ. ಶಿವಶರಣರ ಅಂತರಂಗದ ಪರಿಶುದ್ಧ ಪ್ರೇಮದಿಂದ ಉಕ್ಕಿ ಹರಿಯುವ ಈ ಪ್ರವಾಹದಲ್ಲಿ ಜನರ ಮನಸ್ಸಿನ ಮಾಲಿನ್ಯ ತೊಳೆಯುವ ಅದ್ಭುತ ಶಕ್ತಿ ಇದೆ.

ಶರಣರ ಜೀವನ ಬಹುಮುಖಿಯಾದುದು. ಅವರು ಒಂದೆಡೆ ಸಾಧಕರು, ಇನ್ನೊಂದೆಡೆ ಸಮಾಜ ನಿರ್ಮಾಪಕರು. ವರ್ಗ, ವರ್ಣ, ಲಿಂಗ, ಬೇಧವಿಲ್ಲದ, ಶೋಷಣೆಯಿಂದ ಮುಕ್ತವಾದ ಸಮಾಜವನ್ನು ಕಟ್ಟುವುದು ಅವರ ಗುರಿಯಾಗಿತ್ತು.



ಸಕಲ ಜೀವಾತ್ಮರಿಗೆ ಲೇಸು ಬಯಸುವುದು ಅವರ ಬದುಕಿನ ದಾರಿಯಾಗಿತ್ತು. ಆತ್ಮಕಲ್ಯಾಣದ ಜೊತೆಗೆ ಲೋಕಕಲ್ಯಾಣವನ್ನು ಶಿವಶರಣರು ತಮ್ಮ ಗುರಿಯನ್ನು ಸಾಧಿಸಲು ಬಳಸಿಕೊಂಡಿರುವ ಮಾಧ್ಯಮವೇ ವಚನಗಳು. ಜನರಾಡುವ ಕನ್ನಡ ಭಾಷೆಯಲ್ಲಿ ರಚಿತವಾದ ಈ ವಚನಗಳು ಧರ್ಮವನ್ನು ಬೋಧಿಸಿದ್ದರಿಂದ ಧರ್ಮ ಗ್ರಂಥಗಳಾಗಿ, ತತ್ವವನ್ನು ಒಳಗೊಂಡಿರುವದರಿಂದ ತಾತ್ವಿಕ ಗ್ರಂಥಗಳಾಗಿ, ಸಾಹಿತ್ಯಿಕ ಮೌಲ್ಯಗಳನ್ನು ಪ್ರತಿಪಾದಿಸುವುದರಿಂದ ಉತ್ತಮ ಸಾಹಿತ್ಯ ಕೃತಿಗಳಾಗಿ ಕನ್ನಡ ಸಾಹಿತ್ಯ ಪ್ರಪಂಚವನ್ನು ಶ್ರೀಮಂತಗೊಳಿಸಿವೆ. ಆಧುನಿಕ ವಿದ್ವಾಂಸರು ವಚನಗಳು ನಮ್ಮ ಕನ್ನಡ ಸಾಹಿತ್ಯದ ಉಪನಿಷತ್ತುಗಳು, ವಚನಕಾರರು ನಮ್ಮ ಕನ್ನಡ ನಾಡಿನ ರಸಋಷಿಗಳು ನಾಡು ಕಂಡ ಶ್ರೇಷ್ಠ ಅನುಭಾವಿಗಳು ಎಂದು ಮೆಚ್ಚುಗೆಯನ್ನು ವ್ಯಕ್ತಪಡಿಸಿದ್ದಾರೆ.


ಶ್ರಾವಣ ಅಂದರೆ ಭಾರತೀಯ ದಿನದರ್ಶಿಕೆಯಲ್ಲಿ ಒಂದು ಮಾಸ. ಆದರೆ ಅದರ ಅನ್ವರ್ಥತೆ ಶ್ರವಣದಲ್ಲಿದೆ. ಶ್ರವಣ ಎಂದರೆ ಕೇಳುವುದು. ಈ ತಿಂಗಳು ಶ್ರಾವಣ ಮಾಸವಾದುದರಿಂದ ಶುದ್ಧವಾದ ಮನಸ್ಸಿನಿಂದ ಪವಿತ್ರ ಸಂಗತಿಗಳನ್ನು, ಶರಣರ ವಚನಗಳ ಚಿಂತನೆಯನ್ನು ಕೇಳಬೇಕೆಂಬುದೇ ಇದರ ಉದ್ದೇಶ. ಆದರೆ ಈ ಉದ್ದೇಶಕ್ಕೆ ಹೊರತಾದ ಅನೇಕ ರೋಚಕ ಸಂಗತಿಗಳೇ ಮುಖ್ಯವೆನಿಸಿ ಮೌಢ್ಯಗಳು, ಕಂದಾಚಾರಗಳು, ಮೇಲು-ಕೀಳು, ಜಾತಿಯ ಸಂಕೋಲೆಗಳು, ಅವರವರ ಕರ್ಮ ಎಂಬಿತ್ಯಾದಿಗಳು, ಆಗ ಉಚ್ಚ ಕುಲದವರೆಂದು ಹೇಳಿಕೊಳ್ಳುತ್ತಿದ್ದವರಿಂದ ಹೇರಲ್ಪಟ್ಟವು. ದೀನದಲಿತರು ಶೋಷಣೆಗೆ ಒಳಗಾದರು. ದೇವರ ಗುಡಿಯ ಹತ್ತಿರ ಕೂಡ ಸುಳಿಯದ ಸ್ಥಿತಿ ಇಡೀ ಭಾರತದಲ್ಲಿ ಆದಂತೆ ಕರ್ನಾಟಕಲ್ಲಿಯೂ ಕೂಡ ಜಾತಿಯೇ ಮೇಲಾಗಿ, ಅನೇಕ ಮೌಢ್ಯಗಳನ್ನು ಜನರು ನಂಬುವಂತೆ ಮಾಡಿದರು.

ಆದರೆ ವಚನ ಸಾಹಿತ್ಯವು ಹೊರಗೆ ದೇವರನ್ನು ಹುಡುಕಿಸುವುದಲ್ಲ, ಜನರ ಅಂತರಂಗದಲ್ಲಿಯೇ ದೇವರನ್ನು ತೋರಿಸುತ್ತವೆ. ಇಂತಹ ವೈಚಾರಿಕ ಕಾರ್ಯಕ್ರಮ ಗದಗ-ಬೆಟಗೇರಿ ಮಹಾಜನತೆ ಈ ವಚನ ಶ್ರಾವಣ-2025 ಕಾರ್ಯಕ್ರಮದಲ್ಲಿ ಭಾಗವಹಿಸಿ ಯಶಸ್ವಿಗೊಳಿಸಲು ವಿನಂತಿಸುತ್ತೇವೆ.

–ಪ್ರಕಾಶ ಅಸುಂಡಿ.
ಬಸವದಳ, ಗದಗ-ಬೆಟಗೇರಿ.

### ಯೂರಿಯಾ ಖರೀದಿಗೆ ಮುಗಿಬಿದ್ದ ರೈತರು | ಅಂಗಡಿಗಳೆದುರು ನೂಕುನುಗ್ಗಲು

# ಗೊಬ್ಬರ ಖರೀದಿಗೆ ಪೊಲೀಸ್ ಕಾವಲು!



ಈಗಾಗಲೇ ನೂರಾರು ಟನ್ ಯೂರಿಯಾ ಗೊಬ್ಬರ ಮಾರಾಟ ಮಾಡಲಾಗಿದೆ. ಮಾರಾಟಗಾರ ಎಲ್ಲ ಅಂಗಡಿಗಳಿಗೂ ಭೇಟಿ ನೀಡಿ ಪರಿಶೀಲಿಸಲಾಗುತ್ತಿದೆ. ಯಾರೂ ಕೃತಕ ಅಭಾವ ಸೃಷ್ಟಿಸುವ/ಹೆಚ್ಚಿನ ಲಾಭಕ್ಕೆ ಮಾರುವುದು ಕಂಡು ಬಂದಿಲ್ಲ. ಇನ್ನಷ್ಟು ಬೇಡಿಕೆ ಸಲ್ಲಿಸಲಾಗಿದ್ದು, ಯೂರಿಯಾ ಪೂರೈಕೆಯಾಗಲಿದೆ. ರೈತರು ಹರಳು ಯೂರಿಯಾಕ್ಕೆ ಮುಗಿಬೀಳುವ ಬದಲು ನ್ಯಾನೋ ಯೂರಿಯಾ ಬಳಸಬೇಕು ಎಂದು ಶಿರಹಟ್ಟಿ ಸಹಾಯಕ ಕೃಷಿ ನಿರ್ದೇಶಕ ರೇವಣಪ್ಪ ಮನಗೂಳಿ ತಿಳಿಸಿದರು.

■ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ

ಯೂರಿಯಾ ಗೊಬ್ಬರಕ್ಕಾಗಿ ಪಟ್ಟಣದ ಕೃಷಿ ಪರಿಕರ ಅಂಗಡಿಯೆದುರು ನಸುಕಿನಲ್ಲಿಯೇ ರೈತರು ಸರದಿ ಸಾಲಿನಲ್ಲಿ ನಿಂತು ನೂಕು-ನುಗ್ಗಾಟದೊಂದಿಗೆ ಪೊಲೀಸರ ಕಾವಲಿನಲ್ಲಿ ಗೊಬ್ಬರ ಪಡೆಯುವಂತಾಗಿದೆ.

ಮುಂಗಾರಿನ ಸಕಾಲಿಕ ಮಳೆಯಿಂದ ಬಿತ್ತನೆ ಮಾಡಿದ ಬೆಳೆಗಳು ಸಮೃದ್ಧವಾಗಿ ಬೆಳೆದಿವೆ. ಆದರೆ ಕಳೆದ 20 ದಿನಗಳಿಂದ ಮಳೆಯೇ ಆಗದ್ದರಿಂದ ಯೂರಿಯಾ ಗೊಬ್ಬರದ ಅವಶ್ಯಕತೆಯಿದ್ದರೂ ರೈತರು ಸುಮ್ಮನಿದ್ದರು. ಕಳೆದ ಎರಡು ದಿನಗಳಿಂದ ತಾಲೂಕಿನಾದ್ಯಂತ ಉತ್ತಮ ಮಳೆಯಾಗಿದ್ದರಿಂದ ಗೊಬ್ಬರ ದಾಸ್ತಾನು ಬಂದಿರುವ ಸುದ್ದಿ ತಿಳಿದ ನೂರಾರು ರೈತರು ಏಕಕಾಲಕ್ಕೆ ದೌಡಾಯಿಸಿದ್ದಾರೆ.

ಪಟ್ಟಣ ಸಮೀಪದ ದೊಡ್ಡೂರ ಗ್ರಾಮದಲ್ಲಿ ಅಂಗಡಿ ತೆರೆಯುವ ಮುನ್ನವೇ ನೂರಾರು ರೈತರು ಏಕಕಾಲಕ್ಕೆ ಸೇರಿದ್ದರಿಂದ ನೂಕುನುಗ್ಗಲು ಉಂಟಾಯಿತು. ರೈತರು ಪರಸ್ಪರ ವಾಗ್ವಾದಕ್ಕಿಳಿದ ವಿಷಯ ತಿಳಿದ ಪೊಲೀಸರು ರೈತರನ್ನು ಸಾಲಿನಲ್ಲಿ ನಿಲ್ಲಿಸಿದರು. ಕೃಷಿ ಇಲಾಖೆ ಅಧಿಕಾರಿಗಳ ಸೂಚನೆಯಂತೆ ಪ್ರತಿ ರೈತರಿಗೆ 2/3 ಚೀಲ ಕೊಟ್ಟು ಸಮಾಧಾನಪಡಿಸಿದರು.

ಲಕ್ಷ್ಮೇಶ್ವರ ನೆರೆಯ ಕುಂದಗೋಳ, ಶಿರಹಟ್ಟಿ, ಶಿಗ್ಗಾಂವ, ಸವಣೂರ ತಾಲೂಕಿನ ರೈತರೂ ಗೊಬ್ಬರ ಖರೀದಿಗೆ ಬರುತ್ತಿದ್ದು, ಬೇಡಿಕೆ ಹೆಚ್ಚಿದ್ದರಿಂದ ಗೊಬ್ಬರದ ಕೊರತೆ ಕಾಡುತ್ತಿದೆ. ಭಾನುವಾರ ನಾಲ್ಕೈದು ಅಂಗಡಿಗಳು ಸೇರಿ ಒಟ್ಟು 200 ಟನ್ ಯೂರಿಯಾ ಗೊಬ್ಬರ ಬಂದರೂ ಸರದಿ ಸಾಲಿನಲ್ಲಿ ನಿಂತ ನೂರಾರು ರೈತರು ಗೊಬ್ಬರ ಸಿಗದೇ ಸಪ್ಪೆ ಮೋರೆಯೊಂದಿಗೆ ತೆರಳಿದರು. ಬೆಳಿಗ್ಗೆಯಿಂದ ಸಾಲಲ್ಲಿ ನಿಂತು ಗೊಬ್ಬರ ಸಿಗದೇ ಹೋಗುತ್ತಿದ್ದೇವೆ. ಯಾವಾಗ ಬರುತ್ತದೆ ಎಂಬ ಮಾಹಿತಿಯೂ ಸಿಗುತ್ತಿಲ್ಲ ಎಂಬ ಮಾತುಗಳು ರೈತರಿಂದ ಕೇಳಿ ಬಂದವು. ಗದಗ ಜಿಲ್ಲೆಗೆ ಗೊಬ್ಬರ ಪೂರೈಕೆಯಲ್ಲಿ ಪ್ರತಿಬಾರಿ ಮಲತಾಯಿಧೋರಣೆ ಎದ್ದು ಕಾಣುತ್ತಿದೆ. ಜಿಲ್ಲೆಗೆ ಅವಶ್ಯವಿರುವಷ್ಟು ಗೊಬ್ಬರ ಕಂಪನಿಯವರು ಪೂರೈಕೆ ಮಾಡುತ್ತಿಲ್ಲ. ಗೊಬ್ಬರ ಕಂಪನಿಗಳು ರೈತರ ಈ ಬೇಡಿಕೆಯನ್ನು ಬಂಡವಾಳ ಮಾಡಿಕೊಂಡು ವ್ಯಾಪಾರಸ್ಥರಿಗೆ ಯೂರಿಯಾದೊಂದಿಗೆ ಇತರೇ ಕಾಂಪ್ಲೆಕ್ಸ್ ಗೊಬ್ಬರ ಖರೀದಿಸುವಂತೆ ಕಟ್ಟಳೆ ಹಾಕುತ್ತಿದ್ದಾರೆ.

### ಗದಗ ಜಿಲ್ಲಾ ಕದಳಿ ಮಹಿಳಾ ದ್ವಿತೀಯ ಸಮ್ಮೇಳನದ ಅಂಗವಾಗಿ ಪೂರ್ವಭಾವಿ ಸಭೆ

# ವಚನಗಳ ಮೌಲ್ಯಗಳನ್ನು ತಿಳಿಸುವ ಪ್ರಯತ್ನವಾಗಲಿ




ಸಮ್ಮೇಳನದಲ್ಲಿ ಶರಣರ ವಚನ ಸಾಹಿತ್ಯವನ್ನು, ವಚನಕಾರರ ಕೊಡುಗೆಯನ್ನು, ಉಪನ್ಯಾಸ, ವಿಚಾರಗೋಷ್ಠಿ, ಚಿತ್ರಪ್ರದರ್ಶನಗಳ ಮೂಲಕ ಹಾಗೂ ವಚನಗಳ ಮೌಲ್ಯಗಳನ್ನು ಕಲಾತಂಡದವರ ಮೂಲಕ ತಿಳಿಸುವ ಪ್ರಯತ್ನ ನಡೆಯಬೇಕು. ರೂಪಕ, ನೃತ್ಯ, ವೇಷ-ಭೂಷಣಗಳ ಮೂಲಕ ವಚನಕಾರರ ಪರಿಚಯವನ್ನು ಮಾಡಿಕೊಡುವ ವಿಚಾರವಾಗಿ ಸಭೆಯಲ್ಲಿ ಚರ್ಚಿಸಲಾಯಿತು.


■ವಿಜಯಸಾಕ್ಷಿ ಸುದ್ದಿ, ಗದಗ

ನಮ್ಮ ಮುಂದಿನ ಪೀಳಿಗೆಗೆ ವಚನಕಾರರ ಪರಿಚಯ, ವಚನಗಳಲ್ಲಿನ ಆದರ್ಶ ಮೌಲ್ಯಗಳು ಹಾಗೂ ಅವರು ನಡೆದು ಬಂದ ದಾರಿಯ ಕುರಿತು ತಿಳಿಸುವ ಉದ್ದೇಶದಿಂದ ಆಗಸ್ಟ್ 24ರಂದು ಶ್ರೀ ತೋಂಟದ ಸಿದ್ಧಲಿಂಗ ಕಲ್ಯಾಣ ಮಂಟಪದಲ್ಲಿ ಜರುಗುವ ಜಿಲ್ಲಾ ಕದಳಿ ಮಹಿಳಾ ದ್ವಿತೀಯ ಸಮ್ಮೇಳನದ ಅಂಗವಾಗಿ ಚರ್ಚಿಸಲು ಗದಗ ಜಿಲ್ಲಾ ಶರಣ ಸಾಹಿತ್ಯ ಪರಿಷತ್ತಿನ ಕಾರ್ಯಾಲಯದಲ್ಲಿ ಗದಗ ತಾಲೂಕ ಶರಣ ಸಾಹಿತ್ಯ ಪರಿಷತ್ ಹಾಗೂ ಕದಳಿ ಮಹಿಳಾ ವೇದಿಕೆಯಿಂದ ಪೂರ್ವಭಾವಿ ಸಭೆಯನ್ನು ಹಮ್ಮಿಕೊಳ್ಳಲಾಗಿತ್ತು.

ಜಿಲ್ಲಾ ಶಸಾಪ ಮಾಜಿ ಕಾರ್ಯದರ್ಶಿ ರಾಜಶೇಖರ ದಾನರಡ್ಡಿ ಶರಣ ಸಾಹಿತ್ಯ ಪರಿಷತ್ತು ನಡೆದು ಬಂದ ದಾರಿಯ ಕುರಿತು ಮಾತನಾಡಿದರು. ಗದಗ ತಾಲೂಕು ಶಸಾಪ ಅಧ್ಯಕ್ಷ ಶರಣ ಪ್ರಕಾಶ ಅಸುಂಡಿ, ಪರಿಷತ್ತಿನ ಅಜೀವ ಸದಸ್ಯ ಶರಣ ಪಿ.ಟಿ. ನಾರಾಯಣಪುರ, ಸಭೆಯ ಅಧ್ಯಕ್ಷತೆ ವಹಿಸಿದ್ದ ಶರಣೆ ರತ್ನಕ್ಕ ಪಾಟೀಲ ಮಾತನಾಡಿದರು.

ಶರಣೆ ಡಾ. ಗಿರಿಜಾ ಹಸಬಿ ವಚನ ಪ್ರಾರ್ಥನೆಗೈದರು. ಗದಗ ತಾಲೂಕು ಕದಳಿ ಮಹಿಳಾ ವೇದಿಕೆಯ ಅಧ್ಯಕ್ಷರಾದ ಶರಣೆ ಸುಲೋಚನಾ ಎಂ. ಐಹೊಳಿ ಸ್ವಾಗತಿಸಿದರು. ಶರಣೆ ಕಲಾವತಿ ಸಿ. ಹನಮಂತಗೌಡರ ನಿರೂಪಿಸಿದರು. ಕದಳಿ ಮಹಿಳಾ ವೇದಿಕೆಯ ಉಪಾಧ್ಯಕ್ಷೆ ಶರಣೆ ರೇಣುಕಾ ವ್ಹಿ.ಕರೇಗೌಡ್ರ ಶರಣು ಸಮರ್ಪಣೆಗೈದರು. ಸಭೆಯಲ್ಲಿ ಗದಗ ತಾಲೂಕಾ ಕದಳಿ ಮಹಿಳಾ ವೇದಿಕೆಯ ಕಾರ್ಯದರ್ಶಿ ಜ್ಯೋತಿ ಹೇರಲಗಿ, ಅಕ್ಕಮಹಾದೇವಿ ಚಟ್ಟಿ, ಮಂಜುಳಾ ಅಕ್ಕಿ, ಲಲಿತಾ ಉಮನಾಬಾದಿ, ನಿರ್ಮಲಾ ಪಾಟೀಲ, ಡಾ. ದೀಪಾ ಮೂರಶಿಳ್ಳಿನ, ಶಿವಲೀಲಾ ಅಕ್ಕಿ, ಶರಣರಾದ ಎಸ್.ಪಿ. ದೊಡ್ಡಣ್ಣವರ, ಎನ್. ಎಂ. ಪವಾಡಿಗೌಡ್ರ, ಎಸ್.ಬಿ. ಅಂಗಡಿ, ಎಸ್.ಎ. ಮುಗದ, ಕೆ.ಎಚ್. ಬೇಲೂರ, ಬಸವರಾಜ ವಾರಿ, ಮಾಂತೇಶ ಅಂಗಡಿ, ಬೂದಪ್ಪ ಅಂಗಡಿ ಮುಂತಾದವರು ಉಪಸ್ಥಿತರಿದ್ದರು.

# ಆಯುಷ್ ಆಸ್ಪತ್ರೆ ನಿರ್ಮಾಣದ ಪ್ರಸ್ತಾಪ; ಹರ್ಷ



■ ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ

ತಾಲೂಕಿನ ಒಡೆಯರ ಮಲ್ಲಾಪುರ ಗ್ರಾಮ ವ್ಯಾಪ್ತಿಯ ಸರ್ಕಾರಿ ಭೂಮಿಯಲ್ಲಿ 10 ಹಾಸಿಗೆಗಳ ಆಯುಷ್ ಆಸ್ಪತ್ರೆಯನ್ನು ನಿರ್ಮಾಣ ಮಾಡುವ ಬಗ್ಗೆ ಮಂಗಳವಾರ ಶಿರಹಟ್ಟಿಯಲ್ಲಿ ತಾಲೂಕು ಆಸ್ಪತ್ರೆ ನಿರ್ಮಾಣದ ಶಂಕುಸ್ಥಾಪನೆ ಕಾರ್ಯಕ್ರಮದಲ್ಲಿ ಆರೋಗ್ಯ ಸಚಿವ ದಿನೇಶ ಗುಂಡೂರಾವ್ ಪ್ರಸ್ತಾಪಿಸಿರುವುದಕ್ಕೆ ಗ್ರಾ.ಪಂ ಸದಸ್ಯ ಪದ್ಮರಾಜ ಪಾಟೀಲ ಹರ್ಷ ವ್ಯಕ್ತಪಡಿಸಿದ್ದಾರೆ.

ಒಡೆಯರ ಮಲ್ಲಾಪುರ ಗ್ರಾಮ ವ್ಯಾಪ್ತಿಯಲ್ಲಿ ಆಯುಷ್ ಆಸ್ಪತ್ರೆ ನಿರ್ಮಾಣಕ್ಕೆ 2 ಎಕರೆ ಭೂಮಿಯನ್ನು ನೀಡಲು ಗ್ರಾ.ಪಂನಿಂದ ಠರಾಯಿಸಲಾಗಿದೆ. ಲಕ್ಷ್ಮೇಶ್ವರ ತಾಲೂಕಾ ಕೇಂದ್ರವಾಗಿದೆಯಲ್ಲದೇ ನೆರೆಯ ಸವಣೂರ, ಶಿಗ್ಗಾಂವ, ಶಿರಹಟ್ಟಿ, ಕುಂದಗೋಳ ತಾಲೂಕಿನ ಜನರಿಗೆ ಕೇಂದ್ರ ಸ್ಥಳವಾಗಿದೆ.

ಆಯುಷ್ ಆಸ್ಪತ್ರೆ ನಿರ್ಮಾಣವಾದರೆ ಈ ಎಲ್ಲ ಭಾಗದ ಜನರ ಆರೋಗ್ಯದ ದೃಷ್ಟಿಯಿಂದ ಅನಕೂಲವಾಗಲಿದೆ. ಈ ಬಗ್ಗೆ ಈ ವರ್ಷ ಮಾರ್ಚ್‌ನಲ್ಲಿ ಕೆಪಿಪಿಸಿ ಸದಸ್ಯ, ಕಾಂಗ್ರೆಸ್ ಯುವ ನಾಯಕರಾದ ಆನಂದಸ್ವಾಮಿ ಗಡ್ಡದೇವರಮಠ ಆಯುಷ್ ಇಲಾಖೆಯ ಆಯುಕ್ತರಿಗೆ ಮನವಿ ಸಲ್ಲಿಸಿ ಸಚಿವರ ಗಮನ ಸೆಳೆದಿದ್ದರ್ದೆಂದು ಅವರು ಸ್ಮರಿಸಿದ್ದಾರೆ.


# ಅರ್ಜಿ ಆಹ್ವಾನ

▶▶ ಮೊದಲನೇ ಪುಟದಿಂದ

ಬೆಂಗಳೂರು ಒನ್ ಮತ್ತು ಕರ್ನಾಟಕ ಒನ್ ಸೇವಾ ಕೇಂದ್ರಗಳಲ್ಲಿ ಆನ್ಲೈನ್ ಮೂಲಕ ಅರ್ಜಿಗಳನ್ನು ಸಲ್ಲಿಸಬಹುದಾಗಿರುತ್ತದೆ. ನಿಗಮದ ವೆಬ್‌ಸೈಟ್ www.dbcdc.karnataka.gov.in ಇಲ್ಲಿ ಸಂಪರ್ಕಿಸಿ ಹೆಚ್ಚಿನ ಮಾಹಿತಿ ಪಡೆಯಬಹುದಾಗಿರುತ್ತದೆ ಅಥವಾ ನಿಗಮದ ಸಹಾಯವಾಣಿ ಸಂಖ್ಯೆ:080-22374832 ಮತ್ತು 8050770004 ಅಥವಾ 8050770005 ಅಥವಾ ಜಿಲ್ಲಾ ಕಚೇರಿಯ ದೂರವಾಣಿ 08372-232327 ಸಂಪರ್ಕಿಸಬಹುದು. ಸೇವಾಸಿಂಧು ತಂತ್ರಾಂಶದ ಮುಖಾಂತರ ಅರ್ಜಿ ಸಲ್ಲಿಸಬಹುದಾಗಿದೆ.

### ಅಘೋಷಿತ ಗುಡಿಸಲು ಪ್ರದೇಶಗಳ ಘೋಷಣೆಗೆ ಆಗ್ರಹಿಸಿ ಸ್ಲಂ ಬೋರ್ಡ್ ಅಧಿಕಾರಿಗಳಿಗೆ ಮನವಿ

# ಸರ್ಕಾರದ ಹಣ ದುರ್ಬಳಕೆಯ ತನಿಖೆಯಾಗಲಿ



ಸ್ಲಂ ಬೋರ್ಡ್ ಅಧಿಕಾರಿಗಳು ಸಚಿವರ ಹಾಗೂ ಅಧ್ಯಕ್ಷರ ಆದೇಶವನ್ನು ಗಾಳಿಗೆ ತೂರಿ ಸ್ಲಂ ಜನರ ವಿರೋಧಿ ನೀತಿ ಅನುಸರಿಸುತ್ತಿರುವುದನ್ನು ಖಂಡಿಸುತ್ತೇವೆ. ಗದಗ-ಬೆಟಗೇರಿ ನಗರದ ಸ್ಲಂ ಪ್ರದೇಶಗಳಲ್ಲಿ ವಸತಿಗಾಗಿ ಪ್ರಧಾನ ಮಂತ್ರಿಗಳ ಆವಾಸ್ ಯೋಜನೆಯಲ್ಲಿ 863 ಮನೆಗಳು ಮಂಜೂರಾಗಿದ್ದು, ಗುತ್ತಿಗೆದಾರರು ಎಲ್ಲಾ ಮನೆಗಳ ಕಟ್ಟಡ ನಿರ್ಮಾಣ ಕಾರ್ಯವನ್ನು ಪೂರ್ಣಗೊಳಿಸಿದ್ದೇವೆ ಎಂದು ಸುಳ್ಳು ಹೇಳಿ ಸರ್ಕಾರದ ಹಣವನ್ನು ದುರ್ಬಳಕ್ಕೆ ಮಾಡಿಕೊಂಡಿರುವುದನ್ನು ತನಿಖೆಗೆ ಒಳಪಡಿಸಬೇಕೆಂದು ಇಮ್ತಿಯಾಜ್ ಮಾನ್ವಿ ಒತ್ತಾಯಿಸಿದರು.

■ ವಿಜಯಸಾಕ್ಷಿ ಸುದ್ದಿ, ಗದಗ

ಗದಗ-ಬೆಟಗೇರಿ ಅವಳಿ ನಗರದಲ್ಲಿಯ ಅಘೋಷಿತ ಗುಡಿಸಲು ಪ್ರದೇಶಗಳನ್ನು ಸ್ಲಂ ಕಾಯ್ದೆ 1973ರ ಪ್ರಕಾರ ಅಧಿಕೃತವಾಗಿ ಸ್ಲಂ ಘೋಷಣೆ ಮಾಡಿ ಸ್ಥಳೀಯವಾಗಿ ನಾಗರಿಕ ಸೌಲಭ್ಯಗಳನ್ನು ಕಲ್ಪಿಸಬೇಕೆಂದು ಸ್ಲಂ ಜನಾಂದೋಲನ-ಕರ್ನಾಟಕ ಮತ್ತು ಗದಗ ಜಿಲ್ಲಾ ಸ್ಲಂ ಸಮಿತಿ ಪದಾಧಿಕಾರಿಗಳು ಕರ್ನಾಟಕ ಕೊಳಗೇರಿ ಅಭಿವೃದ್ಧಿ ಮಂಡಳಿಯ ಸಹಯಾಕ ಕಾರ್ಯಪಾಲಕ ಅಭಿಯಂತರರಿಗೆ ಮನವಿ ಸಲ್ಲಿಸಿ ಆಗ್ರಹಿಸಿದರು.

ಗದಗ ಜಿಲ್ಲಾ ಸ್ಲಂ ಸಮಿತಿ ಅಧ್ಯಕ್ಷ ಇಮ್ತಿಯಾಜ ಆರ್. ಮಾನ್ವಿ ಮಾತನಾಡಿ, ಗದಗ-ಬೆಟಗೇರಿ ನಗರದ ಅನೇಕ ಅಘೋಷಿತ ಗುಡಿಸಲು ಪ್ರದೇಶಗಳನ್ನು ಘೋಷಣೆಗಾಗಿ ಸ್ಥಳೀಯ ನಿವಾಸಿಗಳ ಎಲ್ಲಾ ದಾಖಲೆಗಳೊಂದಿಗೆ ಹಾಗೂ ನಗರಸಭೆಯಿಂದ ನೀಡಲಾಗಿರುವ ಠರಾವು ಪ್ರತಿ ಮತ್ತು ನಿರಾಕ್ಷೇಪಣಾ ಪತ್ರದೊಂದಿಗೆ ಅರ್ಜಿಗಳನ್ನು ಸಲ್ಲಿಸಿ 3 ವರ್ಷಗಳಾದರೂ ಈವರೆಗೂ ಸ್ಲಂ ಘೋಷಣೆ ಕುರಿತು ಅಗತ್ಯ ಕ್ರಮ ಕೈಗೊಳ್ಳದೇ ಸ್ಲಂ ಜನ ವಿರೋಧಿ ನೀತಿಯನ್ನು ಅನುಸರಿಸಲಾಗುತ್ತಿದೆ.

ಗದಗ ಜಿಲ್ಲಾ ಸ್ಲಂ ಸಮಿತಿಯಿಂದ ಹಲವಾರು ವರ್ಷಗಳಿಂದ ಗದಗ ಜಿಲ್ಲೆಯ ಮತ್ತು ಗದಗ-ಬೆಟಗೇರಿ ನಗರದ ಸ್ಲಂ ಪ್ರದೇಶದ ಕುಟುಂಬಗಳ ವಸತಿ, ಮೂಲಭೂತ ಸೌಲಭ್ಯ, ಹಕ್ಕುಪತ್ರ, ಪರಿಚಯ ಪತ್ರ, ಅಘೋಷಿತ ಗುಡಿಸಲು ಪ್ರದೇಶಗಳ ಘೋಷಣೆ ಇತ್ಯಾದಿ ಹಕ್ಕೊತ್ತಾಯಗಳಿಗೆ ಆಗ್ರಹಿಸಿ ನಿರಂತರ ಪ್ರತಿಭಟನೆಗಳನ್ನು ನಡೆಸಿ ಅಧಿಕಾರಿಗಳ ಗಮನಕ್ಕೆ ತರಲಾಗುತ್ತಿದೆ.

ರಾಜ್ಯ ಸರ್ಕಾರದ ವಸತಿ ಇಲಾಖೆ ಸಚಿವರನ್ನು ಮತ್ತು ಸ್ಲಂ ಬೋರ್ಡ್ ಅಧ್ಯಕ್ಷರನ್ನು ಭೇಟಿ ಮಾಡಿ ಗದಗ-ಬೆಟಗೇರಿ ನಗರದ ಮತ್ತು ಗದಗ ಜಿಲ್ಲೆಯ ವಿವಿಧ ತಾಲೂಕ ಕೇಂದ್ರಗಳಲ್ಲಿ ಬರುವ ಸ್ಲಂ ಪ್ರದೇಶಗಳ ಅಭಿವೃದ್ಧಿ ಮತ್ತು ಸಮಸ್ಯೆಗಳ ಕುರಿತು ಚರ್ಚೆ ನಡೆಸಿ ವಿಶೇಷವಾಗಿ ಗದಗ-ಬೆಟಗೇರಿ ನಗರದಲ್ಲಿರುವ ಸ್ಲಂ ಪ್ರದೇಶಗಳ ಜನಸಂಖ್ಯೆಗೆ ಅನುಗುಣವಾಗಿ ವಸತಿ ಯೋಜನೆಯಲ್ಲಿ ಮನೆಗಳನ್ನು ಮಂಜೂರು ಮಾಡಲು ಹಾಗೂ ಸ್ಥಳೀಯ ಸ್ಲಂ ಪ್ರದೇಶಗಳ ಅಭಿವೃದ್ಧಿಗಾಗಿ ಅನುದಾನ ಮಂಜೂರು ಮಾಡಬೇಕೆಂದು ಮನವಿ ಮಾಡಲಾಗಿದೆ ಎಂದು ತಿಳಿಸಿದರು.

ಈ ಸಂದರ್ಭದಲ್ಲಿ ಗದಗ ಜಿಲ್ಲಾ ಸ್ಲಂ ಸಮಿತಿ ಕಾರ್ಯದರ್ಶಿ ಅಶೋಕ ಕುಸಬಿ, ಮಹಿಳಾ ಸಮಿತಿ ಸಂಚಾಲಕಿ ಪರವೀನಬಾನು ಹವಾಲ್ದಾರ, ಮೆಹರುನಿಸಾ ಡಂಬಳ, ಸ್ಲಂ ಸಮಿತಿ ಮುಖಂಡರಾದ ಇಬ್ರಾಹಿಂ ಮುಲ್ಲಾ, ಮೌಲಾಸಾಬ ಗಚ್ಚಿ, ಶರಣಪ್ಪ ಸೂಡಿ, ಮೆಹಬೂಬಸಾಬ ಬಳ್ಳಾರಿ, ದುರ್ಗಪ್ಪ ಮಣ್ಣವಡ್ಡರ, ಖಾಜಾಸಾಬ ಇಸ್ಮಾಯಿಲನವರ, ಮೈಮುನ ಬೈರಕದಾರ, ಲಕ್ಷ್ಮೀ ಮಣ್ಣವಡ್ಡರ, ಸಲೀಂ ಹರಿಹರ, ಶಿವಪ್ಪ ರೋಣದ, ರವಿ ಗೋಸಾವಿ, ಜಂದಿಸಾಬ ಬಳ್ಳಾರಿ, ಖಾಜಾಸಾಬ ಬಳ್ಳಾರಿ ಸೇರಿದಂತೆ ಪದಾಧಿಕಾರಿಗಳು ಉಪಸ್ಥಿತರಿದ್ದರು.

# ನ್ಯಾ. ಯಶವಂತ್ ವರ್ಮಾ ಅರ್ಜಿ ವಿಚಾರಣೆಯಿಂದ ಹಿಂದೆ ಸರಿದ ಸಿಜೆಐ ಗವಾಯಿ

■ ವಿಜಯಸಾಕ್ಷಿ ಸುದ್ದಿ, ನವದೆಹಲಿ

ದೆಹಲಿಯ ಮನೆಯಲ್ಲಿ ಹಣ ಪತ್ತೆಯಾದ ಬಗ್ಗೆ ಸುಪ್ರೀಂ ಕೋರ್ಟ್‌ನ ಆಂತರಿಕ ಸಮಿತಿ ನೀಡಿದ ವರದಿ ಪ್ರಶ್ನಿಸಿ ನ್ಯಾಯಮೂರ್ತಿ ಯಶವಂತ್ ವರ್ಮಾ ಸಲ್ಲಿಸಿರುವ ಅರ್ಜಿಯ ವಿಚಾರಣೆಯಿಂದ ಮುಖ್ಯ ನ್ಯಾಯಮೂರ್ತಿ ಬಿಆರ್ ಗವಾಯಿ ಬುಧವಾರ ಹಿಂದೆ ಸರಿದಿದ್ದಾರೆ.

ಪ್ರಸ್ತುತ ಅಲಹಾಬಾದ್ ಹೈಕೋರ್ಟ್‌ಗೆ ವರ್ಗಾವಣೆಗೊಂಡಿರುವ ನ್ಯಾ. ಯಶವಂತ್ ವರ್ಮಾ ಅವರು, ದೆಹಲಿ ಹೈಕೋರ್ಟ್‌ನಲ್ಲಿ ಕಾರ್ಯನಿರ್ವಹಿಸುತ್ತಿದ್ದಾಗ ಅವರ ಸರ್ಕಾರಿ ನಿವಾಸದಲ್ಲಿ ಲೆಕ್ಕಕ್ಕೆ ಸಿಗದ ದೊಡ್ಡ ಮೊತ್ತದ ಹಣ ಪತ್ತೆಯಾಗಿತ್ತು.

ಈ ಬಗ್ಗೆ ತನಿಖೆ ನಡೆಸಲು ನೇಮಿಸಿದ್ದ ಸುಪ್ರೀಂ ಕೋರ್ಟ್‌ನ ಆಂತರಿಕ ಸಮಿತಿ, ಹಣ ಪತ್ತೆಯಾಗಿರುವುದನ್ನು ದೃಢೀಕರಿಸಿ ವರದಿ ನೀಡಿತ್ತು.

ಈ ವರದಿಯನ್ನು ಪ್ರಶ್ನಿಸಿ ನ್ಯಾ. ವರ್ಮಾ ಸುಪ್ರೀಂ ಕೋರ್ಟ್ ಮೆಟ್ಟಿಲೇರಿದ್ದಾರೆ.

# ಪ್ರತಿಪಕ್ಷಗಳಿಂದ ತೀವ್ರ ಪ್ರತಿಭಟನೆ: ಮೂರನೇ ದಿನವೂ ಸಂಸತ್ ಕಲಾಪ ಮುಂದೂಡಿಕೆ

■ ವಿಜಯಸಾಕ್ಷಿ ಸುದ್ದಿ, ನವದೆಹಲಿ

ಪ್ರತಿಪಕ್ಷಗಳ ತೀವ್ರ ಪ್ರತಿಭಟನೆ ಹಿನ್ನೆಲೆ ಮೂರನೇ ದಿನವೂ ಸಂಸತ್ತಿನ ಉಭಯ ಸದನಗಳ ಕಲಾಪ ಮುಂದೂಡಿಕೆಯಾಗಿದೆ.

ಆರಂಭದಲ್ಲಿ ಮಧ್ಯಾಹ್ನ 12 ಗಂಟೆಯವರೆಗೆ ಕಲಾಪ ಮುಂದೂಡಿಕೆಯಾಗಿದೆ. ನಂತರದ ಬೆಳವಣಿಗೆ ಕಾದು ನೋಡಬೇಕಿದೆ.

ಬಿಹಾರದಲ್ಲಿ ಮತದಾರರ ಪಟ್ಟಿಯ ಪರಿಷ್ಕರಣೆ, ಪಹಲ್ಗಾಮ್ ಭಯೋತ್ಪಾದಕ ದಾಳಿ ಮತ್ತು ಆಪರೇಷನ್ ಸಿಂಧೂರ ಕುರಿತು ಉಭಯ ಸದನಗಳಲ್ಲಿ ಚರ್ಚಿಸುವಂತೆ ಆಗ್ರಹಿಸಿ ಕಳೆದ ಮೂರು ದಿನಗಳಿಂದ ಪ್ರತಿಪಕ್ಷಗಳು ಪ್ರತಿಭಟಿಸುತ್ತಿವೆ.

"ಪ್ರತಿಪಕ್ಷಗಳ ಬೇಡಿಕೆಯನ್ನು ಪರಿಗಣಿಸುತ್ತಿಲ್ಲ. ಇದರಿಂದ ಕಲಾಪಕ್ಕೆ ಅಡ್ಡಿಯಾಗುತ್ತಿದೆ. ಕಲಾಪಕ್ಕೆ ತಡೆಯಾದರೆ, ಅದರ ಅತಿದೊಡ್ಡ ಫಲಾನುಭವಿ ಸರ್ಕಾರ" ಎಂದು ತೃಣಮೂಲ ಕಾಂಗ್ರೆಸ್ (ಟಿಎಂಸಿ) ಸಂಸದ ಡೆರೆಕ್ ಒ ಬ್ರಿಯಾನ್ ಹೇಳಿದ್ದಾರೆ.

"ಸಂಸತ್ತು ಕಾರ್ಯ ನಿರ್ವಹಿಸದಿದ್ದರೆ ಅದರ ಲಾಭ ಯಾರಿಗೆ? ಸರ್ಕಾರಕ್ಕೆ. ಏಕೆಂದರೆ, ಸಂಸತ್ತಿನ ಜವಾಬ್ದಾರಿ ಸರ್ಕಾರದ ಮೇಲಿದೆ. ಜನರ ಜವಾಬ್ದಾರಿ ಸಂಸತ್ತಿನ ಮೇಲಿದೆ.

# ನೂತನ ಕಾರ್ಯಾಲಯದ ಉದ್ಘಾಟನೆ ಜು.27ಕ್ಕೆ

▶▶ ಮೊದಲನೇ ಪುಟದಿಂದ

ಸಭೆ ಹಾಗೂ 2024-25ನೇ ಸಾಲಿನ ವಿದ್ಯಾರ್ಥಿಗಳಿಗೆ ಪ್ರತಿಭಾ ಪುರಸ್ಕಾರ ಜರುಗಲಿದೆ.

ಕಾರ್ಯಕ್ರಮವನ್ನು ಸಚಿವ ಡಾ. ಎಚ್. ಕೆ. ಪಾಟೀಲ ಉದ್ಘಾಟಿಸುವರು. ಮುಖ್ಯ ಅತಿಥಿಗಳಾಗಿ ವಿ.ಪ ಸದಸ್ಯ ಎಸ್.ವ್ಹಿ. ಸಂಕನೂರ, ಮಾಜಿ ಶಾಸಕರಾದ ಡಿ.ಆರ್. ಪಾಟೀಲ, ಬಿ.ಆರ್. ಯಾವಗಲ್ಲ ಆಗಮಿಸುವರು. ಕಾರ್ಯಕ್ರಮದ ಅಧ್ಯಕ್ಷತೆಯನ್ನು ಸಂಘದ ಅಧ್ಯಕ್ಷ ಡಾ. ನಾಗರಾಜ ಶಂ.ಸಜ್ಜನರ ವಹಿಸುವರು.

ಸಂಘದ ಅಧ್ಯಕ್ಷರು, ಉಪಾಧ್ಯಕ್ಷರು, ಪದಾಧಿಕಾರಿಗಳು, ಸಲಹಾ ಸಮಿತಿ ಸದಸ್ಯರು, ಮಹಿಳಾ ಘಟಕದ ಪದಾಧಿಕಾರಿಗಳು ಹಾಗೂ ಗದಗ ಜಿಲ್ಲಾ ಎಲ್ಲಾ ತಾಲೂಕುಗಳ ಸಮಾಜದ ಸರ್ವ ಸದಸ್ಯರು ಸ್ವಾಗತ ಕೋರಿದ್ದಾರೆ.

# ರೈತ ಬಾಂಧವರ ಗಮನಕ್ಕೆ

■ ವಿಜಯಸಾಕ್ಷಿ ಸುದ್ದಿ, ಗದಗ

ಜಿಲ್ಲೆಯಲ್ಲಿ ಮುಂಗಾರು ಮಳೆ ದಿ:16.07.2025 ರಿಂದ ದಿ:22.07.2025 ವರೆಗೆ 15.00 ಮಿ.ಮೀ. ಮಳೆಗೆ 52.00 ಮಿ.ಮೀ. ಆಗಿದ್ದು, ವಾಡಿಕೆಗಿಂತ ಶೇ.243 ಹೆಚ್ಚು ಆಗಿದೆ. ಈಗಾಗಲೇ ಬಿತ್ತನೆಯಾಗಿ 40 ರಿಂದ 50 ದಿನಗಳ ಬೆಳೆಗೆ ಮೇಲು ಗೊಬ್ಬರವಾಗಿ ಯೂರಿಯಾ ರಸಗೊಬ್ಬರವನ್ನು ನೀಡಲಾಗುತ್ತಿದೆ. ಮುಸುಕಿನ ಜೋಳದಲ್ಲಿ ಯೂರಿಯಾ ರಸಗೊಬ್ಬರವನ್ನು ಮೇಲುಗೊಬ್ಬರವಾಗಿ ಒಂದಕ್ಕಿಂತ ಹೆಚ್ಚು ಬಾರಿ ನೀಡಲಾಗುತ್ತಿದೆ.

ಶಿಫಾರಸ್ಸಿನ ಪ್ರಮಾಣಕ್ಕಿಂತ ಹೆಚ್ಚು ಯೂರಿಯಾ ರಸಗೊಬ್ಬರವನ್ನು ಬಳಸುವುದರಿಂದ ಬೆಳೆ ಹುಲುಸಾಗಿ ಬೆಳೆದು, ಕೀಟ ಮತ್ತು ರೋಗ ಬಾಧೆ ಹೆಚ್ಚಾಗುತ್ತದೆ. ಕೀಟ ಮತ್ತು ರೋಗ ಬಾಧೆಗಳನ್ನು ನಿಯಂತ್ರಿಸಲು ಪೀಡೆ ನಾಶಕಗಳನ್ನು ವಿವೇಚನಾ ರಹಿತವಾಗಿ ಬಳಸಲಾಗುತ್ತಿದೆ. ಇದರಿಂದ ರಾಸಾಯನಿಕಗಳು ಆಹಾರ ಸರಪಳಿಯಲ್ಲಿ ಬಂದು, ಪ್ರಾಣಿ/ಪಕ್ಷಿ ಹಾಗೂ ಮನುಷ್ಯರಲ್ಲಿ ಬೇರೆ ಬೇರೆ ಗಂಭೀರ ರೋಗಗಳಿಗೆ ಕಾರಣವಾಗುತ್ತದೆ.

ಯೂರಿಯಾ ರಸಗೊಬ್ಬರದಲ್ಲಿನ 30-50%ರಷ್ಟು ಸಾರಜನಕ ಮಾತ್ರ ಬೆಳೆಗಳಿಂದ ಹೀರಲ್ಪಟ್ಟು, ಉಳಿದ ಲಭ್ಯವಿಲ್ಲದ ಸಾರಜನಕವು ನೈಟ್ರೇಟ್ ರೂಪದಲ್ಲಿ ಮಣ್ಣು, ಗಾಳಿ ಮತ್ತು ನೀರನ್ನು ಕಲುಷಿತಗೊಳಿಸಿ, ಮಾನವನ ಆರೋಗ್ಯ ಮತ್ತು ಪರಿಸರದ ಮೇಲೆ ದುಷ್ಪರಿಣಾಮ ಬೀರುತ್ತಿದೆ.

ಸೆಂಟ್ರಲ್ ಗ್ರೌಂಡ್ ವಾಟರ್ ಬೋರ್ಡ್ ರವರ 2024 ರ ವರದಿಯ ಪ್ರಕಾರ ಅತಿಯಾದ ಸಾರಜನಕಯುಕ್ತ ರಾಸಾಯನಿಕ ಗೊಬ್ಬರಗಳಾದ ಯೂರಿಯಾ ಬಳಕೆಯಿಂದ ಅಂತರ್ಜಲ ಕಲುಷಿತಗೊಂಡಿದ್ದು, ಸುಮಾರು 443 ಜಿಲ್ಲೆಗಳ ಅಂತರ್ಜಲವು ಅತಿಯಾದ ನೈಟ್ರೇಟ್‌ನಿಂದ ಮಲಿನಗೊಂಡಿರುತ್ತದೆ. ವಿಶ್ವ ಆರೋಗ್ಯ ಸಂಸ್ಥೆಯ ಪ್ರಕಾರ ನೀರಿನಲ್ಲಿ ನೈಟ್ರೇಟ್ ಅಂಶವು ಗರಿಷ್ಠ 45ಎಮ್.ಜಿ./ಲೀ.ಗೆ ಸೀಮಿತವಾಗಿದ್ದು, ಕರ್ನಾಟಕದಲ್ಲಿ 2023ನೇ ಸಾಲಿನಲ್ಲಿ 345 ನೀರಿನ ಮಾದರಿಗಳ ವಿಶ್ಲೇಷಣೆಯ ಪೈಕಿ 169 ಮಾದರಿಗಳಲ್ಲಿ (48.99%) ನೈಟ್ರೇಟ್ ಅಂಶವು>45 ಎಮ್.ಜಿ./ಲೀ. ಇರುವುದು ಕಂಡು ಬಂದಿದೆ. ಇಂತಹ ನೀರನ್ನು ಬಳಸುವುದರಿಂದ ಮನುಷ್ಯನ ಆರೋಗ್ಯದ ಮೇಲೆ, ವಿಶೇಷವಾಗಿ ಶಿಶುಗಳ ಆರೋಗ್ಯದ ಮೇಲೆ ದುಷ್ಪರಿಣಾಮ ಬೀರುತ್ತಿದೆ.

ಜಿಲ್ಲೆಯಲ್ಲಿ ಇರಬೇಕಾದ ಸಾರಜನಕ:ರಂಜಕ:ಪೊಟ್ಯಾಶ್ ಅನುಪಾತವು 4:2:1 ಇದ್ದು, ರಾಸಾಯನಿಕ ಗೊಬ್ಬರಗಳ ಅಸಮತೋಲನ ಬಳಕೆಯಿಂದ 7.44:4.31:1.0 ಆಗಿದೆ. ಯೂರಿಯಾ ಬಳಕೆಯನ್ನು ಪರಿಣಾಮಕಾರಿಯಾಗಿ ಕಡಿತಗೊಳಿಸಲು ಮಣ್ಣು ಪರೀಕ್ಷೆಯ ವರದಿಯನ್ವಯ, ಶಿಫಾರಸ್ಸಿನಂತೆ ಬಳಸಬೇಕು. ದ್ವಿದಳ ಧಾನ್ಯ ಬೆಳೆಗಳ ಬೇರಿನಲ್ಲಿ, ವಾತಾವರಣದಲ್ಲಿರುವ ಸಾರಜನಕವನ್ನು ಹೀರಿ ಮಣ್ಣಿಗೆ ಕೊಡುವ ಸೂಕ್ಷ್ಮಾಣು ಜೀವಿಗಳು ಇರುತ್ತವೆ. ದ್ವಿದಳ ಧಾನ್ಯ ಬೆಳೆಗಳೊಂದಿಗೆ ಬೆಳೆ ಪರಿವರ್ತನೆ ಮಾಡಬೇಕು.

ಜಿಲ್ಲೆಯ ರೈತರು ಪರ್ಯಾಯ ಗೊಬ್ಬರಗಳಾದ ಸಾವಯವ ಗೊಬ್ಬರ, ಹಸಿರೆಲೆ ಗೊಬ್ಬರ, ಜೈವಿಕ ಗೊಬ್ಬರ, ನ್ಯಾನೋ ಗೊಬ್ಬರಗಳ ಬಳಕೆಯನ್ನು ಮಾಡಬೇಕೆಂದು ಜಂಟಿ ಕೃಷಿ ನಿರ್ದೇಶಕರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

### ಜಕ್ಕಲಿ ಸರ್ಕಾರಿ ಪ್ರೌಢಶಾಲೆಯಲ್ಲಿ ಗುರುವಂದನೆ, ಸ್ನೇಹ ಸಮ್ಮಿಲನ ಕಾರ್ಯಕ್ರಮ

# ನಿವೃತ್ತ ಶಿಕ್ಷಕರಿಗೆ ಸನ್ಮಾನ




ನಿವೃತ್ತ ಶಿಕ್ಷಕರಾದ ಎಸ್.ಬಿ. ಗುಳಗಣ್ಣವರ, ಎಂ.ವೈ. ಹಳೆಮನೆ, ಎಸ್.ವಾಯ್. ಬೂದಿಹಾಳ, ಆರ್.ಬಿ. ತಳವಾರ, ಡಿ.ಬಿ. ತಳವಾರ, ಎಸ್.ಟಿ. ಕಳಸಾಪೂರ, ಎಸ್.ಆರ್. ಬಾಗಲಿ, ಎಸ್.ಬಿ. ಬಳಿಗೇರ, ನಿವೃತ್ತ ದ್ವಿತೀಯ ದರ್ಜೆ ಸಹಾಯಕ ಎನ್.ಬಿ. ಹಿರೇಮನಿ, ಅಯ್ಯಪ್ಪ ತಿಲಗರ, ಎಚ್.ವೈ. ಮಣ್ಣೊಡ್ಡರ ಇವರನ್ನು ಸನ್ಮಾನಿಸಲಾಯಿತು.

■ ವಿಜಯಸಾಕ್ಷಿ ಸುದ್ದಿ, ನರೇಗಲ್ಲ

ಶಾಲೆಯ ಹಳೆಯ ನೆನಪುಗಳು ಪರಿಶ್ರಮ, ಶಿಕ್ಷಣದ ಮಹತ್ವ, ಗುರುವಿನ ಶ್ರೇಷ್ಠತೆಯನ್ನು ತಿಳಿಸುತ್ತವೆ ಎಂದು ಶಿಕ್ಷಣ ಪ್ರೇಮಿ ರವೀಂದ್ರನಾಥ ದೊಡ್ಡಮೇಟಿ ಅಭಿಪ್ರಾಯಪಟ್ಟರು.

ಸಮೀಪದ ಜಕ್ಕಲಿ ಗ್ರಾಮದ ಅಂದಾನಪ್ಪ ಜ್ಞಾನಪ್ಪ ದೊಡ್ಡಮೇಟಿ ಸರ್ಕಾರಿ ಪ್ರೌಢಶಾಲೆಯಲ್ಲಿ ಜರುಗಿದ 1997-98ನೇ ಸಾಲಿನ ಎಸ್.ಎಲ್.ಸಿ ವಿದ್ಯಾರ್ಥಿಗಳ ಗುರುವಂದನಾ ಹಾಗೂ ಸ್ನೇಹ ಸಮ್ಮಿಲನ ಕಾರ್ಯಕ್ರಮ ಉದ್ಘಾಟಿಸಿ ಅವರು ಮಾತನಾಡಿದರು.

ಅಂದು ನಮ್ಮ ಶಾಲೆಯಲ್ಲಿ ಸೇವೆ ಸಲ್ಲಿಸಿದ ಶಿಕ್ಷಕರು ಪ್ರಾಮಾಣಿಕತೆ, ಸೇವಾ ಮನೋಭಾವ, ಉತ್ತಮ ಚಾರಿತ್ರ್ಯ, ನಡಾವಳಿಗಳಿಂದ ನಮ್ಮ ಗ್ರಾಮದ ಮಕ್ಕಳಲ್ಲಿ ಸಾರ್ಥಕತೆಯನ್ನು ತಂದು ಶಿಕ್ಷಣದಲ್ಲಿ ಹೊಸತನವನ್ನು ಮತ್ತು ನೈತಿಕತೆಯ ತಳವನ್ನು ಹಾಕಿದ್ದಾರೆ. ಆದರೆ ಇಂದಿನವರಲ್ಲಿ ಇವೆಲ್ಲವೂ ಕ್ಷೀಣಿಸುತ್ತಿರುವುದು ವಿಷಾದನೀಯ ಎಂದರು.

ಸನ್ಮಾನಿತ ನಿವೃತ್ತ ಶಿಕ್ಷಕ ಟಿ.ಟಿ. ದಾಸರ ಮಾತನಾಡಿ, ಈ ಜಗತ್ತಿನಲ್ಲಿ ಒಳ್ಳೆಯದನ್ನು ಸಾಧಿಸುವುದು ಯುವಕರ ಕೈಯಲ್ಲಿ ಇದೆ. ಆದರೆ ಮನಃಪೂರ್ವಕವಾಗಿ ನಂಬಿದರೆ ಸಾಕು, ಅದಕ್ಕೆ ಪೂರಕವಾದ ಎಲ್ಲಾ ಶಕ್ತಿಗಳು ತಾವಾಗಿಯೇ ಒದಗುತ್ತವೆ ಎಂದರು.

ಈ ಸಂದರ್ಭದಲ್ಲಿ ಸೇವೆ ಸಲ್ಲಿಸಿ ನಿಧನರಾದ ಅನೇಕ ಶಿಕ್ಷಕರನ್ನು ಸ್ಮರಿಸಿ ಅವರ ಧರ್ಮಪತ್ನಿಯರನ್ನು ಸನ್ಮಾನಿಸಲಾಯಿತು. ಸಮಾರಂಭದ ಅಧ್ಯಕ್ಷತೆಯನ್ನು ಮುಖ್ಯೋಪಾಧ್ಯಾಯ ಬಿ.ಆರ್. ಗದುಗಿನ ವಹಿಸಿದ್ದರು. ಗುರುಲಿಂಗಸ್ವಾಮಿ ಮಂಟಯ್ಯನಮಠ ಉಪಸ್ಥಿತರಿದ್ದರು.

1997-98ನೇ ಸಾಲಿನ ವಿದ್ಯಾರ್ಥಿಗಳಾದ ಎಸ್.ಎಚ್. ತಳವಾರ, ಹನಮಂತ ತಳವಾರ, ರಿಯಾಜ್ ಮುಲ್ಲಾ, ಅಲ್ಲಾಸಾಬ ನದಾಫ್, ಪ್ರಭು ರೇಣುಕಮಠ, ರಾಜೇಶ್ವರಿ ದೊಡ್ಡಮೇಟಿ, ರಾಜೇಶ್ವರಿ ಇಟ್ಟಾಪೂರ, ಶರಣಪ್ಪ ಮಂಗಳಗುಡ್ಡ, ಸುರೇಶ ಹಡಪದ, ದಾಕ್ಷಾಯಿಣಿ ಗಾಣಿಗೇರ, ಜ್ಯೋತಿ ಸಂಕನೂರ, ಶರಣಪ್ಪ ಬೂದಿಹಾಳ, ಕವಿತಾ ಲಿಗಾಡಿ, ಕಸ್ತೂರಿ ಇಟಗಿ, ರಾಮಪ್ಪ ತಳವಾರ, ಸಾವಿತ್ರಿ ಪಾಟೀಲ, ವಿಜಯಲಕ್ಷ್ಮೀ ಹಿರೇಮಠ, ಬಸವಣ್ಣೆವ್ವ ಭಜಂತ್ರಿ, ವೀರಪ್ಪ ಮಾದರ, ಮಾರುತಿ ಬೇವಿನಮರದ, ರೇಣುಕಾ ಜಂಗಣ್ಣವರ, ದೇವೀಂದ್ರಪ್ಪ ಮಾದರ, ವನಿತಾ ಜೋಷಿ, ಮಾರುತಿ ತಳ್ಳಿಹಾಳ, ಶಿವಲೀಲಾ ಮುಗಳಿ, ಲೀಲಾ ರಡ್ಡಿ ಸೇರಿದಂತೆ ಇನ್ನಿತರರು ಇದ್ದರು.

### ಸಂಕಷ್ಟಗಳ ನಡುವೆ ಸಿ.ಎ ಉತ್ತೀರ್ಣರಾದ ಅಜಯ ದೊಡ್ಡಮೇಟಿಗೆ ಅಭಿನಂದನೆ

# ಸಿಎ ಪಾಸಾಗುವುದು ಸುಲಭವಲ್ಲ




ನಿವೃತ್ತ ಮುಖ್ಯ ಶಿಕ್ಷಕ ಅರುಣ ಕುಲಕರ್ಣಿ ಮಾತನಾಡಿ, ಅಜಯನ ಸಾಧನೆ ಎಲ್ಲರಿಗೂ ಮಾದರಿಯಾಗಿದೆ. ಆತ ಎಷ್ಟೇ ದೊಡ್ಡ ಹುದ್ದೆಗೆ ತಲುಪಿದರೂ ತನ್ನ ತಂದೆ-ತಾಯಿ, ಗ್ರಾಮ ಮತ್ತು ಬಂಧುಗಳನ್ನು ಮರೆಯದಿರಲಿ. ಅಹಂಕಾರ ಎಂದಿಗೂ ಅವನ ಬಳಿ ಸುಳಿಯದಿರಲಿ. ಅವನ ಸಾಧನೆಗೆ ತಕ್ಕಂತೆ ಅವನಿಗೆ ಉತ್ತಮ ಹುದ್ದೆ ದೊರಕಲಿ ಎಂದು ಹಾರೈಸಿದರು.

■ ವಿಜಯಸಾಕ್ಷಿ ಸುದ್ದಿ, ನರೇಗಲ್ಲ

ರೈತನ ಮಗನೊಬ್ಬ ತನ್ನ ಸತತ ಪರಿಶ್ರಮ ಮತ್ತು ಶಿಸ್ತಿನ ಓದಿನಿಂದ ಸಿಎ ಪಾಸಾದುದು ನಮಗೆಲ್ಲ ಸಂತೋಷದ ವಿಷಯ. ಇಡೀ ಗಜೇಂದ್ರಗಡ ತಾಲೂಕು ಹೆಮ್ಮೆ ಪಡುವಂತಹ ಸಾಧನೆ ಮಾಡಿರುವ ಅಜಯ ದೊಡ್ಡಮೇಟಿಗೆ ಎಲ್ಲರ ಪರವಾಗಿ ಅಭಿನಂದನೆಗಳು ಎಂದು ಗಜೇಂದ್ರಗಡ ಚನ್ನು ಪಾಟೀಲ ಫೌಂಡೇಶನ್ ಅಧ್ಯಕ್ಷ ಉಮೇಶ ಪಾಟೀಲ ಹೇಳಿದರು.

ಸಮೀಪದ ಜಕ್ಕಲಿ ಗ್ರಾಮದ ಸುಭಾಸ ದೊಡ್ಡಮೇಟಿಯವರ ಮನೆಯಲ್ಲಿ ನಡೆದ ಅಜಯ ದೊಡ್ಡಮೇಟಿ ಅಭಿನಂದನಾ ಸಮಾರಂಭದಲ್ಲಿ, ಫೌಂಡೇಷನ್ ವತಿಯಿಂದ ಸನ್ಮಾನಿಸಿ ಅವರು ಮಾತನಾಡಿದರು.

ಗ್ರಾಮೀಣ ಮಟ್ಟದಲ್ಲಿ ಇಂತಹ ಸಾಧನೆ ಮಾಡುವುದು ಅಪರೂಪ. ಇಲ್ಲಿ ಇಂತಹ ಸಾಧನೆಗೆ ಅನುಕೂಲತೆಗಳು ಇರುವುದಿಲ್ಲ. ಆದಾಗ್ಯೂ ಅಜಯ ಛಲ ಬಿಡದ ತ್ರಿವಿಕ್ರಮನಂತೆ ಈ ಸಾಧನೆಗೈದಿರುವುದಕ್ಕೆ ಚನ್ನು ಪಾಟೀಲ ಫೌಂಡೇಶನ್‌ನಿಂದ ಅವರನ್ನು ಸನ್ಮಾನಿಸಿ ಗೌರವಿಸುತ್ತಿದ್ದೇವೆ. ಅಜಯ ತಾನು ಸಾಧಿಸಿದ ಸಂಗತಿಯನ್ನು ಇತರರಿಗೂ ಮಾರ್ಗದರ್ಶನ ಮಾಡಬೇಕು. ಅತ್ಯುನ್ನತ ಪರೀಕ್ಷೆ ಪಾಸಾಗುವುದು ಅಷ್ಟು ಸುಲಭದ ಮಾತಲ್ಲ. ತನ್ನ ಗ್ರಾಮವನ್ನು ಮರೆಯದೆ ಆತ ಗ್ರಾಮಕ್ಕೆ ಏನೆಲ್ಲವನ್ನೂ ಮಾಡಲು ಸಾಧ್ಯವಿದೆಯೋ ಅದನ್ನು ಮಾಡಬೇಕೆಂದು ಉಮೇಶ ಹೇಳಿದರು.

ರವೀಂದ್ರನಾಥ ದೊಡ್ಡಮೇಟಿ ಮಾತನಾಡಿ, ಅಜಯ ಸಂಘರ್ಷದ ಜೀವನ ಎದುರಿಸಿ ಸಿಎ ಉತ್ತೀರ್ಣನಾಗಿದ್ದಾನೆ. ಇದು ಎಲ್ಲ ಗ್ರಾಮೀಣ ಯುವಕ-ಯುವತಿಯರಿಗೆ ಮಾದರಿಯಾಗಬೇಕು. ಅವರೂ ಸಹ ಇವನಂತೆ ದೊಡ್ಡ ಕನಸನ್ನು ಕಟ್ಟಿಕೊಂಡು ಅದನ್ನು ನನಸು ಮಾಡಲು ಮುಂದಾಗಬೇಕೆಂದರು.

ಸನ್ಮಾನ ಸ್ವೀಕರಿಸಿ ಮಾತನಾಡಿದ ಅಜಯ ದೊಡ್ಡಮೇಟಿ, ನಿಮ್ಮ ಈ ಪ್ರೀತಿ, ಅಭಿಮಾನವನ್ನು ಎಂದಿಗೂ ಮರೆಯುವುದಿಲ್ಲ. ಎಂದಿಗೂ ನಾನು ನಿಮ್ಮ ಅಜಯನೇ ಆಗಿರುತ್ತೇನೆ ಎಂದರು.

ಸಭೆಯನ್ನುದ್ದೇಶಿಸಿ ಉಮೇಶ ಆರ್. ಪಾಟೀಲ, ಕಳಕಪ್ಪ ಕರಮುಡಿ, ಡಾ. ಅಂದಪ್ಪ ನರೇಗಲ್ಲ ಮುಂತಾದವರು ಮಾತನಾಡಿದರು. ಶಿವಕುಮಾರ ದಡ್ಡೂರ ನಿರೂಪಿಸಿದರು. ಈ ಸಂದರ್ಭದಲ್ಲಿ ಗುರುಲಿಂಗಯ್ಯ ಮಂಟಯ್ಯನಮಠ, ಉಮೇಶ ಮೇಟಿ, ಮಹಾದೇವಪ್ಪ ಮೆಣಸಿಗಿ, ಚನ್ನಬಸಪ್ಪ ಅರಹುಣಸಿ, ವೀರಣ್ಣ ಗುಜಮಾಗಡಿ, ಶರಣಪ್ಪ ತಳವಾರ, ಹನುಮಂತತಳವಾರ, ಸೊಲಬಪ್ಪ ಮುಗಳಿ, ಶಿವನಾಗಪ್ಪ ದೊಡ್ಡಮೇಟಿ, ವಿರುಪಾಕ್ಷಪ್ಪ ಅಂಗಡಿ, ರಮೇಶ ಮಾಸ್ತಿ, ಕಳಕಪ್ಪ ಸರ್ವಿ, ಸಂಗಮೇಶ ಮೆಣಸಿಗಿ, ಮಲ್ಲಯ್ಯ ಗುಂಡಗೋಪುರಮಠ, ದೊಡ್ಡಮೇಟಿ ಕುಟುಂಬದ ಪರಿವಾರದವರಿದ್ದರು.

# ಮಕ್ಕಳಲ್ಲಿ ರಕ್ತಹೀನತೆಯನ್ನು ತಡೆಗಟ್ಟಿ



■ ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ

ಪಟ್ಟಣದ ಪಿಎಸ್‌ಬಿಡಿ ಬಾಲಕಿಯರ ಪ್ರೌಢಶಾಲೆಯಲ್ಲಿ ರಾಷ್ಟ್ರೀಯ ಕಿಶೋರ್ ಸ್ವಾಸ್ಥ್ಯ ಕಾರ್ಯಕ್ರಮ, ರಾಷ್ಟ್ರೀಯ ಬಾಲ ಸ್ವಾಸ್ಥ್ಯ ಕಾರ್ಯಕ್ರಮದಡಿಯಲ್ಲಿ ಮಕ್ಕಳಿಗೆ ಕಬ್ಬಿಣಾಂಶದ ಮಾತ್ರೆ ಮತ್ತು ಶುಚಿ ಸ್ಯಾನಿಟರಿ ನ್ಯಾಪ್‌ಕಿನ್ಸ್ ನೀಡಲಾಯಿತು.

ಈ ವೇಳೆ ಡಾ. ಮಂಜುನಾಥ ಮರಿಗೌಡ್ರ ಮಾತನಾಡಿ, ವಿದ್ಯಾರ್ಥಿಗಳಿಗೆ ಹಾಗೂ ಶಾಲೆ ಬಿಟ್ಟ ಕಿಶೋರಿಯರಿಗೆ 6-10 ವರ್ಷದ ಮಕ್ಕಳಿಗೆ ಗುಲಾಬಿ ಮಾತ್ರೆ ನೀಡಲಾಗುತ್ತದೆ. 11-19 ವರ್ಷದ ಮಕ್ಕಳಿಗೆ ನೀಲಿ ಮಾತ್ರೆ ನೀಡಲಾಗುತ್ತದೆ. ಮಕ್ಕಳಲ್ಲಿ ರಕ್ತಹೀನತೆಯನ್ನು ತಡೆಗಟ್ಟುವ ಉದ್ದೇಶದಿಂದ ವಾರಕ್ಕೊಂದು ಕಬ್ಬಿಣಾಂಶದ ಮಾತ್ರೆ ನೀಡಲಾಗುತ್ತದೆ. ಹದಿಹರೆಯದವರು ಎದುರಿಸುತ್ತಿರುವ ಸಮಸ್ಯೆಗಳಲ್ಲಿ ಮುಖ್ಯವಾಗಿ ರಕ್ತಹೀನತೆ, ಪೌಷ್ಟಿಕ ಆಹಾರದ ಕೊರತೆ, ಋತುಚಕ್ರ ಸಂಬಂಧಿ ಸಮಸ್ಯೆಗಳು ಹಾಗೂ ವೈಯಕ್ತಿಕ ಅನಾರೋಗ್ಯ ಮೊದಲಾದವುಗಳು ಅವರನ್ನು ಬಲಹೀನರನ್ನಾಗಿ ಮಾಡುತ್ತವೆ. ಇಂತಹ ಸಮಸ್ಯೆಗಳಿಂದ ಮುಕ್ತರಾಗಲು ವೈದ್ಯರ ಸಲಹೆ, ಆರೋಗ್ಯಪೂರ್ಣ ನಡಾವಳಿಕೆ ಮತ್ತು ಉತ್ತಮ ಆಹಾರ ಸೇವನೆ ಮುಖ್ಯ ಎಂದರು.

ಆಪ್ತ ಸಮಾಲೋಚಕ ಫಕ್ಕಿರೇಶ ಜಂತ್ಲಿ ಮಾತನಾಡಿ, ಪ್ರಸ್ತುತ ಸಂದರ್ಭದಲ್ಲಿ ಹದಿಹರೆಯದವರಿಗೆ ಆರೋಗ್ಯ ಮತ್ತು ಜೀವನ ಶೈಲಿಯ ಶಿಕ್ಷಣ ಅಗತ್ಯವಾಗಿದೆ ಎಂದರು. ಮುಖ್ಯೋಪಾಧ್ಯಾಯ ಜೆ.ಡಿ. ಲಮಾಣಿ, ಶಿಕ್ಷಕರಾದ ಎಂ.ಸಿ. ಹಿರೇಮಠ, ಶೀಲಾ ತಳವಾರ, ಎಸ್.ಎಸ್. ಮಠದ, ಎಸ್.ಎಂ. ಹಾದಿಮನಿ, ಆರ್.ಸಿ. ಉಮಚಗಿ, ಪಿ.ಎಲ್. ಪಾಟೀಲ, ಶ್ವೇತಾ ಅಂಬಲಿ, ಕವಿತಾ ಘಂಟಿ, ಸುಜಾತಾ ಮಾಗಡಿ ಇದ್ದರು.

## ರವಿ ಚೆನ್ನಣ್ಣವರ ಜನ್ಮದಿನ ಆಚರಣೆ



■ ವಿಜಯಸಾಕ್ಷಿ ಸುದ್ದಿ, ಗದಗ

ಕರುನಾಡ ಸಿಂಗಂ ಖ್ಯಾತಿಯ ಬೆಂಗಳೂರಿನ ಅಗ್ನಿಶಾಮಕ ಹಾಗೂ ತುರ್ತು ಸೇವೆಗಳ ಡಿಐಜಿಪಿ ರವಿ ಡಿ.ಚೆನ್ನಣ್ಣವರ ಅವರ 40ನೇ ವರ್ಷದ ಜನ್ಮದಿನದ ಅಂಗವಾಗಿ ವೀರೇಶ್ವರ ಪುಣ್ಯಾಶ್ರಮದಲ್ಲಿ ಗದ್ದುಗೆಗೆ ಮಹಾರುದ್ರಾಭಿಷೇಕ, ಮಹಾಪ್ರಸಾದ ವಿತರಣೆಯೊಂದಿಗೆ ಆಚರಿಸಲಾಯಿತು.

ಈ ವೇಳೆ ವೀರೇಶ ವಾಲ್ಮೀಕಿ ಮಾತನಾಡಿ, ಜಿಲ್ಲೆಯ ಹೆಮ್ಮೆಯ ಮಗ ರವಿ ಡಿ.ಚೆನ್ನಣ್ಣವರ ಜನ್ಮದಿನವನ್ನು ಅವರ ಅಭಿಮಾನಿಗಳು ಆಚರಿಸುತ್ತಿದ್ದು, ಅವರು ರಾಜ್ಯ ಕಂಡ ದಕ್ಷ, ಪ್ರಾಮಾಣಿಕ ಐಪಿಎಸ್ ಅಧಿಕಾರಿಯಾಗಿದ್ದಾರೆ. ಬಡ ಕೃಷಿ ಕುಟುಂಬದ ಬಂದು, ಕಠಿಣ ಹಾದಿಯಲ್ಲಿ ಬೆಳೆದು ರಾಜ್ಯವೇ ಮೆಚ್ಚುವ ರೀತಿಯಲ್ಲಿ ಕೆಲಸ ಮಾಡುತ್ತಿದ್ದು, ಅವರಲ್ಲಿರುವ ಧೈರ್ಯ, ಶ್ರದ್ಧೆ ಅವರ ಅಭಿಮಾನಿಗಳಿಗೆ ಮಾದರಿಯಾಗಬೇಕು ಎಂದು ಹೇಳಿದರು.

ಈ ಸಂದರ್ಭದಲ್ಲಿ ಸಮಾಜ ಸೇವಕ ಅನಿಲ ಸಿದ್ದಮ್ಮನಹಳ್ಳಿ, ಮುಂಡರಗಿ ತಾಲೂಕು ಸರ್ಕಾರಿ ಆಸ್ಪತ್ರೆಯ ವೈದ್ಯಾಧಿಕಾರಿ ಡಾ. ಲಕ್ಷ್ಮಣ ಪೂಜಾರ, ಗುರುನಾಥ ದೇಶಪಾಂಡೆ, ಶ್ರೀಕಾಂತ ಪೂಜಾರ, ಪತ್ರಕರ್ತರಾದ ಲೋಕೇಶ ಮಲ್ಲಿಗವಾಡ, ಗದಗ ಜಿಲ್ಲೆಯ 108 ಆಂಬ್ಯುಲೆನ್ಸ್ ವ್ಯವಸ್ಥಾಪಕ ಶ್ರೀನಿವಾಸ ಮುಂದಲಮನಿ, ಈರಣ್ಣ ಕುರಿ, ಈರಣ್ಣ ಅಕ್ಕಿ, ಮಹಾಂತೇಶ, ಇಮಾಮ್ ಡಂಬಳ, ರಾಹುಲ್, ತೇಜಪ್ಪ, ಬಿ.ಡಿ. ಮಾದರ ಮುಂತಾದವರಿದ್ದರು.

### ರಾಜ್ಯದ ಎಲ್ಲ ತಾಲೂಕಾಸ್ಪತ್ರೆಗಳಿಗೆ ಪುನೀತ ರಾಜ್‌ಕುಮಾರ ಹೃದಯಜ್ಯೋತಿ ಯೋಜನೆ ವಿಸ್ತರಣೆ; ಆರೋಗ್ಯ ಸಚಿವ

# ಸಾರ್ವಜನಿಕ ಹಿತದೃಷ್ಟಿಯಿಂದ ಕರ್ತವ್ಯ ಮಾಡಿ

■ ವಿಜಯಸಾಕ್ಷಿ ಸುದ್ದಿ, ಧಾರವಾಡ

ರಾಜ್ಯದಲ್ಲಿ ಹೃದಯ ಖಾಯಿಲೆ ಪ್ರಕರಣಗಳಲ್ಲಿ ಹೆಚ್ಚಳವಿಲ್ಲ. ಆರೋಗ್ಯ ಇಲಾಖೆಯ ಯಶಸ್ವಿ ಕಾರ್ಯಕ್ರಮಗಳಲ್ಲಿ ಒಂದಾಗಿರುವ ಪುನೀತ್ ರಾಜ್‌ಕುಮಾರ ಹೃದಯಜ್ಯೋತಿ ಯೋಜನೆಯನ್ನು ರಾಜ್ಯದ ಎಲ್ಲ ತಾಲೂಕು ಆಸ್ಪತ್ರೆಗಳಿಗೆ ವಿಸ್ತರಿಸಲು ಕ್ರಮಕೈಗೊಳ್ಳಲಾಗುವುದು ಎಂದು ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ ಸಚಿವ ದಿನೇಶ ಗುಂಡೂರಾವ್ ಹೇಳಿದರು.

ಅವರು ಮಂಗಳವಾರ ಸಂಜೆ ಜಿಲ್ಲಾ ಪಂಚಾಯಿತಿ ಸಭಾಂಗಣದಲ್ಲಿ ಬೆಳಗಾವಿ ವಿಭಾಗ ಮಟ್ಟದ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ ಯೋಜನೆಗಳ ಪ್ರಗತಿ ಪರಿಶೀಲನಾ ಸಭೆ ಜರುಗಿಸಿ ಮಾತನಾಡಿದರು.

ರಾಜ್ಯದ 9 ತಾಲೂಕು ಸ್ಥಾನದಲ್ಲಿರುವ 10 ಹಾಸಿಗೆಯ ಆಸ್ಪತ್ರೆಗಳನ್ನು 30 ಹಾಸಿಗೆಯ ಆಸ್ಪತ್ರೆಗಳನ್ನಾಗಿ ಉನ್ನತ್ತೀಕರಿಸಿ, ಸಮುದಾಯ ಆರೋಗ್ಯ ಕೇಂದ್ರಗಳನ್ನಾಗಿ ಅಭಿವೃದ್ಧಿಪಡಿಸಲು ಸರ್ಕಾರ ಕ್ರಮಕೈಗೊಂಡಿದೆ.



ಅದರಲ್ಲಿ ಧಾರವಾಡ ಜಿಲ್ಲೆಯ ಅಳ್ನಾವರ ಮತ್ತು ಅಣ್ಣಿಗೇರಿ ಆಸ್ಪತ್ರೆಗಳು ಸೇರಿದ್ದು, ಬರುವ ನವೆಂಬರ್‌ನಿಂದ ಕಾಮಗಾರಿ ಪ್ರಾರಂಭವಾಗಲಿದೆ ಎಂದು ತಿಳಿಸಿದರು.

ಧಾರವಾಡ ಸಿವಿಲ್ ಆಸ್ಪತ್ರೆಯನ್ನು ಬೇರೆಡೆ ಸ್ಥಳಾಂತರಿಸುವ ವಿಚಾರ ಸಧ್ಯಕ್ಕೆ ಇಲ್ಲ. ಈಗಾಗಲೇ ಆಸ್ಪತ್ರೆಯ ಅಗತ್ಯ ಉಪಕರಣ ಮತ್ತು ದುರಸ್ತಿಗಾಗಿ ಅನುದಾನ ನೀಡಲಾಗಿದೆ. ಆರೋಗ್ಯ ಇಲಾಖೆಯಿಂದ ಹೊಸದಾಗಿ ಬಂದ ಯೋಜನೆಗಳನ್ನು ಅನುಷ್ಠಾನಗೊಳಿಸಲಾಗುತ್ತಿದೆ. ಕೆಲವು ಜಿಲ್ಲೆಗಳಿಗೆ ಭೇಟಿ ನೀಡಿ, ಅಲ್ಲಿಯ ಆಗು-ಹೋಗುಗಳ ಬಗ್ಗೆ ತಿಳಿದು ಮುಂದಿನ ಕ್ರಮಗಳನ್ನು ತೆಗೆದುಕೊಳ್ಳಲಾಗುತ್ತದೆ ಎಂದು ಹೇಳಿದರು.

ಈ ವರ್ಷದಲ್ಲಿ ಸುತ್ತೋಲೆಯನ್ನು ಹೊರಡಿಸಿ, ಎಂಬಿಬಿಎಸ್ ವೈದ್ಯರ 2 ಸಾವಿರ ಹುದ್ದೆಗಳಿಗೆ ಅರ್ಜಿಗಳನ್ನು ಆಹ್ವಾನಿಸಲಾಗುತ್ತದೆ. ತಜ್ಞ ವೈದ್ಯರ ಹುದ್ದೆಗಳಿಗೆ ಅರ್ಜಿಗಳನ್ನು ಕರೆಯಲಾಗುತ್ತದೆ. ಮುಂದಿನ ತಿಂಗಳು ಎಲ್ಲಾ ಸರ್ಕಾರಿ ಆಸ್ಪತ್ರೆಗಳಲ್ಲಿ ಖಾಲಿ ಇರುವ ಹುದ್ದೆಗಳನ್ನು ಭರ್ತಿ ಮಾಡಲಾಗುತ್ತಿದೆ ಎಂದು ಸಚಿವರು ಹೇಳಿದರು.

ವೇದಿಕೆಯಲ್ಲಿ ಕರ್ನಾಟಕ ವೈದ್ಯಕೀಯ ಮಹಾವಿದ್ಯಾಲಯ ಮತ್ತು ಸಂಶೋಧನಾ ಸಂಸ್ಥೆಯ ನಿರ್ದೇಶಕ ಡಾ. ಈಶ್ವರ ಹೊಸಮನಿ, ರಾಷ್ಟ್ರೀಯ ಆರೋಗ್ಯ ಅಭಿಯಾನ ನಿರ್ದೇಶಕ ಡಾ. ಅವಿನಾಶ ಮೆನನ್ ರಾಜೇಂದ್ರನ್, ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆಯ ನಿರ್ದೇಶಕ ಡಾ. ಕೆ.ವಸಂತಕುಮಾರ, ಜಿ.ಪಂ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ಭುವನೇಶ ಪಾಟೀಲ ಇದ್ದರು.

ಬೆಳಗಾವಿ ವಿಭಾಗೀಯ ಸಹನಿರ್ದೇಶಕರಾದ ಡಾ. ಪುಷ್ಪ ಎಚ್.ಆರ್ ಸ್ವಾಗತಿಸಿ, ಸಭೆ ನಿರ್ವಹಿಸಿದರು. ಡಿಎಚ್‌ಓ ಡಾ. ಎಸ್.ಎಮ್. ಹೊನಕೇರಿ ವಂದಿಸಿದರು.

ಸಭೆಯಲ್ಲಿ ಬೆಳಗಾವಿ ವಿಭಾಗದ ಎಲ್ಲ ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಅಧಿಕಾರಿಗಳು, ಜಿಲ್ಲಾ ಶಸ್ತ್ರಚಿಕಿತ್ಸಕರು, ಎಲ್ಲ ಕಾರ್ಯಕ್ರಮ ಅನುಷ್ಠಾನ ಅಧಿಕಾರಿಗಳು, ಕೆ.ಎಂ.ಸಿ.ಆರ್.ಐ ತಜ್ಞ ವೈದ್ಯರು ಭಾಗವಹಿಸಿದ್ದರು.

> ಆರೋಗ್ಯ ಇಲಾಖೆಯು ಯಾವುದೇ ವ್ಯಕ್ತಿಗಳ ಹಿತಾಸಕ್ತಿ ಕಾಪಾಡಲು ಕೆಲಸ ಮಾಡದೇ, ಸಮುದಾಯದ ಆರೋಗ್ಯಕ್ಕಾಗಿ ಪಾರದರ್ಶಕವಾಗಿ ಕೆಲಸ ಮಾಡುತ್ತಿದೆ. ಪ್ರಥಮ ಬಾರಿಗೆ ಇಲಾಖೆಯಲ್ಲಿ ಐದು ಸಾವಿರಕ್ಕೂ ಹೆಚ್ಚು ವೈದ್ಯರು, ಸಿಬ್ಬಂದಿಗಳನ್ನು ಕೌನ್ಸಿಲಿಂಗ್ ಮೂಲಕ ವರ್ಗಾವಣೆ ಮಾಡಲಾಗಿದೆ. ಇದಕ್ಕೆ ಎಲ್ಲರೂ ಸ್ಪಂದಿಸಿ, ಸಾರ್ವಜನಿಕ ಹಿತದೃಷ್ಟಿಯಿಂದ ಉತ್ತಮ ಕರ್ತವ್ಯ ನಿರ್ವಹಿಸಬೇಕೆಂದು ಸಚಿವ ದಿನೇಶ ಗುಂಡೂರಾವ್ ಸೂಚಿಸಿದರು.

## 20ನೇ ವರ್ಷದ ಶ್ರಾವಣ ಸಂಜೆ ಜು.25ರಿಂದ

■ ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ

ಪಟ್ಟಣದ ಅಕ್ಕಾಮಹಾದೇವಿ ದೇವಸ್ಥಾನದಲ್ಲಿ ಪೂಜ್ಯ ಶ್ರೀ ಸಿದ್ದೇಶ್ವರ ಸತ್ಸಂಗ ಬಳಗ, ಶರಣ ಸಾಹಿತ್ಯ ಪರಿಷತ್, ಕದಳಿ ಮಹಿಳಾ ವೇದಿಕೆ, ರಾಜರಾಜೇಶ್ವರಿ ಮಹಿಳಾ ಸಾಹಿತ್ಯ ಮತ್ತು ಸಂಸ್ಕೃತಿ ವೇದಿಕೆ, ಅಕ್ಕಮಹಾದೇವಿ ಬಳಗ, ಪ್ರೇಮಕ್ಕ ಅಭಿಮಾನಿ ಬಳಗ ಸಹಯೋಗದಲ್ಲಿ 20ನೇ ವರ್ಷದ ಶ್ರಾವಣ ಸಂಜೆ ಕಾರ್ಯಕ್ರಮ ಜು.25ರಿಂದ ಆ.22ರವರೆಗೆ ನಡೆಯಲಿದೆ.

ಜು.25ರಂದು ಸಂಜೆ 6ಕ್ಕೆ ಅಕ್ಕಮಹಾದೇವಿ ದೇವಸ್ಥಾನದಲ್ಲಿ ಹೂವಿನಶಿಗ್ಲಿಯ ವೀರಕ್ತಮಠದ ಶ್ರೀ ಚನ್ನವೀರ ಮಹಾಸ್ವಾಮಿಗಳ ದಿವ್ಯ ಸಾನ್ನಿಧ್ಯದಲ್ಲಿ ತಹಸೀಲ್ದಾರ ಧನಂಜಯ ಎಂ ಶ್ರಾವಣ ಸಂಜೆ ಕಾರ್ಯಕ್ರಮ ಉದ್ಘಾಟಿಸುವರು.

ಅಧ್ಯಕ್ಷತೆಯನ್ನು ಹಿರಿಯ ನ್ಯಾಯವಾದಿ ವಿ.ಎಲ್. ಪೂಜಾರ ವಹಿಸುವರು. 'ಮಾತೆಂಬುದು ಜ್ಯೋತಿರ್ಲಿಂಗ' ವಿಷಯದ ಕುರಿತು ಸಿ.ಎಸ್. ಹಿರೇಮಠ ಉಪನ್ಯಾಸ ನೀಡುವರು. ಪುರಸಭೆ ಅಧ್ಯಕ್ಷೆ ಯಲ್ಲಮ್ಮ ದುರಗಣ್ಣವರ, ಪುರಸಭೆ ಸದಸ್ಯ ಬಸವರಾಜ ಓದುನವರ, ಶಸಾಪ ತಾಲೂಕಾಧ್ಯಕ್ಷ ಎಲ್.ಎಸ್. ಅರಳಹಳ್ಳಿ, ನಿರ್ಮಲಾ ಅರಳಿ ಅತಿಥಿಗಳಾಗಿ ಆಗಮಿಸುವರು. ಪತ್ರಕರ್ತ ದಿಗಂಬರ ಪೂಜಾರ ಸೇರಿ ಹಲವರನ್ನು ಸನ್ಮಾನಿಸಲಾಗುವುದು.

ಕಳೆದ 20 ವರ್ಷಗಳಿಂದ ವಿವಿಧ ಮಹಿಳಾ ಸಂಘಟನೆಗಳ ಸಹಯೋಗದಲ್ಲಿ ಶ್ರಾವಣ ಮಾಸದಲ್ಲಿ ಧಾರ್ಮಿಕ ವಿಷಯಗಳ ಕುರಿತ ಚಿಂತನ-ಮಂಥನ, ಸತ್ಸಂಗದಂತಹ ಕಾರ್ಯಕ್ರಮಗಳನ್ನು ನಡೆಸುತ್ತಾ ಬರಲಾಗಿದೆ. ಈ ಕಾರ್ಯಕ್ರಮಗಳ ರೂವಾರಿಯಾಗಿದ್ದ ದಿ.ಪ್ರೇಮಕ್ಕ ಬಿಂಕದಕಟ್ಟಿ ಅವರ ಅಗಲುವಿಕೆಯ ನಡುವೆಯೂ ಶ್ರಾವಣ ಮಾಸದ ಕಾರ್ಯಕ್ರಮಗಳನ್ನು ನಡೆಸಲಾಗುತ್ತಿದೆ. ಆ.22ರಂದು ಮುಕ್ತಿಮಂದಿರ ಧರ್ಮಕ್ಷೇತ್ರದ ಪಟ್ಟಾಧ್ಯಕ್ಷರಾದ ಶ್ರೀ ವಿಮಲರೇಣುಕ ವೀರಮುಕ್ತಿಮುನಿ ಶಿವಾಚಾರ್ಯರ ಸಾನ್ನಿಧ್ಯದಲ್ಲಿ ಸಮಾರೋಪ ಸಮಾರಂಭ ಜರುಗಲಿದೆ.

ಶ್ರಾವಣ ಮಾಸದುದ್ದಕ್ಕೂ ನಿತ್ಯ ಸಂಜೆ ಬಹುತೇಕ ಮಹಿಳೆಯರ ನೇತೃತ್ವದಲ್ಲಿಯೇ ನಡೆಯುವ ಕಾರ್ಯಕ್ರಮದಲ್ಲಿ ಶರಣರು, ಸಾಹಿತಿಗಳು, ಸಾಮಾಜಿಕ ಚಿಂತಕರು, ಸಂಪನ್ಮೂಲ ವ್ಯಕ್ತಿಗಳು, ಉಪನ್ಯಾಸಕರು ವಿಷಯ ಮಂಡನೆ ಮಾಡಲಿದ್ದು, ಸಾರ್ವಜನಿಕರು ಹೆಚ್ಚಿನ ಸಂಖ್ಯೆಯಲ್ಲಿ ಪಾಲ್ಗೊಳ್ಳಬೇಕು ಎಂದು ತಾಲೂಕು ಕದಳಿ ಮಹಿಳಾ ವೇದಿಕೆ ಅಧ್ಯಕ್ಷೆ ನಿರ್ಮಲಾ ಅರಳಿ ಮನವಿ ಮಾಡಿದ್ದಾರೆ.

## ಬಿಹಾರ ಮತದಾರರ ಪಟ್ಟಿಯಿಂದ 52 ಲಕ್ಷಕ್ಕೂ ಹೆಚ್ಚು ಹೆಸರುಗಳನ್ನು ಕೈಬಿಟ್ಟ ಚುನಾವಣಾ ಆಯೋಗ!

■ ವಿಜಯಸಾಕ್ಷಿ ಸುದ್ದಿ, ಬಿಹಾರ

ಬಿಹಾರದಲ್ಲಿ ಮತದಾರರ ಪಟ್ಟಿಯ ವಿಶೇಷ ತೀವ್ರ ಪರಿಷ್ಕರಣೆ (ಎಸ್‌ಐಆರ್) ವೇಳೆ 52, 30, 126 ಹೆಸರುಗಳನ್ನು ಕೈ ಬಿಡಲಾಗಿದೆ. ಈ ಮತದಾರರ ಪೈಕಿ ಹಲವರು ಸಾವನ್ನಪ್ಪಿದ್ದಾರೆ, ಶಾಶ್ವತವಾಗಿ ಸ್ಥಳಾಂತರಗೊಂಡಿದ್ದಾರೆ ಮತ್ತು ಇನ್ನೂ ಹಲವರ ಹೆಸರುಗಳು ಬಹು ಸ್ಥಳಗಳಲ್ಲಿ ದಾಖಲಾಗಿತ್ತು ಎಂದು ಭಾರತೀಯ ಚುನಾವಣಾ ಆಯೋಗ (ಇಸಿಐ) ತಿಳಿಸಿದೆ.

ಮಂಗಳವಾರ ಪತ್ರಿಕಾ ಪ್ರಕಟಣೆ ಹೊರಡಿಸಿರುವ ಆಯೋಗ, "ಪ್ರಾಥಮಿಕ ಪರಿಷ್ಕರಣೆ ಪ್ರಕ್ರಿಯೆ ವೇಳೆ 18.66 ಲಕ್ಷ ಮತದಾರರು ಮೃತಪಟ್ಟಿರುವುದು, 26.01 ಲಕ್ಷ ಮತದಾರರು ಶಾಶ್ವತವಾಗಿ ಕ್ಷೇತ್ರಗಳನ್ನು ಬದಲಾಯಿಸಿರುವುದು ಮತ್ತು 7.5 ಲಕ್ಷ ಮತದಾರ ಹೆಸರುಗಳು ಬಹು ಸ್ಥಳಗಳಲ್ಲಿ ದಾಖಲಾಗಿರುವುದು ಕಂಡು ಬಂದಿದೆ ಎಂದು ತಿಳಿಸಿದೆ.

ಇದಲ್ಲದೆ, 11,484 ಮತದಾರರನ್ನು ಪತ್ತೆ ಹಚ್ಚಲಾಗದವರು ಎಂದು ಗುರುತಿಸಲಾಗಿದೆ. ಇದು ಬಿಹಾರದ ಒಟ್ಟು ಮತದಾರ ಪೈಕಿ ಶೇಕಡ 6.62ರಷ್ಟು ಎಂದು ಚುನಾವಣಾ ಆಯೋಗ ಹೇಳಿದೆ. ಜೂನ್ 24ರ ಹೊತ್ತಿಗೆ ಬಿಹಾರದಲ್ಲಿ ಒಟ್ಟು 7.89 ಕೋಟಿ ನೋಂದಾಯಿತ ಮತದಾರರಿದ್ದರು. ಪ್ರಸ್ತುತ 7.16 ಕೋಟಿ (ಶೇ. 90.67) ಮತದಾರರು ಗಣತಿ ನಮೂನೆಗಳನ್ನು (ಇಎಫ್) ಸಲ್ಲಿಸಿದ್ದಾರೆ. ಈ ಪೈಕಿ 7.13 ಕೋಟಿ (ಶೇ. 90.37) ಮತದಾರರ ನಮೂನೆಗಳು ಡಿಜಿಟಲೀಕರಣಗೊಂಡಿವೆ ಎಂದು ಆಯೋಗ ಮಾಹಿತಿ ನೀಡಿದೆ.

## ಬಣಜಿಗರ ಸಂಘಕ್ಕೆ ನೂತನ ಪದಾಧಿಕಾರಿಗಳ ಆಯ್ಕೆ

■ ವಿಜಯಸಾಕ್ಷಿ ಸುದ್ದಿ, ನರೇಗಲ್ಲ

ಪಟ್ಟಣದ ಬಣಜಿಗ ಕ್ಷೇಮಾಭಿವೃದ್ಧಿ ಸಂಘಕ್ಕೆ ಈಚೆಗೆ ನೂತನ ಪದಾಧಿಕಾರಿಗಳ ಆಯ್ಕೆ ನಡೆಯಿತು. ಗೌರವಾಧ್ಯಕ್ಷರಾಗಿ ಗುರುಪಾದಪ್ಪ ಬೆಲ್ಲದ, ಶಿವಯೋಗಿ ಜಕ್ಕಲಿ (ಅಧ್ಯಕ್ಷ), ಬಸವರಾಜ ವಂಕಲಕುಂಟಿ (ಉಪಾಧ್ಯಕ್ಷ), ನರೇಶ ಜೋಳದ (ಪ್ರಧಾನ ಕಾರ್ಯದರ್ಶಿ), ವೀರೇಶ ಬಂಗಾರಶೆಟ್ರು (ಸಹಕಾರ್ಯದರ್ಶಿ), ಬಸಪ್ಪ ಸಂಗಳದ (ಖಜಾಂಚಿ), ಸಲಹಾ ಸಮಿತಿಯ ಸದಸ್ಯರಾಗಿ ಸಿ.ವಿ. ವಂಕಲಕುಂಟಿ, ಶರಣಪ್ಪ ಹಂಜಿ,



ಕುಬೇರಪ್ಪ ನಾಶಿಪುಡಿ, ವಿಜಯಕುಮಾರ ಅಂಗಡಿ ಮತ್ತು ಬಸವರಾಜ ಹಂಜಿ ಆಯ್ಕೆಯಾಗಿದ್ದಾರೆ.

ಈ ಸಂದರ್ಭದಲ್ಲಿ ಮಾತನಾಡಿದ ನೂತನ ಅಧ್ಯಕ್ಷ ಶಿವಯೋಗಿ ಜಕ್ಕಲಿ, ಸಂಘವು ದಶಮಾನೋತ್ಸವವನ್ನು ಆಚರಿಸಿಕೊಂಡಿದ್ದು, ಹಿರಿಯರು ಹಾಕಿಕೊಟ್ಟ ಮಾರ್ಗದರ್ಶನದಲ್ಲಿ ಮುನ್ನಡೆಯುತ್ತೇವೆ. ಸಂಘದ ಪ್ರತಿಯೊಬ್ಬ ಸದಸ್ಯನ ಕುಂದುಕೊರತೆಗಳಿಗೆ ದನಿಯಾಗಿ ನೂತನ ಪದಾಧಿಕಾರಿಗಳು ಕಾರ್ಯ ನಿರ್ವಹಿಸುತ್ತೇವೆ. ಸಲಹಾ ಸಮಿತಿಯ ಹಿರಿಯರು ನಮಗೆ ಕಾಲಕಾಲಕ್ಕೆ ಸೂಕ್ತ ಮಾರ್ಗದರ್ಶನ ಮಾಡಲಿದ್ದಾರೆ ಎಂದರು.

## ಶ್ರೀ ಜ. ಅನ್ನದಾನೇಶ್ವರ ಪ್ರೌಢಶಾಲೆಯಲ್ಲಿ ಗುರುವಂದನಾ

■ ವಿಜಯಸಾಕ್ಷಿ ಸುದ್ದಿ, ಗದಗ

ವಿದ್ಯಾರ್ಥಿಗಳು ಗುರುಗಳನ್ನು ಗೌರವಿಸಿ, ಅವರು ನೀಡುವ ಜ್ಞಾನವನ್ನು ಜೀವನದಲ್ಲಿ ಅಳವಡಿಸಿಕೊಂಡು ಆದರ್ಶ ಜೀವಿಗಳಾಗಬೇಕು. ಅಕ್ಷರ ಜ್ಞಾನ ನೀಡಿದ ಗುರುಗಳನ್ನು ಎಂದಿಗೂ ಮರೆಯಬಾರದೆಂದು ಅನ್ನದಾನೇಶ್ವರ ಶಾಖಾ ಮಠ ನರಸಾಪೂರದ ಶ್ರೀ ಡಾ. ವೀರೇಶ್ವರ ಮಹಾಸ್ವಾಮಿಗಳು ಕಿವಿಮಾತು ಹೇಳಿದರು.

ಶ್ರೀ ಜಗದ್ಗುರು ಅನ್ನದಾನೇಶ್ವರ ವಿದ್ಯಾಸಮಿತಿ ಪ್ರೌಢಶಾಲೆ ನರಸಾಪೂರದಲ್ಲಿ 1998-2001ನೇ ಸಾಲಿನಲ್ಲಿ ವಿದ್ಯಾಭ್ಯಾಸಗೈದ ವಿದ್ಯಾರ್ಥಿಗಳಿಂದ ಹಮ್ಮಿಕೊಂಡಿದ್ದ ಗುರುವಂದನಾ ಕಾರ್ಯಕ್ರಮದಲ್ಲಿ ಶ್ರೀಗಳು ಮಾತನಾಡಿದರು.

ಕಾರ್ಯಕ್ರಮದ ಅಧ್ಯಕ್ಷತೆ ವಹಿಸಿದ್ದ ಮುಖ್ಯೋಪಾಧ್ಯಾಯ ಎಮ್.ಎಚ್. ಪೂಜಾರ ಮಾತನಾಡಿ, ನಮ್ಮ ಸಂಸ್ಥೆಯಲ್ಲಿ ಅಭ್ಯಾಸಗೈದ ವಿದ್ಯಾರ್ಥಿಗಳು ವಿವಿಧ ಹುದ್ದೆಗಳಲ್ಲಿ ಸೇವೆ ಸಲ್ಲಿಸುತ್ತಿರುವುದು ಸಂತಸದ ವಿಚಾರ. ಹಳೆಯ ವಿದ್ಯಾರ್ಥಿಗಳು ಶಾಲೆಯ ಉಳಿವಿಗಾಗಿ ಶ್ರಮಿಸಬೇಕೆಂದು ಕರೆ ನೀಡಿದರು.




ಕಾರ್ಯಕ್ರಮ ಉದ್ಘಾಟಿಸಿದ ಶಿಕ್ಷಕ ಎ.ಎಮ್. ಕೊಟಗಿ ಮಾತನಾಡಿ, ವಿದ್ಯಾರ್ಥಿಗಳು ಸುಸಂಸ್ಕೃತರಾಗಿ ನೀವು ಕಲಿತ ಶಾಲೆಯ ಅಭಿವೃದ್ಧಿಗಾಗಿ ಸಹಾಯ, ಸಹಕಾರ ನೀಡಬೇಕೆಂದರು.

ಅತಿಥಿಗಳಾಗಿ ಆಗಮಿಸಿದ್ದ ಆರ್.ಬಿ. ಕೆಂಚಗುಂಡಿ, ಕೆ.ಕೆ. ಹೂಗಾರ, ವಿ.ಆರ್. ಹಿರೇಮಠ, ಎಸ್.ಸಿ. ಚಕ್ಕಡಿಮಠ, ಆರ್.ಎ. ಹಣಗಿ, ಜಿ.ಎಫ್. ಹೆರಕಲ್ ಅವರುಗಳಿಗೆ ಗುರುವಂದನೆ ಸಲ್ಲಿಸಲಾಯಿತು. ಪ್ರೇಮಾ ಹೂಗಾರ ಸ್ವಾಗತಿಸಿದರು. ವೀರೇಶ ಬಂಡಾ ನಿರೂಪಿಸಿದರು. ಮಂಜುಳಾ ಹೊಂಬಳ ವಂದಿಸಿದರು ಎಂದು ಕ.ರ.ವೇ ಅಧ್ಯಕ್ಷ ಬಸವರಾಜ ಮೇಟಿ ಪ್ರಕಟಣೆಯಲ್ಲಿ ಮೂಲಕ ತಿಳಿಸಿದ್ದಾರೆ.

## ಇ-ಪೌತಿ ಆಂದೋಲನ ಜು. 24ರಿಂದ

■ ವಿಜಯಸಾಕ್ಷಿ ಸುದ್ದಿ, ಧಾರವಾಡ

ಪಹಣಿಗಳಿಗೆ ಆಧಾರ್ ಜೋಡಣೆ ಸಂದರ್ಭದಲ್ಲಿ ಜಿಲ್ಲೆಯ ಸಾವಿರಾರು ಖಾತೆಗಳಲ್ಲಿ ವಾರಸುದಾರರ ಪೌತಿ ಎಂದು ಗುರುತಿಸಲಾದ ಜಮೀನುಗಳ ಪಹಣಿಗಳನ್ನು ವಾರಸುದಾರರಿಗೆ ಉಚಿತವಾಗಿ ಖಾತೆ ಮಾಡುವ ಉದ್ದೇಶದಿಂದ ಇ-ಪೌತಿ ಅಂದೋಲನವನ್ನು ಜಿಲ್ಲೆಯಲ್ಲಿ ಆರಂಭಿಸಲಾಗಿದೆ. ಜುಲೈ 24ರಿಂದ ಆಗಸ್ಟ್ 2ರವರೆಗೆ 10 ದಿನಗಳ ವಿಶೇಷ ಇ-ಪೌತಿ ಆಂದೋಲನವನ್ನು ಹಮ್ಮಿಕೊಳ್ಳಲಾಗಿದ್ದು, ಸಾರ್ವಜನಿಕರು ಇದರ ಸದುಪಯೋಗ ಪಡೆದುಕೊಳ್ಳಬೇಕೆಂದು ಜಿಲ್ಲಾಧಿಕಾರಿ ದಿವ್ಯ ಪ್ರಭು ತಿಳಿಸಿದ್ದಾರೆ.

ಈ ಕುರಿತು ಪ್ರಕಟಣೆ ನೀಡಿರುವ ಅವರು, ರಾಜ್ಯ ಕಂದಾಯ ಸಚಿವರು ರಾಜ್ಯದ ಎಲ್ಲಾ ಜಿಲ್ಲೆಗಳಲ್ಲಿ ಇ-ಪೌತಿ ತಂತ್ರಾಂಶವನ್ನು ವಿಸ್ತರಿಸಲು ನಿರ್ದೇಶನ ನೀಡಿದ್ದಾರೆ. ಧಾರವಾಡ ಜಿಲ್ಲೆಯಲ್ಲಿ ಈಗಾಗಲೇ ಪಹಣಿ



ಪತ್ರಿಕೆಗಳಿಗೆ ಆಧಾರ್ ಜೋಡಣೆ ಮಾಡುವ ಕಾರ್ಯ ಪ್ರಗತಿಯಲ್ಲಿದ್ದು, ಸದರಿ ಕಾರ್ಯದಲ್ಲಿ ಈವರೆಗೂ ಶೇ. 87.33ರಷ್ಟು ಪ್ರಗತಿಯನ್ನು ಸಾಧಿಸಲಾಗಿದೆ ಎಂದು ತಿಳಿಸಿದ್ದಾರೆ.

ವಿಶೇಷ ಇ-ಪೌತಿ ಆಂದೋಲನದ ಸಂದರ್ಭದಲ್ಲಿ ಪೌತಿ ಎಂದು ಗುರುತಿಸಲಾದ ಪಹಣಿ ಪತ್ರಿಕೆಗಳ ಇ-ಪೌತಿ ಕಾರ್ಯಕ್ಕೆ ಅವಶ್ಯಕ ದಾಖಲೆಗಳೊಂದಿಗೆ ಸಾರ್ವಜನಿಕರು ಸಂಬಂಧಿಸಿದ ಗ್ರಾಮ ಆಡಳಿತ ಅಧಿಕಾರಿಗಳ ಕಛೇರಿಯಲ್ಲಿ ಅರ್ಜಿಯನ್ನು ಸಲ್ಲಿಸಿ, ಉಚಿತವಾಗಿ ಖಾತೆ ಬದಲಾವಣೆ ಮಾಡಿಸಿಕೊಳ್ಳಬಹುದು ಎಂದು ಜಿಲ್ಲಾಧಿಕಾರಿ ದಿವ್ಯ ಪ್ರಭು ತಿಳಿಸಿದ್ದಾರೆ.

## ಮುಂದುವರೆದ ಕರಡಿ ಪತ್ತೆ ಕಾರ್ಯ

■ ವಿಜಯಸಾಕ್ಷಿ ಸುದ್ದಿ, ರೋಣ

ಮಾರನಬಸರಿ ಗ್ರಾಮದಲ್ಲಿ ಮಂಗಳವಾರ ಕಾಣಿಸಿಕೊಂಡಿದ್ದ ಕರಡಿ ಹಿಡಿಯಲು ಅರಣ್ಯ ಇಲಾಖೆಯ ಅಧಿಕಾರಿಗಳು ಹಾಗೂ ಸಿಬ್ಬಂದಿಗಳು ಕಾರ್ಯಾಚರಣೆ ನಡೆಸಿದ್ದು, ಸತತ ಸುರಿಯುತ್ತಿರುವ ಮಳೆಯಿಂದ ಬುಧವಾರ ಸಹ ಡ್ರೋನ್ ಹಾರಾಟವನ್ನು ಸ್ಥಗಿತಗೊಳಿಸಲಾಯಿತು.

ಅರಣ್ಯಾಧಿಕಾರಿ ಅನ್ವರ ಕೋಲಾರ ನೇತೃತ್ವದ ತಂಡ ಮಾರನಬಸರಿ, ಜಕ್ಕಲಿ, ಹೊಸಳ್ಳಿ ಗ್ರಾಮಗಳ ಸರಹದ್ದಿನ ಹಳ್ಳಗಳಲ್ಲಿ ಶೋಧ ಕಾರ್ಯ ನಡೆಸಿದರೂ ಕರಡಿ ಇರುವ ಬಗ್ಗೆ ಖಚಿತ ಮಾಹಿತಿ ಲಭ್ಯವಾಗಲಿಲ್ಲ. ಬಿಡದೇ ಸುರಿಯುತ್ತಿರುವ ಮಳೆಯಿಂದ ಕರಡಿ ಹೆಜ್ಜೆ ಗುರುತುಗಳೂ ಸಹ ಕಾಣದಾಗಿದ್ದು, ಕರಡಿ ಹುಡುಕುವ ಕಾರ್ಯಕ್ಕೆ ತೊಡಕಾಗಿದೆ.



ಮಾರನಬಸರಿ ಗ್ರಾಮದಿಂದ ನರೇಗಲ್ಲ ಸಂಪರ್ಕ ಕಲ್ಪಿಸುವ ಮಧ್ಯದಲ್ಲಿ ಬರುವ ಹಳ್ಳದ ಎಡ ಭಾಗದಲ್ಲಿ ಕಲ್ಲು ಬಂಡೆಗಳು ಮತ್ತು ದಟ್ಟವಾದ ಮುಳ್ಳಿನ ಕಂಟಿಗಳು ಬೆಳೆದು ನಿಂತಿದ್ದು, ಅರಣ್ಯ ಇಲಾಖೆಯ ಅಧಿಕಾರಿಗಳು ಇದೇ ಸ್ಥಳದಲ್ಲಿ ಸತತ ಮೂರು ಗಂಟೆಗಳ ಕಾಲ ಕರಡಿಗಾಗಿ ಹುಡುಕಾಟ ನಡೆಸಿದರು. ಈ ಹಿಂದೆ ಇದೇ ಸ್ಥಳದಲ್ಲಿ ಚಿರತೆ ಕಾಣಿಸಿಕೊಂಡು, ಗಜೇಂದ್ರಗಡ ಭಾಗದ ಬೆಟ್ಟದಲ್ಲಿ ಸೆರೆ ಸಿಕ್ಕಿತ್ತು ಎನ್ನುವುದು ಗಮನಾರ್ಹ.

ಸತತವಾಗಿ ಮಳೆ ಸುರಿಯುತ್ತಿದ್ದು, ಹಿರಿಯ ಅಧಿಕಾರಿಗಳ ಮಾರ್ಗದರ್ಶನದಲ್ಲಿ ಕಾರ್ಯಾಚರಣೆ ಮುಂದುವರೆಸಿದ್ದೇವೆ. ನಿರಂತರ ಮಳೆಯಿಂದ ಹೆಜ್ಜೆ ಗುರುತುಗಳ ಬಗ್ಗೆ ಮಾಹಿತಿ ಸಿಗುತ್ತಿಲ್ಲ ಎಂದು ರೋಣ ಅರಣ್ಯಾಧಿಕಾರಿ ಅನ್ವರ ಕೋಲಾರ ಪ್ರತಿಕ್ರಿಯಿಸಿದ್ದಾರೆ.

## ರಂಗಾಯಣದಲ್ಲಿ 'ಅಕ್ಷರೋತ್ಸವ-2025' ಕಾರ್ಯಕ್ರಮ




■ ವಿಜಯಸಾಕ್ಷಿ ಸುದ್ದಿ, ಧಾರವಾಡ

ಅಕ್ಷರ ದೀಪ ಫೌಂಡೇಶನ್, ಅಕ್ಷರ ದೀಪ ಪ್ರಕಾಶನ ಗದಗ, ಸ್ನೇಹಜೀವಿ ಫೌಂಡೇಶನ್ ಕರ್ನಾಟಕ ಇವರ ಸಹಯೋಗದಲ್ಲಿ ಅಕ್ಷರೋತ್ಸವ-2025 ಕಾರ್ಯಕ್ರಮವು ಧಾರವಾಡದ ರಂಗಾಯಣದಲ್ಲಿ ವಿಜೃಂಭಣೆಯಿಂದ ಜರುಗಿತು.

ಸಮಾರಂಭದ ಉದ್ಘಾಟಿಸಿದ ಡಾ. ಎಸ್.ಜಿ. ಅಂಟಿನಮಠ ಹಾಗೂ ಡಾ. ಯಾಕೊಳ್ಳಿ ಮಾತನಾಡಿ, ಅಕ್ಷರ ದೀಪ ವೇದಿಕೆಯ ಸಮಾಜಮುಖಿ ಕಾರ್ಯಗಳು ನಿರಂತರವಾಗಿ ಜರುಗುವುದರೊಂದಿಗೆ ಕನ್ನಡ ನಾಡಿನ ವೈಭವದ ಮೌಲ್ಯಗಳನ್ನೂ ಸಹ ಬಹುಕಾಲ ಜೀವಂತವಾಗಿರಿಸಬೇಕೆಂದು ತಿಳಿಸಿದರು. ಅಧ್ಯಕ್ಷತೆ ವಹಿಸಿದ್ದ ಡಾ. ರಾಮಕೃಷ್ಣ ಶಿರೂರು ಮೂಡಬಿದಿರೆ ಮಾತನಾಡಿ, ಅಕ್ಷರ ದೀಪ ಫೌಂಡೇಶನ್ ಕಾರ್ಯ, ಸಾಧನೆ ಹಾಗೂ ಕಾರ್ಯಕ್ರಮಗಳು ಒಂದೇ ದಿನ ಜರುಗದೇ, ವರ್ಷದುದ್ದಕ್ಕೂ ಇಂತಹ ಸಾಮಾಜಿಕ, ಧಾರ್ಮಿಕ ಕಾರ್ಯಕ್ರಮಗಳು ಜರುಗುತ್ತಿರಬೇಕು. ಎಲೆಮರೆಯ ಕಾಯಿಯಂತಿರುವ ಅದೆಷ್ಟೋ ಜನರು ತಮ್ಮಲ್ಲಿ ಅಡಗಿರುವ ಸಾಹಿತ್ಯ ಹಾಗೂ ಪ್ರತಿಭೆಯ ಅನಾವರಣ ಈ ಮೂಲಕ ಆಗಬೇಕಿದೆ. ಶ್ರೀ ಪ್ರವೀಣಕುಮಾರ ಕನ್ಯಾಳರ ಕಾರ್ಯಕ್ಕೆ ನಾವೆಲ್ಲರೂ ಸಹಕಾರ ನೀಡೋಣ ಎಂದರು.

ರರೂಪಕ ಸಾಮ್ರಾಜ್ಯ ಚಕ್ರವರ್ತಿ ಕುಮಾರವ್ಯಾಸರ ಕುರಿತು ತ್ನಾ ಬದಿ ಉಪನ್ಯಾಸ ನೀಡಿದರು.

ಅಕ್ಷರ ದೀಪ ಯೂಟ್ಯೂಬ್ ಚಾನೆಲ್‌ನ್ನು ಉತ್ತರ ಕರ್ನಾಟಕದ ಖ್ಯಾತ ಯೂಟ್ಯೂಬ್ ಸ್ಟಾರ್ ಲಪಂಗರಾಜ ಲೋಕಾರ್ಪಣೆ ಮಾಡಿದರು. ಮುಖ್ಯ ಅತಿಥಿಗಳಾಗಿ ಆಗಮಿಸಿದ್ದ ಕವಿ, ಸಾಹಿತಿ ಗಣಪತಿ ಹೆಗಡೆ ದಾಂಡೇಲಿ, ನಟಿ ಹಾಗೂ ಗಾಯಕಿ ಕುಮಾರಿ ಸ್ಟೆಫಿ ಲೂಯಿಸ್ ಮಾತನಾಡಿದರು.

ಅಕ್ಷರ ದೀಪ ಫೌಂಡೇಶನ್ ಅಧ್ಯಕ್ಷ ಪ್ರವೀಣಕುಮಾರ ಕನ್ಯಾಳ ಪ್ರಾಸ್ತಾವಿಕವಾಗಿ ಮಾತನಾಡಿ, ತಮ್ಮ ಸಂಸ್ಥೆ ಇದುವರೆಗೆ ಮಾಡುತ್ತ ಬಂದಿರುವ ಕಾರ್ಯಸಾಧನೆ ಹಾಗೂ ಮುಂದಿನ ಗುರಿಗಳ ಬಗ್ಗೆ ತಿಳಿಸಿದರು. ಈ ಸಂದರ್ಭದಲ್ಲಿ ನಾಡಿನ ವಿವಿಧ ಕ್ಷೇತ್ರಗಳಲ್ಲಿ ಸಾಧನೆ ಮಾಡಿದ ಸಾಧಕರಿಗೆ ಕುಮಾರವ್ಯಾಸ ರಾಷ್ಟ್ರೀಯ ಪ್ರಶಸ್ತಿ ನೀಡಿ ಗೌರವಿಸಲಾಯಿತು.

ಅಕ್ಷರ ದೀಪ ಫೌಂಡೇಶನ್ ಧಾರವಾಡದ ಜಿಲ್ಲಾಧ್ಯಕ್ಷರಾದ ಅರ್ಚನಾ ಪಾಟೀಲ ಸ್ವಾಗತಿಸಿದರು. ವೈಷ್ಣವಿ ಪ್ರಾರ್ಥಿಸಿದರು. ಅಕ್ಷರ ದೀಪ ಫೌಂಡೇಶನ್ ಬೆಳಗಾವಿ ಜಿಲ್ಲಾಧ್ಯಕ್ಷರಾದ ರೋಹಿಣಿ ಮಿರ್ಜೆ ನಿರೂಪಿಸಿದರು. ಪ್ರವೀಣಕುಮಾರ ಕನ್ಯಾಳ ವಂದಿಸಿದರು.

### ರೋಟರಿ ಸಂಸ್ಥೆಯ ಪದಾಧಿಕಾರಿಗಳ ಪದಗ್ರಹಣ ಸಮಾರಂಭದಲ್ಲಿ ಮಲ್ಲಿಕಾರ್ಜುನ ಶ್ರೀಗಳು

# ಸೇವಾ ಧರ್ಮ ಪಾಲಿಸಲು ರೋಟರಿ ಮಾರ್ಗದರ್ಶಿ




■ ವಿಜಯಸಾಕ್ಷಿ ಸುದ್ದಿ, ಗದಗ

ರೋಟರಿ ಸಂಸ್ಥೆಯು ವಿಶ್ವದಲ್ಲಿ ಅನೇಕ ಸಾಮಾಜಿಕ ಹಾಗೂ ಶೈಕ್ಷಣಿಕ ಕೆಲಸಗಳನ್ನು ನಿರ್ವಹಿಸುತ್ತಿರುವುದು ಪ್ರಶಂಸನೀಯ ಕಾರ್ಯವಾಗಿದೆ. ಇಂತಹ ಕೆಲಸಗಳನ್ನು ಸಂಸ್ಥೆ ಸದಾ ಮುಂದುವರೆಸಬೇಕು. ವಿಶ್ವದಲ್ಲಿ ಸೇವಾ ಧರ್ಮವನ್ನು ಪಾಲಿಸಲು ರೋಟರಿ ಮಾರ್ಗದರ್ಶಿಯಾಗಿದೆಯೆಂದು ಹಿರೇಮಠದ ಷಟಸ್ಥಲ ಬ್ರಹ್ಮ ಶ್ರೀ ಮಲ್ಲಿಕಾರ್ಜುನ ಶಿವಾಚಾರ್ಯ ಶ್ರೀಗಳು ಆಶೀರ್ವಚನ ನೀಡಿದರು.

ರೋಟರಿ ಸಂಸ್ಥೆ ಗದಗ-ಬೆಟಗೇರಿಯ ನೂತನ ಪದಾಧಿಕಾರಿಗಳ ಅಧಿಕಾರ ಹಸ್ತಾಂತರ ಸಮಾರಂಭದ ಸಾನ್ನಿಧ್ಯ ವಹಿಸಿ ಶ್ರೀಗಳು ಮಾತನಾಡಿದರು.

ಡಾ. ಪ್ರಾಣೇಶ ಜಹಗಿರದಾರ್ ಮಾತನಾಡಿದರು. ರೊ. ಮಹೇಶ ಕುಂದ್ರಾಳಹಿರೇಮಠ ಪ್ರಾರ್ಥನಾ ಗೀತೆ ಹಾಡಿದರು. ಸಮಾರಂಭದ ಅಧ್ಯಕ್ಷತೆ ವಹಿಸಿದ್ದ ರೊ.ಡಾ. ಆರ್.ಬಿ. ಉಪ್ಪಿನ ಸ್ವಾಗತಿಸಿದರು. ರೊ. ಸಂತೋಷ ಅಕ್ಕಿ ರೋಟರಿ ಕೈಗೊಂಡ ಕಾರ್ಯಕ್ರಮದ ಸಂಕ್ಷಿಪ್ತ ವರದಿ ನೀಡಿದರು. ಡಾ. ಉಮೇಶ ಪುರದ, ರೊ. ವಿಶ್ವನಾಥ ಯಳಮಲಿ, ರೊ. ಡಾ. ವಿನಯ ಟಿಕಾರೆ ಅತಿಥಿಗಳನ್ನು ಪರಿಚಯಿಸಿದರು. ಡಾ. ಜಿ.ಬಿ. ಪಾಟೀಲ ಹಾಗೂ ರೊ. ಮಹಾಂತೇಶ ಬಾತಾಖಾನಿ ನೂತನ ಅಧ್ಯಕ್ಷರು ಹಾಗೂ ಕಾರ್ಯದರ್ಶಿಗಳನ್ನು ಸಭೆಗೆ ಪರಿಚಯಿಸಿದರು. ಗದಗ ರೆವೆನ್ಯೂ ಜಿಲ್ಲೆಯ ಅಸಿಸ್ಟಂಟ್ ಗವರ್ನರ್ ರೊ. ವ್ಹಿ.ಕೆ. ಗುರುಮಠ ವೇದಿಕೆಯಲ್ಲಿದ್ದರು. ರೊ. ಡಾ. ರಾಜೇಂದ್ರ ಗಚ್ಚಿನಮಠ 2025-26ರ ರೋಟರಿ ಯೋಜನೆಯ ಕುರಿತು ಸಂಕ್ಷಿಪ್ತ ಮಾಹಿತಿ ನೀಡಿದರು.

ಈ ಸಮಾರಂಭದಲ್ಲಿ ಗದಗ ಚೇಂಬರ್ ಆಫ್ ಕಾಮರ್ಸ್ ಮತ್ತು ಇಂಡಸ್ಟ್ರೀಸ್ ಅಧ್ಯಕ್ಷ ತಾತನಗೌಡ ಪಾಟೀಲ, ಇನ್ನರ್ ವ್ಹೀಲ್ ಸಂಸ್ಥೆ ಗದಗ-ಬೆಟಗೇರಿಯ ಅಧ್ಯಕ್ಷರಾದ ಅಶ್ವಿನಿ ಜಗತಾಪ, ಕಾರ್ಯದರ್ಶಿಗಳಾದ ಶಿವಲೀಲಾ ಅಕ್ಕಿ, ಸಂಸ್ಥೆಯ ಸದಸ್ಯರಾದ ರೊ. ಶೇಖರ ಡಿ.ಸಜ್ಜನರ, ರೊ. ಡಾ. ರಾಜಶೇಖರ ಬಳ್ಳಾರಿ, ರೊ.ಡಾ. ವ್ಹಿ.ಸಿ. ಕಲ್ಮಠ, ರೊ. ಚನ್ನವೀರಪ್ಪ ಹುಣಶಿಕಟ್ಟಿ, ರೊ. ಅಕ್ಷಯ ಶೆಟ್ಟಿ, ರೊ. ಅಶೋಕ ಅಕ್ಕಿ, ರೊ. ಶ್ರೀಧರ ಧರ್ಮಾಯತ, ರೊ. ಚಂದ್ರಮೌಳಿ ಜಾಲಿ, ರೊ. ಶೈಲೇಂದ್ರ ಬಿರಾದಾರ, ರೊ. ಶಿವಾಚಾರ್ಯ ಹೊಸಳ್ಳಿಮಠ, ರೊ. ನರೇಶ ಜೈನ, ರೊ. ಅನಿಲ ಹಂದ್ರಾಳ, ರೊ. ಡಾ. ಕಮಲಾಕ್ಷಿ ಅಂಗಡಿ ಮುಂತಾದವರಿದ್ದರು. ರೊ. ಶ್ರೀಧರ ಸುಲ್ತಾನಪೂರ ಹಾಗೂ ರೊ. ಬಾಲಕೃಷ್ಣ ಕಾಮತ್ ಕಾರ್ಯಕ್ರಮ ನಿರ್ವಹಿಸಿದರು. ರೊ. ಸುರೇಶ ವೀರಪ್ಪ ಕುಂಬಾರ ವಂದಿಸಿದರು.

> ಸಂಸ್ಥೆಯ ನೂತನ ಅಧ್ಯಕ್ಷರಾಗಿ ರೊ. ಡಾ. ರಾಜೇಂದ್ರ ಕಾಶೀನಾಥ ಗಚ್ಚಿನಮಠ ಹಾಗೂ ಕಾರ್ಯದರ್ಶಿಯಾಗಿ ರೊ. ಸುರೇಶ ವೀರಪ್ಪ ಕುಂಬಾರ ಪದಗ್ರಹಣ ಮಾಡಿದರು. ಅಧಿಕಾರ ಹಸ್ತಾಂತರ ಸಮಾರಂಭಕ್ಕೆ ಇನ್‌ಸ್ಟಾಲಿಂಗ್ ಆಫಿಸರ್ ಆಗಿ ಆಗಮಿಸಿದ ರೊ. ಪಿಡಿಜಿ. ಡಾ. ಪ್ರಾಣೇಶ ಜಹಗೀರದಾರ್ ನಿಕಟ ಪೂರ್ವ ಅಧ್ಯಕ್ಷರಾದ ರೊ. ಡಾ. ಆರ್.ಬಿ. ಉಪ್ಪಿನರಿಂದ ಅಧ್ಯಕ್ಷ ಸ್ಥಾನವನ್ನು ಡಾ. ರಾಜೇಂದ್ರ ಕಾಶೀನಾಥ ಗಚ್ಚಿನಮಠರಿಗೆ ಹಸ್ತಾಂತರಿಸಿದರು.

VIJAYA SAKSHI KANNADA DAILY MORNING Editor, Printer, Publisher, & Owned by : Hussainsab M. Shareefanavar, H.No. 130/154, Balaji Nagar, Near Ring Road, Gadag-582103, Dist : Gadag- Karnataka Printed at : Sai Printing Press, Near Joda Maruti Temple, Gadag-582101, Dist : Gadag- Karnataka